₹ 4 | ಪುಟ: 4 | ಸಂಪುಟ: 4 | ಸಂಚಿಕೆ 91 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 | Issue: 91 | Wednesday, 24, MAY, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

## ಭಾರತದಲ್ಲಿ ಯಾವುದಕ್ಕೂ ಕೊರತೆಯಿಲ್ಲ, ಆಟೋಮೊಬೈಲ್ ಕ್ಷೇತ್ರದಲ್ಲಿ 3ನೇ ಸ್ಥಾನ: ಸಿಡ್ನಿಯಲ್ಲಿ ಪ್ರಧಾನಿ ಮೋದಿ

ಸಿಡ್ನಿ: ಆರ್ಥಿಕತೆಯಲ್ಲಿ ಭಾರತ ಅಭಿವೃದ್ಧಿ ಪಥದಲ್ಲಿ ಸಾಗುತ್ತಿದೆ. ಆಟೋಮೊಬೈಲ್ ಕ್ಷೇತ್ರದಲ್ಲಿ ಭಾರತ ಇಡೀ ಜಗತ್ತಿನಲ್ಲಿಯೇ ಮೂರನೇ ಸ್ಥಾನದಲ್ಲಿದ್ದು, ಇಡೀ ಜಗತ್ತು ಈಗ ಭಾರತದತ್ತ ತಿರುಗಿ ನೋಡುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಿಡ್ನಿಯ ಖುಡೋಸ್ ಬ್ಯಾಂಕ್ ಅರೇನಾ ಸ್ಟೇಡಿಯಂ ತುಂಬಾ ಕಿಕ್ಕಿರಿದು ತುಂಬಿದ ಅನಿವಾಸಿ ಭಾರತೀಯರನ್ನು ದ್ದೇಶಿಸಿ ಮಾತನಾಡಿದ ಪ್ರದಾನಿ ಮೋದಿ, ಭಾರತದಲ್ಲಿ ಸಾಮರ್ಥ್ಯ, ಸಂಪನ್ಮೂಲಕ್ಕೆ ಕೊರತೆ ಇಲ್ಲ, ಭಾರತ ಟ್ಯಾಲೆಂಟ್ ಪ್ಯಾಕ್ಟರಿ ಆಗಿದೆ ಎಂದರು.

ಜಾಗತಿಕ ಆರ್ಥಿಕತೆಯಲ್ಲಿ ಮುಂಚೂಣಿ ರಾಷ್ಟ್ರವೆಂದು ಐಎಂಎಫ್ ಪರಿಗಣಿಸಿದೆ. ಇಂದು ಹಲವಾರು ದೇಶಗಳಲ್ಲಿ ಬ್ಯಾಂಕಿಂಗ್ ವ್ಯವಸ್ಥೆ ತೊಂದರೆಯಲ್ಲಿದೆ ಆದರೆ ಭಾರತದ ಬ್ಯಾಂಕ್‌ಗಳ ಬಲವನ್ನು ಎಲ್ಲೆಡೆ ಪ್ರಶಂಸಿಸಲಾಗುತ್ತಿದೆ: 100 ವರ್ಷಗಳಿಗೊಮ್ಮೆ ಎದುರಾಗುವ ಆರ್ಥಿಕ ಬಿಕ್ಕಟ್ಟಿನ ಮಧ್ಯೆ ಭಾರತ



ಕಳೆದ ವರ್ಷ ದಾಖಲೆಯ ರಫ್ತು ಮಾಡಿದೆ. ನಮ್ಮ ವಿದೇಶೀ ವಿನಿಮಯ ಹೊಸ ಎತ್ತರಕ್ಕೆ ಏರುತ್ತಿದೆ. ಜಾಗತಿಕ ಒಳಿತಿಗಾಗಿ ಭಾರತ ಹೇಗೆ ಕೆಲಸ ಮಾಡುತ್ತಿದೆ ಎಂಬುದಕ್ಕೆ ನಮ್ಮ ಡಿಜಿಟಲ್ ತಂತ್ರಜ್ಞಾನದ ಪಾಲಿದೆ. ಭಾರತದ ಫಿನ್‌ಟೆಕ್ ಕ್ರಾಂತಿಯ ಬಗ್ಗೆ ನಿಮಗೆ ಚೆನ್ನಾಗಿ ತಿಳಿದಿದೆ ಎಂದರು.

2014 ರಲ್ಲಿ ಇಲ್ಲಿಗೆ ಬಂದಾಗ ಮತ್ತೆ ಬರುವುದಾಗಿ ಭರವಸೆ ನೀಡಿದ್ದೆ. ಅದರಂತೆ ಈಗ ಮತ್ತೊಮ್ಮೆ ಸಿಡ್ನಿಯಲ್ಲಿದ್ದೇನೆ. ಈ ಹಿಂದೆ, ಭಾರತ ಮತ್ತು ಆಸ್ಟ್ರೇಲಿಯಾ ಸಂಬಂಧವನ್ನು ಕಾಮನ್‌ವೆಲ್ತ್, ಕ್ರಿಕೆಟ್ ಮತ್ತು ಕರಿಗಳಿಂದ ವ್ಯಾಖ್ಯಾನಿಸಲಾಗುತಿತ್ತು. ನಂತರ 'ಪ್ರಜಾಪ್ರಭುತ್ವ, ಅನಿವಾಸಿ ಭಾರತೀಯರು ಮತ್ತು ದೋಸ್ತಿಯಿಂದ ವ್ಯಾಖ್ಯಾನಿಸಲಾಗಿದೆ ಎಂದರು. ಸಂಬಂಧವು ಇಂಧನ, ಆರ್ಥಿಕತೆ ಮತ್ತು ಶಿಕ್ಷಣದ ಮೇಲೆ ಅವಲಂಬಿತವಾಗಿದ್ದರೂ ಉಭಯ ದೇಶಗಳ ಸಂಬಂಧವು ಇದನ್ನು ಮೀರಿದೆ ಅದು ಪರಸ್ಪರ ನಂಬಿಕೆ ಮತ್ತು ಪರಸ್ಪರ ಗೌರವವಾಗಿದೆ ಎಂದು ತಿಳಿಸಿದರು.

ಮಾರ್ಚ್‌ನಲ್ಲಿ ಕೈಗೊಂಡಿದ್ದ ಭಾರತ ಪ್ರವಾಸ ಮರೆಯಲಾಗದ ಕ್ಷಣವಾಗಿತ್ತು. ಹೋದಲ್ಲೆಲ್ಲಾ, ನಾನು ಆಸ್ಟ್ರೇಲಿಯಾ ಮತ್ತು ಭಾರತದ ಜನರ ನಡುವಿನ ಆಳವಾದ ಸಂಬಂಧವನ್ನು ಅನುಭವಿಸಿದೆ. ನೀವು ಭಾರತವನ್ನು ಅರ್ಥಮಾಡಿಕೊಳ್ಳಲು ಬಯಸಿದರೆ, ರೈಲು ಮತ್ತು ಬಸ್‌ನಲ್ಲಿ ಪ್ರಯಾಣಿಸಿ ಎಂದು ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಹೇಳಿದರು.

ಇದಕ್ಕೂ ಮುನ್ನಾ ವೇದ ಮಂತ್ರಗಳ ಜಯ ಘೋಷದೊಂದಿಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಸಾಂಪ್ರದಾಯಿಕ ವಾಗಿ ಸ್ವಾಗತಿಸಲಾಯಿತು.

## ಮುಂಗಾರು ಪೂರ್ವ ಮಳೆಯಿಂದ ಹಾನಿ: ಬೆಳೆ ರಕ್ಷಣೆಗೆ ಮುಂಜಾಗ್ರತಾ ಕ್ರಮ ವಹಿಸಿ; ಡಿಸಿ, ಸಿಇಒಗಳಿಗೆ ಮುಖ್ಯಮಂತ್ರಿ ಸೂಚನೆ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ವಿಡಿಯೋ ಸಂವಾದ ನಡೆಸಿ, ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ರಾಜ್ಯದಲ್ಲಿ ಜೂನ್ ನಲ್ಲಿ ಮುಂಗಾರು ಮಳೆ ಆರಂಭವಾಗಲಿದ್ದು, ಏಪ್ರಿಲ್ ತಿಂಗಳಿನಲ್ಲಿಯೇ ಮುಂಗಾರು ಪೂರ್ವ ಗಾಳಿ ಮಳೆಯಿಂದ ಮರಗಳು ಬಿದ್ದು ಹೋಗಿವೆ. ಸಿಡಿಲು, ಆಲಿಕಲ್ಲು ಮಳೆಯಿಂದ ಪ್ರಾಣ ಕಳೆದುಕೊಂಡಿದ್ದಾರೆ. ಇಂತಹ ಅನಾಹುತಗಳನ್ನು ತಡೆಗಟ್ಟಲು ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು ಎಂದು ಸೂಚಿಸಲಾಯಿತು.

ಜಿಲ್ಲಾಧಿಕಾರಿಗಳ ಬಳಿಯೇ ಅನುದಾನ ಲಭ್ಯವಿದೆ.



ಅಗತ್ಯವಿದ್ದರೆ, ಕೇಳಬೇಕು. ಪರಿಹಾರ ಕ್ರಮ ಕೈಗೊಳ್ಳಲು ತೊಂದರೆ ಇಲ್ಲ. ಕೃಷಿ ಅಧಿಕಾರಿಗಳು ಬಿತ್ತನೆ ಚಟುವಟಿಕೆಗೆ ಅಗತ್ಯವಿರುವ ಬೀಜ, ಗೊಬ್ಬರ, ಕೀಟನಾಶಕಗಳನ್ನು ಒದಗಿಸಬೇಕು. ಹಾವೇರಿ ಗೋಲಿಬಾರಿನಂತಹ ಘಟನೆ ಮರುಕಳಿಸಬಾರದು. ಮಳೆಯಿಂದ ಮರಗಳು, ವಿದ್ಯುತ್ ಕಂಬಗಳು ಧರೆಗುರಳಿ ಬಿದ್ದರೆ ಕೂಡಲೇ ಅವುಗಳನ್ನು ತೆರವುಗೊಳಿಸಬೇಕು. ಟ್ರಾನ್ಸ್‌ಫಾರ್ಮರ್, ಸೇತುವೆ ಹಾಳಾಗಿದ್ದರೆ, ಶಾಲಾ ಕೊಠಡಿಗಳು ಶಿಥಿಲ ಆಗಿದ್ದರೆ ಅಗತ್ಯ ಕ್ರಮ ಕೈಗೊಳ್ಳಬೇಕು. ಮುನ್ನೆಚ್ಚರಿಕೆ ತೆಗೆದುಕೊಂಡರೆ ಅನಾಹುತ ತಪ್ಪಿಸಲು ಸಾಧ್ಯವಾಗುತ್ತದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ಕಚೇರಿಯಲ್ಲೇ ಕುಳಿತು ಕೆಲಸ ಮಾಡಿದರೆ ಆಗದು. ಫೀಲ್ಡ್‌ಗೆ ಹೋಗಬೇಕು. ಕುಳಿತಲ್ಲೇ ಕುಳಿತು ಪರಿಣಾಮಕಾರಿಯಾಗಿ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಲು ಸಾಧ್ಯವಾಗದು. ಅದಕ್ಕೇ ಮುಂಚಿತವಾಗಿ ಸಭೆ ಕರೆಯಲಾಗಿದೆ. ಯಾವುದೇ ಕಾರಣಕ್ಕೆ ಕರ್ತವ್ಯ ಲೋಪ ಆಗಬಾರದು. ಬೇಜವಾಬ್ದಾರಿತನದಿಂದ ಅನಾಹುತಗಳಾದರೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದು.

ನೆಪ ಹೇಳಿಕೊಂಡು ಪರಿಹಾರ ಕ್ರಮ ವಿಳಂಬ ಮಾಡುವುದು ಸರಿಯಲ್ಲ. ಯಾವುದೇ ಕಾರಣಕ್ಕೆ ಲೋಪ ಆಗಬಾರದು. ಒಂದು ವೇಳೆ ಲೋಪ ಎಸಗಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಜನ ಸರ್ಕಾರದಿಂದ ಬದಲಾವಣೆ ಬಯಸಿದ್ದಾರೆ.

ಸರ್ಕಾರಕ್ಕೆ ಹೊಸ ಇಮೇಜ್ ಕೊಡಲೇಬೇಕು. ಜನರ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುವ ಸರ್ಕಾರ ಬಂದಿದೆ ಎಂಬ ಸಂದೇಶ ಹೋಗಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳು, ಸಿಇಒಗಳದ್ದು ಜವಾಬ್ದಾರಿಯುತ ಸ್ಥಾನ. ಜೊತೆಗೆ ಪೊಲೀಸ್ ವರಿಷ್ಠಾಧಿಕಾರಿಗಳ ಹೊಣೆಯೂ ಪ್ರಮುಖವಾದದ್ದು. ಕರ್ನಾಟಕದ ಜನತೆ ಬದಲಾವಣೆ ಬಯಸಿದ್ದಾರೆ.

ಆಲಸ್ಯ ಬಿಟ್ಟು ಕೆಲಸ ಮಾಡಿ. ಬಹಳ ಜನ ಜಿಲ್ಲಾಧಿಕಾರಿಗಳು ತಾಲ್ಲೂಕುಗಳಿಗೆ ಭೇಟಿ ನೀಡಿರುವುದಿಲ್ಲ. ಇನ್ನು ಮುಂದೆ ಇಂತಹುದಕ್ಕೆ ಅವಕಾಶವಿಲ್ಲ. ಜಿಲ್ಲಾಧಿಕಾರಿಗಳು ಕಡ್ಡಾಯವಾಗಿ ಕ್ಷೇತ್ರ ಭೇಟಿ ಮಾಡಬೇಕು ಎಂದು ಮುಖ್ಯಮಂತ್ರಿ ಸೂಚಿಸಿದರು.

ಕಳೆದ ಕೆಲವು ವರ್ಷಗಳಿಂದ ಪ್ರವಾಹ ನೋಡುತ್ತಾ ಇದ್ದೀರಿ. ಹವಾಮಾನ ಇಲಾಖೆ ಸಂಪರ್ಕ-ಮುನ್ಸೂಚನೆ ಅರಿತು ಕೆಲಸ ಮಾಡಿ. ಪ್ರವಾಹ ನಿಯಂತ್ರಣಕ್ಕೆ ಅಗತ್ಯ ಸಲಕರಣೆಗಳನ್ನು ಸಿದ್ಧಪಡಿಸಿಟ್ಟುಕೊಳ್ಳಿ. ಪ್ರವಾಹ ಬರುವ ಪ್ರದೇಶಗಳಲ್ಲಿ ಮುನ್ನೆಚ್ಚರಿಕೆ ತೆಗೆದುಕೊಳ್ಳಿ. ಬೆಳೆಹಾನಿ ಮಾಹಿತಿ ಇರಬೇಕು. ಅನುದಾನ ಅಗತ್ಯವಿದ್ದಲ್ಲಿ ಮನವಿ ಸಲ್ಲಿಸಿ ಬಿಡುಗಡೆ ಮಾಡಿಸಿಕೊಳ್ಳಬೇಕು ಎಂದು ಮುಖ್ಯಮಂತ್ರಿ ತಿಳಿಸಿದರು.

## ನಟ ಶಿವರಾಜಕುಮಾರ್ ಗೆ ಅಭಿನಂದನೆ ಸಲ್ಲಿಸಿದ ಸುರ್ಜೆವಾಲ




ಬೆಂಗಳೂರು: ವಿಧಾನಸಭೆ ಚುನಾವಣೆ ವೇಳೆ ಕಾಂಗ್ರೆಸ್ ಪರವಾಗಿ ಪ್ರಚಾರ ನಡೆಸಿದ ಹಿರಿಯ ನಟ ಶಿವರಾಜ್ಕುಮಾರ್ ಅವರ ಮನೆಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಭೇಟಿ ನೀಡಿ ಅಭಿನಂದನೆ ಸಲ್ಲಿಸಿದ್ದಾರೆ.

ಚುನಾವಣೆ ಘೋಷಣೆಯಾದ ಬಳಿಕ ನಡೆದ ಬೆಳವಣಿಗೆಯಲ್ಲಿ ಶಿವರಾಜ್ಕುಮಾರ್ ಅವರ ಪತ್ನಿ ಗೀತಾ ಕಾಂಗ್ರೆಸ್ ಸೇರ್ಪಡೆಯಾಗಿದ್ದರು.

ಬಳಿಕ ಶಿವರಾಜ್ಕುಮಾರ್ ಸೊರಬ, ಹುಬ್ಬಳ್ಳಿ-ಧಾರವಾಡ ಕೇಂದ್ರ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಪರ ಪ್ರಚಾರ ನಡೆಸಿದ್ದರು.

ಈ ಹಿನ್ನೆಲೆಯಲ್ಲಿ ಶಿವರಾಜ್ಕುಮಾರ್ ಅವರ ಮನೆಗೆ ಭೇಟಿ ನೀಡಿದ ಸುರ್ಜೆವಾಲ, ಜನಪ್ರಿಯ ನಟರು, ಉತ್ತಮ ಮಾನವತಾವಾದಿ ಶಿವರಾಜ್ಕುಮಾರ್ ಅವರನ್ನು ಭೇಟಿಯಾಗಿರುವುದು ಸಂತೋಷವಾಗಿದೆ. ಪ್ರಜಾಪ್ರಭುತ್ವದ ಹಬ್ಬವಾಗಿರುವ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರ ಗಳಿಸಲು ಅವರ ಪ್ರಚಾರ ಮತ್ತು ಪಾಲ್ಗೊಳ್ಳುವಿಕೆ ಸಹಕಾರಿಯಾಗಿದೆ.

ಈಗಾಗಲೇ ಗೀತಾ ಶಿವರಾಜ್ಕುಮಾರ್ ಕಾಂಗ್ರೆಸ್ ಕುಟುಂಬದ ವರಾಗಿದ್ದು, ಅಭಿವೃದ್ಧಿಯಲ್ಲಿ ಪತಿಯ ಹಾದಿಯಲ್ಲಿ ಜೊತೆಯಾಗಿದ್ದಾರೆ ಎಂದು ತಿಳಿಸಿದ್ದಾರೆ.



## UPSC-2022 ಫಲಿತಾಂಶ ಪ್ರಕಟ: ಬೆಳಗಾವಿಯ ಮೂವರ ಸಾಧನೆ

ಬೆಳಗಾವಿ: ಗೋಕಾಕ್ ತಾಲೂಕಿನ ಅರಭಾವಿಮಠ ಗ್ರಾಮದ ಯುವತಿ ಶೃತಿ ಯರಗಟ್ಟಿ ಯುಪಿಎಸ್ಸಿ- AIR 362, ಕಾಗವಾಡ ತಾಲೂಕಿನ ಉಗಾರ ಗ್ರಾಮದ ಆದಿನಾಥ್ ತಮದಡ್ಡಿ -AIR 566 ಹಾಗು ಶಮಣೆವಾಡಿ ಗ್ರಾಮದ ಅಕ್ಷಯ್ ಪಾಟೀಲ AIR 746 ರ್ಯಾಂಕ್ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

## ಸ್ಪೀಕರ್ ಸ್ಥಾನಕ್ಕೆ ಯು. ಟಿ. ಖಾದರ್ ನಾಮಪತ್ರ ಸಲ್ಲಿಕೆ



ವಿಧಾನಸೌಧ: ವಿಧಾನಸಭೆ ಸ್ಪೀಕರ್ ಸ್ಥಾನಕ್ಕೆ ಹಿರಿಯ ಕಾಂಗ್ರೆಸ್ ಶಾಸಕ ಯು. ಟಿ. ಖಾದರ್ ನಾಮಪತ್ರ ಸಲ್ಲಿಸಿದ್ದಾರೆ.

ಖಾದರ್ ಅವರ ಹೆಸರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಸ್ತಾಪಿಸಿ, ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಅನುಮೋದಿಸಿದ ಅರ್ಜಿಯನ್ನು ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ವಿಶಾಲಾಕ್ಷಿ ಅವರಿಗೆ ಮಂಗಳವಾರ ಸಲ್ಲಿಸಲಾಯಿತು.

ಎಚ್.ಕೆ. ಪಾಟೀಲ. ಆರ್. ವಿ. ದೇಶಪಾಂಡೆ ಸೇರಿದಂತೆ ಹಿರಿಯ ಶಾಸಕರ ಪೈಕಿ ಒಬ್ಬರನ್ನು ಸಭಾಧ್ಯಕ್ಷರನ್ನಾಗಿ ಮಾಡಲು ಕಾಂಗ್ರೆಸ್ ವರಿಷ್ಠರು ಮುಂದಾಗಿದ್ದರು. ಆದರೆ ಅವರು ಯಾರೂ ಸ್ಥಾನ ವಹಿಸಿಕೊಳ್ಳಲು ಮುಂದಾಗದ ಕಾರಣ ಖಾದರ್ ಅವರನ್ನು ಆಯ್ಕೆ ಮಾಡಲಾಗಿದ

ಪಕ್ಷದ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರ ಸಲಹೆಯಂತೆ ಸಭಾಧ್ಯಕ್ಷ ಸ್ಥಾನ ವಹಿಸಿಕೊಳ್ಳಲು ಖಾದರ್ ಒಪ್ಪಿದ್ದಾರೆ.

## ಮುಂಗಾರು ಪೂರ್ವ ಮಳೆಗೆ 52 ಜನರು ಸಾವು; ಮೃತರ ಕುಟುಂಬಕ್ಕೆ ಪರಿಹಾರ ಘೋಷಣೆ



ಬೆಂಗಳೂರು: ಏಪ್ರಿಲ್, ಮೇ ತಿಂಗಳಲ್ಲಿ ಮುಂಗಾರು ಪೂರ್ವ ಮಳೆಯಾಗುತ್ತದೆ. ಈ ಬಾರಿ ವಾಡಿಕೆಗಿಂತ ಶೇ.10ರಷ್ಟು ಹೆಚ್ಚು ಮಳೆಯಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ. ಡಿಸಿ, ಸಿಇಒಗಳ ಜೊತೆ ಸಭೆ ಬಳಿಕ ಸಿಎಂ ಗೃಹ ಕಚೇರಿ ಕೃಷ್ಣಾದಲ್ಲಿ ಸುದ್ದಿಗೋಷ್ಠಿ ನಡೆಸಿದ ಸಿಎಂ ಸಿದ್ದರಾಮಯ್ಯ, ಮುಂಗಾರು ಪೂರ್ವ ಮಳೆಗೆ 52 ಜನರು ಮೃತಪಟ್ಟಿದ್ದಾರೆ. ಮೃತರ ಕುಟುಂಬಗಳಿಗೆ 5 ಲಕ್ಷ ಪರಿಹಾರ ಘೋಷಿಸಲಾಗಿದೆ ಎಂದರು.

ಮಳೆಯಿಂದಾಗಿ 332 ಜಾನುವಾರುಗಳು ಸಾವನ್ನಪ್ಪಿವೆ. 814 ಮನೆಗಳಿಗೆ ಹಾನಿಯಾಗಿವೆ. ಮೃತ ಜಾನುವಾರುಗಳಿಗೆ ಪರಿಹಾರ ನೀಡುವಂತೆ ಸೂಚಿಸಲಾಗಿದೆ. ಮಳೆಹಾನಿ ಬಗ್ಗೆ ಪರಿಶೀಲಿಸಿ ಪರಿಹಾರ ನೀಡುವಂತೆ ಹೇಳಲಾಗಿದೆ ಎಂದು ತಿಳಿಸಿದರು.

ಹವಾಮಾನ ಇಲಾಖೆ ವರದಿ ಪ್ರಕಾರ ಜೂನ್ 9ರಿಂದ ಮುಂಗಾರು ಮಳೆ ಆರಂಭವಾಗಲಿದೆ. ಮುಂಗಾರು ಬಿತ್ತನೆಗೆ ರೈತರು ಸಿದ್ಧರಾಗಿ. ಬಿತ್ತನೆಬೀಜ, ರಸಗೊಬ್ಬರ, ಕೀಟನಾಶಕ ಸಂಗ್ರಹಣೆಗೆ ಈಗಾಗಲೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

## ಎಂ.ಬಿ. ಪಾಟೀಲ್‌ಗೆ ನೇರ ಎಚ್ಚರಿಕೆ ಕೊಟ್ಟ ಡಿಕೆ ಸುರೇಶ್



ಬೆಂಗಳೂರು: 5 ವರ್ಷ ಸಿದ್ದರಾಮಯ್ಯ ಸಿಎಂ ಎಂಬ ಎಂ.ಬಿ. ಪಾಟೀಲ್ ಅವರ ಹೇಳಿಕೆಗೆ ಸಂಸದ ಡಿಕೆ ಸುರೇಶ್ ಆಕ್ರೋಶ ವ್ಯಕ್ತಪಡಿಸಿದ್ದು, ನೇರ ಎಚ್ಚರಿಕೆ ನೀಡಿದ್ದಾರೆ.

ಸಿದ್ದರಾಮಯ್ಯ ಪೂರ್ಣಾವಧಿಯ ಸಿಎಂ ಎಂದು ಎಂ.ಬಿ.ಪಾಟೀಲ್ ಹೇಳಿಕೆಯೊಂದನ್ನು ನೀಡಿದ್ದರು. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಸುರೇಶ್ ಅವರು, ನಾನು ಎಂ.ಬಿ.ಪಾಟೀಲ್ ಹೇಳಿಕೆಗೆ ಉತ್ತರ ಕೊಡಬಲ್ಲೆ. ಆದರೆ ಅದು ಈಗ ಬೇಡ ಎಂದು ಕಿಡಿಕಾರಿದರು.

ಎಂ.ಬಿ.ಪಾಟೀಲ್ ಹೇಳಿಕೆಗೆ ನಿಮಗೆ ಹೆಚ್ಚಿನ ಮಾಹಿತಿ ಬೇಕೆಂದರೆ ಸುರ್ಜೇವಾಲಾ ಅವರ ಹತ್ತಿರ ಮಾತನಾಡಿ. ನಾನು ಅವರ ಹೇಳಿಕೆಗೆ ತೀಕ್ಷ್ಣವಾಗಿ ಉತ್ತರ ಕೊಡಬಲ್ಲೆ. ಆದರೆ ಈಗ ಅದು ಬೇಡ. ನನಗೂ ಎಂ.ಬಿ.ಪಾಟೀಲ್ ಹೇಳಿಕೆಗೆ ಉತ್ತರ ನೀಡಲು ಬರುತ್ತದೆ ಎಂದು ಖಡಕ್ ಆಗಿ ಹೇಳಿದ್ದಾರೆ.

## ಪೊಲೀಸ್ ಅಧಿಕಾರಿಗಳನ್ನ ತರಾಟೆ ತೆಗೆದುಕೊಂಡ ಡಿಸಿಎಂ ಡಿಕೆಶಿ

ಬೆಂಗಳೂರು: ಪೊಲೀಸ್ ಇಲಾಖೆಯನ್ನು ಕೇಸರಿಕರಣ ಮಾಡಲು ಹೊರಟಿದ್ದೀರಾ? ನಮ್ಮ ಸರ್ಕಾರದಲ್ಲಿ ಇದಕ್ಕೆ ಅವಕಾಶ ಕೊಡುವುದಿಲ್ಲ ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಉನ್ನತ ಪೊಲೀಸ್ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಉನ್ನತ ಪೊಲೀಸ್ ಅಧಿಕಾರಿಗಳ ಸಭೆಯಲ್ಲಿ, ಅಧಿಕಾರಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಮಂಗಳೂರಿನಲ್ಲಿ ಪೊಲೀಸರೇ ಕೇಸರಿ ಶಾಲು ಹಾಕುತ್ತೀರಿ ಅಂದರೆ ಹೇಗೆ? ಈ ಸಭೆಗೂ ಕೇಸರಿ ಶಾಲು ಹಾಕಿಕೊಂಡ ಬರಬೇಕಾಗಿತ್ತು. ನಮ್ಮ ಸರ್ಕಾರದಲ್ಲಿ ಪೊಲೀಸ್ ಇಲಾಖೆಯನ್ನು ಕೇಸರೀಕರಣ ಮಾಡಲು ನಾವು ಬಿಡುವುದಿಲ್ಲ ಎಂದರು.

ಪಿಎಸ್‌ಐ ಅಕ್ರಮದಲ್ಲಿ ಒಬ್ಬ ಎಡಿಜಿಪಿ ಪೇಪರ್ ತಿದ್ದುತ್ತಾರೆ ಅಂದರೆ ಇಲಾಖೆ ಎಷ್ಟು ಕೆಟ್ಟು ಹೋಗಿದೆ ಎಂಬುದು ತಿಳಿಯುತ್ತದೆ. ಪೊಲೀಸ್ ಇಲಾಖೆ ಘನತೆಯನ್ನು ನೀವು ಹಾಳು ಮಾಡಿದ್ದೀರಿ. ಇದನ್ನು ನಾವು ಸಹಿಸುವುದಿಲ್ಲ. ನಮ್ಮ ಸರ್ಕಾರದಲ್ಲಿ ಎಲ್ಲವೂ ಸ್ವಚ್ಛವಾಗಿರಬೇಕು. ಜನ ದೊಡ್ಡ ಬದಲಾವಣೆ ನಿರೀಕ್ಷೆ



ಮಾಡಿದ್ದಾರೆ. ಅದರಂತೆ ಪೊಲೀಸ್ ಇಲಾಖೆಯಲ್ಲಿ ಬದಲಾವಣೆ ಆಗಬೇಕು. ನೀವು ಯಾರೂ ನಮಗೆ ಹಣ ಕೊಡುವುದು ಬೇಡ. ಉತ್ತಮವಾಗಿ ಕೆಲಸ ಮಾಡಿದರೆ ಸಾಕು ಎಂದು ಹಿರಿಯ ಪೊಲೀಸರಿಗೆ ಡಿಕೆ ಶಿವಕುಮಾರ್ ಖಡಕ್ ಸಂದೇಶ ರವಾನಿಸಿದರು.

ಕಳೆದ 4 ವರ್ಷ ನೀವು ಸರ್ಕಾರದಲ್ಲಿ ಏನು ಮಾಡಿದ್ದೀರಿ ಎಂಬುದು ಗೊತ್ತಿದೆ. ನಿಮ್ಮ ಆ ವರ್ತನೆ ನಮ್ಮ ಸರ್ಕಾರದಲ್ಲಿ ನಡೆಯಲಾರದು.

ನನ್ನ, ಸಿದ್ದರಾಮಯ್ಯರ ಜೊತೆ ಹೇಗೆ ನಡೆದುಕೊಂಡಿದ್ದೀರಿ ಗೊತ್ತಿದೆ. ಉರಿಗೌಡ, ನಂಜೇಗೌಡ ಪ್ರಕರಣದಲ್ಲಿ ಏನಾಯ್ತು ಗೊತ್ತಿದೆ. ಸಿದ್ದರಾಮಯ್ಯರನ್ನು ಹೊಡೆದು ಹಾಕಬೇಕು ಅಂದರೂ ಅವರ ಮೇಲೆ ಕೇಸ್ ಹಾಕಿಲ್ಲ ನೀವು.

ಅಷ್ಟು ದೊಡ್ಡ ಪ್ರಕರಣ ಆದರೂ ಕೇಸ್ ಹಾಕದೇ ನಮ್ಮ ವಿರುದ್ಧ ನಡೆದುಕೊಂಡಿದ್ದಿರಿ. ಇವೆಲ್ಲ ನಮ್ಮ ಸರ್ಕಾರದಲ್ಲಿ ನಡೆಯಲ್ಲ. ಪ್ರಾಮಾಣಿಕವಾಗಿ ಕೆಲಸ ಮಾಡಿದರೆ ನಾವು ನಿಮ್ಮ ಜೊತೆ ಇರುತ್ತೇವೆ. ಈ ಸರ್ಕಾರದ ಮೇಲೆ ಜನ ನಂಬಿಕೆ ಇಟ್ಟಿದ್ದಾರೆ, ಅದನ್ನ ಉಳಿಸಿಕೊಳ್ಳಿ ಎಂದು ಹಿರಿಯ ಅಧಿಕಾರಿಗಳಿಗೆ ಡಿಕೆಶಿ ಸೂಚನೆ ನೀಡಿದರು.

## ಇಂದಿರಾ ಕ್ಯಾಂಟೀನ್ ಮತ್ತೆ ಆರಂಭ: ಸಿಎಂ ಸಿದ್ದರಾಮಯ್ಯ ಘೋಷಣೆ

ಬೆಂಗಳೂರು: ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ದಿನವೇ ತಾವು ಚುನಾವಣಾಪೂರ್ವದಲ್ಲಿ ನೀಡಿದ್ದ ಐದೂ ಗ್ಯಾರಂಟಿಗಳ ಕುರಿತಂತೆ ಆದೇಶ ಹೊರಡಿಸಿದ ಸಿದ್ದರಾಮಯ್ಯ, ಇಂದು ಮತ್ತೊಂದು ಭರವಸೆಯನ್ನು ಘೋಷಣೆ ಮಾಡಿದ್ದಾರೆ. ಅರ್ಥಾತ್, ಇಂದಿರಾ ಕ್ಯಾಂಟೀನ್ ಮತ್ತೆ ಆರಂಭಿಸುವುದಾಗಿ ಅವರು ಭರವಸೆ ನೀಡಿದ್ದಾರೆ.

ನಗರ-ಪಟ್ಟಣಗಳಲ್ಲಿರುವ ಮತ್ತು ಕಾರ್ಯನಿಮಿತ್ತ ನಗರಗಳಿಗೆ ಬರುವ ಬಡವರ ಹಸಿವು ತಣಿಸುವ ಸದುದ್ದೇಶದಿಂದ ನಮ್ಮ ಸರ್ಕಾರ




ಪ್ರಾರಂಭಿಸಿದ್ದ ಇಂದಿರಾ ಕ್ಯಾಂಟೀನ್ಗಳನ್ನು ಬಿಜೆಪಿ ಸರ್ಕಾರ ನಿರ್ಲಕ್ಷಿಸಿದ ಕಾರಣದಿಂದಾಗಿ ಕೆಲವು ಮುಚ್ಚಿವೆ, ಹಲವು ಮುಚ್ಚುವ ಸ್ಥಿತಿಯಲ್ಲಿವೆ ಎಂದು ಸಿದ್ದರಾಮಯ್ಯ ಬೇಸರ ವ್ಯಕ್ತಪಡಿಸಿದ್ದಾರೆ. ಗರೀಬಿ ಹಟಾವೋ" ಘೋಷಣೆ ಮೂಲಕ ಬಡತನ ನಿರ್ಮೂಲನಾ ಕಾರ್ಯವನ್ನು ಕಾಳಜಿಯಿಂದ ಮಾಡಿದ್ದ ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಹೆಸರಿನ ಇಂದಿರಾ ಕ್ಯಾಂಟೀನ್ಗಳನ್ನು ಮುಚ್ಚಲು ನಾವು ಅವಕಾಶ ನೀಡುವುದಿಲ್ಲ. ಅಗತ್ಯ ಸಂಪನ್ಮೂಲ ಒದಗಿಸಿ ಅವುಗಳನ್ನು ಪುನಶ್ಚೇತನಗೊಳಿಸುವುದಕ್ಕೆ ನಮ್ಮ ಸರ್ಕಾರ ಬದ್ಧವಾಗಿದೆ ಎಂದ ಸಿದ್ದರಾಮಯ್ಯ, ಅತಿ ಶೀಘ್ರದಲ್ಲೇ ಇಂದಿರಾ ಕ್ಯಾಂಟೀನ್ಗಳು ಸ್ವಸ್ಥ ಮತ್ತು ರುಚಿಕರ ಊಟ-ತಿಂಡಿಗಳೊಂದಿಗೆ ಜನರ ಸೇವೆ ಶುರು ಮಾಡಲಿವೆ ಎಂದೂ ಹೇಳಿದ್ದಾರೆ.

## ಮಾನನಷ್ಟ ಮೊಕದ್ದಮೆ: ಸಿಎಂ ಕೇಜ್ರಿವಾಲ್, ಸಂಸದ ಸಂಜಯ್ ಸಿಂಗ್ ಗೆ ಸಮನ್ಸ್ ಜಾರಿ



ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರ ಶೈಕ್ಷಣಿಕ ಪದವಿಗೆ ಸಂಬಂಧಿಸಿದಂತೆ ಗುಜರಾತ್ ವಿಶ್ವವಿದ್ಯಾಲಯ ದಾಖಲಿಸಿರುವ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯಲ್ಲಿ ಗುಜರಾತ್‌ನ ಅಹಮದಾಬಾದ್‌ನ ನ್ಯಾಯಾಲಯವು ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಮತ್ತು ಆಮ್ ಆದ್ಮಿ ಪಕ್ಷದ ರಾಜ್ಯಸಭಾ ಸದಸ್ಯ ಸಂಜಯ್ ಸಿಂಗ್ ಅವರಿಗೆ ಹೊಸದಾಗಿ ಸಮನ್ಸ್ ಜಾರಿ ಮಾಡಿದೆ. ಇದರಲ್ಲಿ ಇಬ್ಬರಿಗೂ ಜೂನ್ 7ರಂದು ಹಾಜರಾಗುವಂತೆ ಸೂಚಿಸಲಾಗಿದೆ.

ಮೇ 23ರಂದು ತಮ್ಮ ಮುಂದೆ ಹಾಜರಾಗುವಂತೆ ಇಬ್ಬರಿಗೂ ನೋಟಿಸ್ ನೀಡಲಾಗಿತ್ತು. ಆದರೆ ಅವರು ನ್ಯಾಯಾಲಯಕ್ಕೆ ಹಾಜರಾಗಿಲ್ಲದ ಕಾರಣ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ಎಸ್.ಜೆ.ಪಾಂಚಾಲ್ ಅವರು ಕೇಜ್ರಿವಾಲ್ ಮತ್ತು ಸಿಂಗ್ ಅವರಿಗೆ ಸಮನ್ಸ್ ಜಾರಿ ಮಾಡಿದ್ದಾರೆ.

ಪ್ರಧಾನಿ ಮೋದಿಯವರ ಶೈಕ್ಷಣಿಕ ಪದವಿಗೆ ಸಂಬಂಧಿಸಿದಂತೆ 'ವ್ಯಂಗ್ಯ' ಮತ್ತು 'ಅವಹೇಳನಕಾರಿ' ಹೇಳಿಕೆಗಳಿಗಾಗಿ ಗುಜರಾತ್ ವಿಶ್ವವಿದ್ಯಾನಿಲಯದ ವಿರುದ್ಧ ಕ್ರಿಮಿನಲ್ ಮಾನನಷ್ಟ ಮೊಕದ್ದಮೆಯಲ್ಲಿ ಆಮ್ ಆದ್ಮಿ ಪಕ್ಷದ ಹಿರಿಯ ನಾಯಕರಿಗೆ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ಜಯೇಶ್ ಚೋವಾಟಿಯಾ ಅವರ ನ್ಯಾಯಾಲಯ ಸಮನ್ಸ್ ಜಾರಿ ಮಾಡಿರುವುದನ್ನು ಗಮನಿಸಬಹುದು.

ಎಎಪಿಯ ಗುಜರಾತ್ ಘಟಕದ ಕಾನೂನು ವಿಭಾಗದ ಮುಖ್ಯಸ್ಥ ಪ್ರಣಬ್ ಠಕ್ಕರ್ ಅವರು ಸೋಮವಾರ ಕೇಜ್ರಿವಾಲ್ ಮತ್ತು ಸಿಂಗ್ ಅವರಿಗೆ ನ್ಯಾಯಾಲಯ ನೀಡಿದ ಸಮನ್ಸ್‌ಗಳನ್ನು ಸ್ವೀಕರಿಸಿಲ್ಲ ಎಂದು ಹೇಳಿದ್ದಾರೆ.

ಗುಜರಾತ್ ವಿಶ್ವವಿದ್ಯಾನಿಲಯದ ವಕೀಲರು ಮಂಗಳವಾರ ಈ ವಿಷಯದ ಬಗ್ಗೆ ಹೊಸ ನ್ಯಾಯಾಧೀಶ ಎಸ್‌ಜೆ ಪಾಂಚಾಲ್ ಅವರಿಗೆ ಮಾಹಿತಿ ನೀಡಿದರು ಮತ್ತು ಅವರ ಹಿಂದಿನವರು ಆರೋಪಿಗಳಿಗೆ ಮೇ 23ರಂದು ನ್ಯಾಯಾಲಯಕ್ಕೆ ಹಾಜರಾಗಲು ಏಪ್ರಿಲ್ 15ರಂದು ನೋಟಿಸ್ ನೀಡಿದ್ದರು ಎಂದು ಹೇಳಿದರು. ನ್ಯಾಯಾಲಯಕ್ಕೆ ಯಾರೂ ಹಾಜರಾಗದ ಕಾರಣ, ಅವರು ಸಮನ್ಸ್ ಸ್ವೀಕರಿಸಿದ್ದಾರೆಯೇ ಅಥವಾ ಇಲ್ಲವೇ ಎಂಬುದು ಸ್ಪಷ್ಟವಾಗಿಲ್ಲ.

ಇದನ್ನು ನೋಡುವಂತೆ ನ್ಯಾಯಾಧೀಶರು ಸಿಬ್ಬಂದಿಗೆ ಸೂಚಿಸಿದರು. ನಂತರ ಕೇಜ್ರಿವಾಲ್ ಮತ್ತು ಸಿಂಗ್ ಅವರಿಗೆ ಸಮನ್ಸ್ ನೀಡುವಂತೆ ಸೂಚಿಸಿದರು.

## 25 ಕೋಟಿ ರೂ. ಅಂಬರ್ ಗ್ರೀಸ್ ಮಾರಾಟಕ್ಕೆ ಯತ್ನ: ಮೂವರ ಬಂಧನ



ಮೈಸೂರು: 25 ಕೋಟಿ ಬೆಲೆಬಾಳುವ ತಿಮಿಂಗಿಲದ ಅಪರೂಪದ ಅಂಬರ್ ಗ್ರೀಸ್ ಅನ್ನು ಎಚ್.ಡಿ.ಕೋಟೆ ಮತ್ತು ಜಿಲ್ಲಾ ಸೆನ್ ಪೊಲೀಸರು ವಶಕ್ಕೆ ಪಡೆದುಕೊಂಡಿದ್ದಾರೆ.

ಕಾರಿನಲ್ಲಿರಿಸಿ ಮಾರಾಟಕ್ಕೆ ಯತ್ನಿಸುತ್ತಿದ್ದ ವೇಳೆ ಮಿಂಚಿನ ಕಾರ್ಯಾಚರಣೆ ನಡೆಸಿದ ಪೊಲೀಸರು ಸುಮಾರು ಒಂಭತ್ತುಚಿದವರೆ ಕೆಜಿ ತಿಮಿಂಗಿಲ ವಾಂತಿ ಸಮೇತ ಮಾರಾಟ ಮಾಡುತ್ತಿದ್ದ ಮೂವರನ್ನು ಬಂಧಿಸಿದ್ದಾರೆ.

ಕೇರಳ ಮೂಲದ ಮೂವರು ಕೊಚ್ಚೀನ್ ಸಮುದ್ರದಿಂದ ಅಂಬರ್ ಗ್ರೀಸ್ ಅನ್ನು ತಂದಿರುವ ಮಾಹಿತಿ ಪೊಲೀಸರಿಗೆ ಲಭ್ಯವಾಗಿತ್ತು. ಇವರನ್ನು ಹಿಡಿಯಲು ಜಿಲ್ಲಾ ಎಸ್ಪಿ ಸೀಮಾ ಲಟ್ಕರ್, ಅಡಿಷನಲ್ ಎಸ್ಪಿ ನಂದಿನಿ, ಡಿವೈಎಸ್ ಪಿ ಮಹೇಶ್ ಮಾರ್ಗದರ್ಶನದಲ್ಲಿ ತಂಡ ರಚನೆ ಮಾಡಲಾಗಿತ್ತು. ಎಚ್.ಡಿ.ಕೋಟೆ ಇನ್ಸ್ ಪೆಕ್ಟರ್ ಶಬ್ಬೀರ್ ಹುಸೇನ್, ಮೈಸೂರು ಕ್ರೈಂ ಬ್ರಾಂಚ್ ಇನ್ಸ್ ಪೆಕ್ಟರ್ ಪುರುಷೋತ್ತಮ ತಂಡದಿಂದ ಕಾರ್ಯಾಚರಣೆ ನಡೆಸಿ ತಿಮಿಂಗಿಲ ವಾಂತಿಯನ್ನು ಮಾರಾಟ ಮಾಡಲು ಯತ್ನಿಸುತ್ತಿದ್ದ ಮೂವರನ್ನು ಬಂಧಿಸಿದ್ದಾರೆ.

ಅಂಬರ್ ಗ್ರೀಸ್ ವಿದೇಶದಲ್ಲೂ ಅಪಾರವಾದ ಬೇಡಿಕೆ ಇದ್ದು, ಅಧಿಕ ಬೆಲೆ ಕೂಡ ಇದೆ. ಸದ್ಯ ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದ್ದು, ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಕರೆದೊಯ್ದಿದ್ದಾರೆ. ಇನ್ನು ಎಚ್.ಡಿ.ಕೋಟೆ ಪೋಲೀಸರ ಮಿಂಚಿನ ಕಾರ್ಯಾಚರಣೆಗೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ಕಾಂಗ್ರೆಸ್ ನಲ್ಲಿಯೇ ಗೊಂದಲವಿದೆ: ಸಚಿವರ ಹೇಳಿಕೆಯಿಂದಲೆ ಗೊತ್ತಾಗುತ್ತಿದೆ: ಅರಗ ಜ್ಞಾನೇಂದ್ರ

ಬೆಂಗಳೂರು: ಸಿದ್ದರಾಮಯ್ಯ 5 ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ-ತ್ತಾರೆ ಎಂಬ ಸಚಿವ ಎಂ.ಬಿ.ಪಾಟೀಲ್ ಹೇಳಿಕೆ ರಾಜಕೀಯ ವಲಯದಲ್ಲಿ ಚರ್ಚೆಗೆ ಕರಣವಾಗಿದೆ.

ಅಧಿಕಾರ ಹಂಚಿಕೆ ಅಡಿಯಲ್ಲಿ ಸಿದ್ದರಾಮಯ್ಯ ಎರಡುವರೆ ವರ್ಷ ಹಾಗೂ ಡಿ.ಕೆ.ಶಿವಕುಮಾರ್ ಎರಡುವರೆ ವರ್ಷ ಮುಖ್ಯಮಂತ್ರಿಗಳಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಹೈಕಮಾಂಡ್ ನಿರ್ಧಾರ ಮಾಡಿದಂತೆ ಸಿಎಂ ಸಿದ್ದರಾಮಯ್ಯ ಪ್ರಮಾಣವಚನ ಸ್ವೀಕಾರ ಮಾಡಿ ಈಗ ಸಚಿವ ಸಂಪುಟ ವಿಸ್ತರಣೆವರೆಗೆ ಬಂದು ನಿಂತಿರುವಾಗ ಸಚಿವ ಎಂ.ಬಿ.ಪಾಟೀಲ್ ಅವರ ಹೇಳಿಕೆ ಗೊಂದಲಕ್ಕೆ ಕಾರಣವಾಗಿದೆ.

ಇದೇ ವಿಚಾರ ಈಗ ಬಿಜೆಪಿ ನಾಯಕರಿಗೆ ಕಾಂಗ್ರೆಸ್ ಸರ್ಕಾರವನ್ನು ಟೀಕಿಸಲು ಅಸ್ತ್ರವಾದಂತಾಗಿದೆ. ಮುಖ್ಯಮಂತ್ರಿ ವಿಚಾರವಾಗಿ ಕಾಂಗ್ರೆಸ್



ನಾಯಕರಲ್ಲಿಯೇ ಗೊಂದಲವಿದೆ ಎಂಬುದು ಸಚಿವರ ಹೇಳಿಕೆಯಿಂದಲೇ ಗೊತ್ತಾಗುತ್ತಿದೆ ಎಂದು ಹೇಳಿದ್ದಾರೆ.

ಮುಖ್ಯಮಂತ್ರಿ ವಿಚಾರದಲ್ಲಿ ಸಾಕಷ್ಟು ಗೊಂದಲವಿದೆ. ಪೂರ್ಣಪ್ರಮಾಣದಲ್ಲಿ ಸಚಿವ ಸಂಪುಟವೇ ಇನ್ನೂ ವಿಸ್ತರಣೆ ಆಗಿಲ್ಲ ಎಂದ ಟೀಕಿಸಿದ್ದಾರೆ.

# ಗುಡುಗು, ಸಿಡಿಲು ಬಡಿತ: ಸಾರ್ವಜನಿಕರಿಗೆ ಪ್ರಮುಖ ಸಲಹೆಗಳು

ಕೊಪ್ಪಳ : ಗುಡುಗು, ಸಿಡಿಲು ಬಡಿತ ಪ್ರತಿಕೂಲ ಪರಿಣಾಮಗಳ ಸಂದರ್ಭದಲ್ಲಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)ಯ ಸರ್ಕಾರದ ಉಪ ಕಾರ್ಯದರ್ಶಿಗಳು ಸುತ್ತೋಲೆ ಹೊರಡಿಸಿ ತಿಳಿಸಿದ ನಿಯಮಗಳನ್ನು ಸಾರ್ವಜನಿಕರು ಪಾಲನೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರು ತಿಳಿಸಿದ್ದಾರೆ.

ಕರ್ನಾಟಕದ ಹಲವು ಭಾಗಗಳಲ್ಲಿ ಗುಡುಗು, ಸಿಡಿಲು ಸಾಮಾನ್ಯವಾಗಿ ಮುಂಗಾರು ಪೂರ್ವದಲ್ಲಿ ಹಾಗೂ ಮುಂಗಾರಿನಲ್ಲಿ ಕಾಣಿಸಿಕೊಳ್ಳುತ್ತದೆ. ಸಿಡಿಲು ಸಾಮಾನ್ಯವಾಗಿ ಮಧ್ಯಾಹ್ನ ಅಥ–ವಾ ಸಂಜೆಯಲ್ಲಿ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಇಂತಹ ಸಂದರ್ಭದಲ್ಲಿ ಸಾರ್ವಜನಿಕರು ಸಲಹೆಗಳನ್ನು ಪಾಲನೆ ಮಾಡಬೇಕು. ಹೊರಗೆ ಹೋಗುವ ಅನಿವಾರ್ಯವಿದ್ದಲ್ಲಿ ಹವಾಮಾನ ಮುನ್ಸೂಚನೆ ಹಾಗೂ ಮುನ್ನೆಚ್ಚರಿಕೆಗಳನ್ನು ಕಾಮನ್ ಅಲರ್ಟಿಂಗ್ ಪ್ರೋಟೋಕಾಲ್ (ಸಿ.ಎ.ಪಿ) ಮುಖಾಂತರ ಬರುವ ಮಸೇಜ್‌ಗಳನ್ನು ಮೊಬೈಲ್‌ನಲ್ಲಿ ಗಮನಿಸಿಸಬೇಕು.

ಪ್ರತಿಕೂಲ ಹವಾಮಾನದ ಸಮಯದಲ್ಲಿ ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡಲು ಹಾಗೂ ಜಾನುವಾರುಗಳನ್ನು ಮೇಯಿಸಲು, ಮೀನುಗಾರಿಕೆ ಮತ್ತು ದೋಣಿಗಳನ್ನು ಓಡಿಸಲು ಅಥವಾ ಸಾಮಾನ್ಯ ಪ್ರಯಾಣಕ್ಕಾಗಿ ಮನೆಯಿಂದ ಹೊರಗೆ ಹೋಗದಿರುವುದು ಸೂಕ್ತ. ಗುಡುಗು, ಸಿಡಿಲಿನ ಸಂದರ್ಭದಲ್ಲಿ ಲೋಹದ ತಗಡನ್ನು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ, ಸುರಕ್ಷಿತವಾದ ಕಟ್ಟಡಗಳಲ್ಲಿ ಆಶ್ರಯ ಪಡೆಯಬೇಕು.

ಬೆಟ್ಟಗಳು, ಪರ್ವತ ಶ್ರೇಣಿಗಳು ಅಥವಾ ಶಿಖರಗಳಂತಹ ಎತ್ತರದ ಪ್ರದೇಶಗಳಿಂದ ಕೆಳಗೆ ಇಳಿದು ಪ್ರವಾಹ ಬರದಂತಹ ತಗ್ಗು ಪ್ರದೇಶವನ್ನು ಖಚಿತಪಡಿಸಿ ಆಶ್ರಯ ಪಡೆಯಬೇಕು. ನೀರಿನ ಮೂಲಗಳಾದ ಕೆರೆ ಮತ್ತು ನದಿಗಳಿಂದ ದೂರವಿರಬೇಕು. ವಿದ್ಯುತ್ ಉಪಕರಣ ಹಾಗೂ ವಿದ್ಯುತ್ ಸರಬರಾಜು ಮಾರ್ಗ, ದೂರವಾಣಿ ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ ಹಾಗೂ ರೈಲು ಹಳಿಗಳಿಂದ ದೂರವಿರಬೇಕು. ವಾಹನ ಚಾಲನೆಯಲ್ಲಿದ್ದರೆ ತಕ್ಷಣವೇ ವಾಹನ ನಿಲ್ಲಿಸಿ ವಾಹನದಲ್ಲಿಯೇ ಆಶ್ರಯ ಪಡೆಯಬೇಕು.



ಗುಡುಗು ಸಿಡಿಲಿನ ಸಮಯದಲ್ಲಿ ಗುಂಪಿನಲ್ಲಿದ್ದರೆ, ಅಪಾಯವನ್ನು ಕಡಿಮೆ ಮಾಡಲು ಸಾಕಷ್ಟು ಅಂತರ ಕಾಯ್ದುಕೊಳ್ಳಬೇಕು. ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಹೊರಾಂಗಣದಲ್ಲಿ ಕೆಲಸ ಮಾಡುತ್ತಿದ್ದರೆ ಮತ್ತು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಲು ಸಾಕಷ್ಟು ಸಮಯವಿಲ್ಲದಿದ್ದರೆ, ಎರಡು ಕಾಲುಗಳನ್ನು ಜೋಡಿಸಿ ಮಂಡಿಯೂರಿ ಕುಳಿತುಕೊಂಡು ತಲೆಯನ್ನು ಬಗ್ಗಿಸಿ ಕಿವಿಗಳನ್ನು ಮುಚ್ಚಿಕೊಳ್ಳಬೇಕು.

ವಿದ್ಯುತ್ ಅಥವಾ ಟೆಲಿಫೋನ್ ಕಂಬಗಳು ಅಥವಾ ಮರಗಳ ಕೆಳಗೆ ಆಶ್ರಯ ಪಡೆಯಬಾರದು. ಇವು ಮಿಂಚನ್ನು ಆಕರ್ಷಿಸುತ್ತವೆ. ಅರಣ್ಯ ಪುದೇಶದಲ್ಲಿದ್ದರೆ ಸಣ್ಣ ಮತ್ತು ಚಿಕ್ಕ ಮರಗಳ ಕೆಳಗೆ ಆಶ್ರಯ ಪಡೆಯಬೇಕು. ಲೋಹದ ವಸ್ತುಗಳನ್ನು ಬಳಸಬಾರದು ಮತ್ತು ಬೈಕುಗಳು, ವಿದ್ಯುತ್ ಅಥ–ವಾ ದೂರವಾಣಿ ಕಂಬಗಳು, ತಂತಿ ಬೇಲಿ, ಯಂತ್ರಗಳು ಇತ್ಯಾದಿಗಳಿಂದ ದೂರವಿರಬೇಕು. ಸಿಡಿಲು ಸಂದರ್ಭದಲ್ಲಿ ಮೊಬೈಲ್ ಫೋನ್‌ಗಳನ್ನು ಬಳಸಬಾರದು. ಕಬ್ಬಿಣದ ಸರಳುಗಳಿಂದ ಕೂಡಿದ ಛತ್ರಿಗಳನ್ನು ಬಳಸಬಾರದು.

ಗುಡುಗು ಸಿಡಿಲಿನ ಸಮಯದಲ್ಲಿ ಕಿಟಕಿ, ಬಾಗಿಲುಗಳನ್ನು ಮುಚ್ಚಿ ಬೆಂಕಿ ಮತ್ತು ವಿದ್ಯುತ್ ಶಕ್ತಿ ಸಂಪರ್ಕದಿಂದ ದೂರವಿರಬೇಕು. ಮಕ್ಕಳು, ವಯೋವೃದ್ಧರು ಹಾಗೂ ಜಾನುವಾರುಗಳನ್ನು ಸುರಕ್ಷಿತ ಸ್ಥಳಗಳಲ್ಲಿ ಇರುವಂತೆ ಗಮನಹ–ರಿಸಬೇಕು. ಹಾರುವ ಮತ್ತು ಅಪಘಾತಕ್ಕೆ ಕಾರಣವಾಗಬಹುದಾದ ಮರದ ಕಟ್ಟಿಗೆ ಅಥವಾ ಯಾವುದೇ ಅವಶೇಷಗಳನ್ನು ತೆಗೆದುಹಾಕಬೇಕು. ಸಿಡಿಲು ಸಂದರ್ಭದಲ್ಲಿ ಕಟ್ಟಡದ ಕೊಳಾಯಿ ಮತ್ತು ಲೋಹದ ಕೊಳವೆಗಳ ಮೂಲಕ ಹರಿಯುವ ಸಾಧ್ಯತೆ ಇರುವುದರಿಂದ, ಸಿಡಿಲು ಉಂಟಾಗುವ ಸಂದರ್ಭದಲ್ಲಿ ಸ್ನಾನ ಅಥವಾ ಶವರ್ ತೆಗೆದುಕೊಳ್ಳಬಾರದು. ಪಾತ್ರೆಗಳನ್ನು ತೊಳೆಯಬಾರದು, ಬಟ್ಟೆ ಒಗೆಯಬಾರದು, ವಿದ್ಯುತ್ ಸಂಪರ್ಕ ಹೊಂದಿರುವ ದೂರವಾಣಿಯನ್ನು ಬಳಸಬಾರದು. ಗುಡುಗು ಸಿಡಿಲಿನ ಮುನ್ಸೂಚನೆ ಅಥವಾ ಮುನ್ನೆಚ್ಚರಿಕೆ ಇದ್ದಲ್ಲಿ ಪಯಾಣ ಮುಂದೂಡಬೇಕು.

ಗುಡುಗು ಸಿಡಿಲಿನ ಸಮಯದಲ್ಲಿ, ಮೋಟರ್ ಸೈಕಲ್ ಅಥವಾ ಇನ್ನಿತರೆ ಯಾವುದೇ ತೆರೆದ ವಾಹನಗಳ ಸಂಚಾರವನ್ನು ಮಾಡಬಾರದು. ಆಟದ ಮೈದಾನ, ಉದ್ಯಾನವನಗಳು ಈಜುಕೊಳ ಮತ್ತು ಕಡಲ ತೀರಗಳಿಗೆ ಹೋಗುವುದನ್ನು ತಪ್ಪಿಸಬೇಕು. ದೋಣಿ ವಿಹಾರ ಅಥವಾ ಈಜುತ್ತಿದ್ದರೆ ಸಾಧ್ಯವಾದಷ್ಟು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯಬೇಕು. ಸಿಡಿಲಿನ ಸಂದರ್ಭದಲ್ಲಿ ವಾಹನ ಕಿಟಕಿಗಳನ್ನು ಮುಚ್ಚಿ ವಾಹನದ ಒಳಗೆ ಇರಬೇಕು.

ಅರಣ್ಯ, ಪುದೇಶದಿಂದ ಗಿಡ–ಗಡ್ಡೆಗಳಿಲ್ಲದ ಸ್ವಚ್ಛ ಪ್ರದೇಶದ ಕಡೆಗೆ ಚಲಿಸಬೇಕು ಹಾಗೂ ಮಿಂಚಿನ ಹೊಡೆತದಿಂದಾಗಿ ಕಾಡ್ಗಿಚ್ಚು ಸಂಭವಿಸುವ ಸಾಧ್ಯತೆಯಿರುತ್ತದೆ ಎನ್ನುವ ಕೆಲವು ಪ್ರಮುಖ ಸಲಹೆಗಳು ಮತ್ತು ಮುನ್ನೆಚ್ಚ–ರಿಕೆಗಳ ಬಗ್ಗೆ ಜಿಲ್ಲೆಯ ಸಾರ್ವಜನಿಕರು ಅರಿಯಬೇಕು ಎಂದು ಜಿಲ್ಲಾಧಿಕಾರಿಗಳು ಸಲಹೆ ನೀಡಿದ್ದಾರೆ.

# ವಿಜಯಪುರ: ಬೈಕಗಾಗಿ ಹಲ್ಲೆ



ವಿಜಯಪುರ: ಬೈಕ್ ವಿಷಯಕ್ಕೆ ಓರ್ವನ ಮೇಲೆ ಆಯುಧದಿಂದ ಹಲ್ಲೆ ಇಂತ ಒಂದು ಭಯಾನಕ ದೃಶ್ಯ ಸಿಸಿಟಿವಿಯಲ್ಲಿ ಸೆರೆ.

ಮನೆಯ ಎದುರು ನಿಲ್ಲಿಸಿದ ಬೈಕ್ ತೆಗೆಯುವ ವಿಚಾರಕ್ಕೆ ಓರ್ವನ ಮೇಲೆ ಆಯುಧದಿಂದ ಹಲ್ಲೆಗೈದಿರುವ ಘಟನೆ ವಿಜಯಪುರ ನಗರದ ಟಕ್ಕೆಯಲ್ಲಿ ಹಗಲು ಹೊತ್ತಿನಲ್ಲಿ ಇಂತ ಒಂದು ಘಟನೆ ನಡೆದಿದೆ. ಕಿರಣ ಗಜಕೋಶ ಹಲ್ಲೆಗೊಳಗಾದವರು. ಇನ್ನೂ ಬಸಯ್ಯ ಹಿರೇಮಠ, ಗೌರಮ್ಮ ಹಿರೇಮಠ, ಸಿದ್ದರಾಮಯ್ಯ ಹಿರೇಮಠ ಹಲ್ಲೆಗೈದಿದ್ದಾರೆ ಎಂದು ಕಿರಣ ಆರೋಪಿಸಿದ್ದಾನೆ.

ಹಲ್ಲೆಯ ವಿಡಿಯೋ ಪಕ್ಕದ ಮನೆಯ ಸಿಸಿಟಿವಿಯಲ್ಲಿ ವಿಡಿಯೋ ಸೆರೆಯಾಗಿದೆ.ಗಾಂಧಿಚೌಕ್ ಪೊಲೀಸ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ಸಂಭವಿಸಿದೆ.

## ಪ್ರಾದೇಶಿಕ ಅರಣ್ಯ ವಲಯ ಅಧಿಕಾರಿಯ ತಕ್ಷಣದಿಂದ ವಜಾಗೊಳಿಸಿ: ಎಚ್ ಹನುಮಂತ ಸೀಕಲ್



ಮಾನವಿ: ದಲಿತ ಸಂಘರ್ಷ ಸಮಿತಿ (ರಿ) ಸರ್ವ ಧರ್ಮಗಳ ಸಮಾನ ಮನಸ್ಕರರ ದಲಿತ ಒಕ್ಕೂಟ ಭೀಮ ಬಣ ರಾಜ್ಯಾಧ್ಯಕ್ಷರಾದ ಎಚ್ ಹನುಮಂತ ಸೀಕಲ್, ಇವರು ಜಿಲ್ಲಾಧಿಕಾರಿಗಳು ರಾಯಚೂರು ಇವರಿಗೆ ಮನವಿ ಪತ್ರ ಸಲ್ಲಿಸುವ ಮೂಲಕ ಮಾನವಿ ಪ್ರಾದೇಶಿಕ ಅರಣ್ಯ ವಲಯ ಅರಣ್ಯಾಧಿಕಾರಿ ಶ್ರೀ ಸುರೇಶ ನಾಯಕರವರು ಅಧಿಕಾರ ಸ್ವೀಕಾರ ಮಾಡಿದಾಗಿನಿಂದಲೂ ಮಾನವಿ ಪಟ್ಟಣದ ಮುಖ್ಯ ರಸ್ತೆಯಲ್ಲಿ, ಕಳೆದ ಅಧಿಕಾರಿ ರಾಜೇಶ ನಾಯಕರವರ ಅವಧಿಯಲ್ಲಿ ಬೆಳೆಸಿರುವ ಗಿಡಗಳು ಇಂದಿಗೂ ಒಂದು ಗಿಡಗಳು ಉಳಿಯದೇ ಇರುವುದು ದುರಾದೃಷ್ಟಕರವಾದ ಸಂಗತಿ ಯಾಕೆಂದರೆ, ಪ್ರಸ್ತುತ ಅಧಿಕಾರಿ ಶ್ರೀ ಸುರೇಶ ನಾಯಕರವರ ಕರ್ತವ್ಯ ಲೋಪ, ಬೇಜವಬ್ದಾರಿ ತನವೇ ಹಿಂದಿನ ಅಧಿಕಾರಿಗಳು ಬೆಳೆಸಿರುವ ಗಿಡಗಳನ್ನು ಉಳಿಸಿಕೊಂಡು ಹೋಗದೇ ಇರುವುದು ಮುಖ್ಯ ಕಾರಣವಾಗಿರುತ್ತದೆ.

ಅಲ್ಲದೇ ಸದರಿ ಸುರೇಶ ನಾಯಕರವರು ಕಛೇರಿಯಲ್ಲಿ ಯಾವಾಗಲೂ ಇರುವುದಿಲ್ಲ, ಅಲ್ಲದೇ ಕಛೇರಿಗೆ ಬಂದಂತಹ ಜನ ಸಾಮಾನ್ಯರಿಗೆ ಸಂಘಟನೆಯವರೊಂದಿಗೆ ಸರಿಯಾದ ರೀತಿಯಲ್ಲಿ ವರ್ತನೆ ಮಾಡದೆ ಬೇಕಾ ಬಿಟ್ಟಿ ಎಂಬಂತೆ ತಮ್ಮ ಮನಬಂದಂತೆ ಮಾತನಾಡುತ್ತಿದ್ದಾರೆ.

ಇದನ್ನು ಕೇಳಿದರೆ ನನಗೆ ನೀವ್ಯಾರು ಕೀಳುವುದಕ್ಕೆ!? ನನಗೆ ನಮ್ಮ ಮೇಲಾಧಿಕಾರಿಗಳು ಇದ್ದಾರೆಂದು ಗೂಂಡಾ ವರ್ತನೆ ಮೂಲಕ ಹೇಳುತ್ತಿದ್ದಾರೆ. ಅಲ್ಲದೇ ಸದರಿ ಸುರೇಶ ನಾಯಕರವರು ಕರ್ತವ್ಯಕ್ಕೆ ಹಾಜರಾದಾಗಿನಿಂದಲೂ ಮುಖ್ಯ ರಸ್ತೆಯಲ್ಲಿ ಅಥವಾ ಪಂಚಾಯತಿ ಮಟ್ಟದಲ್ಲಿ ಒಂದೇ ಒಂದು ಸಸಿಗಳನ್ನು ನೆಟ್ಟಿರುವ ಉದಾಹರಣೆಗಳು ಇರುವುದಿಲ್ಲ. ಅಲ್ಲದೇ ಅವರು ಈಗಾಗಲೇ ಬೆಳೆಸಿರುವ ಅಳಿದುಳಿದ ಗಿಡಗಳಿಗೆ ನೀರನ್ನೂ ಸಹ ಹಾಕದೇ ಒಣಗಿಸಿಬಿಟ್ಟಿರುತ್ತಾರೆ.

ಸದರಿ ಅಧಿಕಾರಿಗಳು ಕರ್ತವ್ಯಕ್ಕೆ ಹಾಜರಾದಾಗಿನಿಂದ ಇಲ್ಲಿಯವರೆಗೆ ಅವರ ಕಾರ್ಯ ಪ್ರಗತಿಯ ಬಗ್ಗೆ ಪರಿಶೀಲನೆ ಮಾಡಬೇಕು ಮತ್ತು ಅವರು ಇಲ್ಲಿಯವರೆಗೆ ಕೋಟ್ಯಾನುಗಟ್ಟಲೆ ಖರ್ಚು ಮಾಡಿರುವುದನ್ನು ತನಿಖೆಗೊಳಪಡಿಸಿ ತಪ್ಪಿತಸ್ಥ ಅಧಿಕಾರಿಯ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಹಾಗೂ ಇವರನ್ನು ತಕ್ಷಣದಿಂದ ವರ್ಗಾವಣೆ ಮಾಡುವ ಮೂಲಕ ಶಿಸ್ತುಕ್ರಮ ಜರುಗಿಸಬೇಕೆಂದು ಮನವಿ ಪತ್ರದ ಮೂಲಕ ಒತ್ತಾಯಿಸಿದ ಸರ್ವ ಧರ್ಮಗಳ ಸಮಾನ ಮನಸ್ಕರರ ದಲಿತ ಒಕ್ಕೂಟ ಭೀಮ ಬಣದ ರಾಜ್ಯಾಧ್ಯಕ್ಷರಾದ ಎಚ್ ಹನುಮಂತ ಸೀಕಲ್, ಪರಿಸರದ ಪ್ರಜ್ಞೆಯನ್ನು ಮೆರೆದಿರುತ್ತಾರೆ.

## ಶಿವಾನಂದ ಪಾಟೀಲಗೆ ಸಚಿವ ಸ್ಥಾನ ನೀಡಿ: ಕಾರ್ಯಕರ್ತರ ಆಗ್ರಹ



ನಿಡಗುಂದಿ: ಬಸವನ ಬಾಗೇವಾಡಿ ಮತಕ್ಷೇತ್ರದ ಶಾಸಕ ಶಿವಾನಂದ ಪಾಟೀಲ್ ಅವರು ಅಭಿವೃದ್ಧಿಯ ಹರಿಕಾರರು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡೀ , ಸರ್ವ ಧರ್ಮದವರನ್ನು ಸಮನಾಗಿ ಕಾಣುವ ಏಕೈಕ ಶಾಸಕರು ಅವರು ಬಬಲೇಶ್ವರ ಮತಕ್ಷೇತ್ರದಲ್ಲಿ ಎರಡು ಬಾರಿ ಆಯ್ಕೆಯಾಗಿ ನಂತರ ಬಸವನಬಾಗೇಡಿ ಮತಕ್ಷೇತ್ರದಿಂದ ಸತತವಾಗಿ 3ನೇ ಬಾರಿಗೆ ಆಯ್ಕೆಯಾಗಿದ್ದಾರೆ.

ಇವರು ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿ ರಾಜಕೀಯ ಕ್ಷೇತ್ರದಲ್ಲಿ ಪ್ರಬಲರು ಆಗಿದ್ದಾರೆ. ಸಮ್ಮಿಶ್ರ ಸರ್ಕಾರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾಗಿ ಕಾರ್ಯನಿರ್ವಹಿಸಿದ ಅನುಭವವನ್ನು ಕೂಡಾ ಹೊಂದಿದವರಾಗಿದ್ದಾರೆ. ಇವರಿಗೆ ಸಚಿವ ಸ್ಥಾನ ನೀಡಿದರೆ ರಾಜ್ಯದಲ್ಲಿ ಉತ್ತಮ ಆಡಳಿತ ನೀಡುತ್ತಾರೆ.

ರಾಜ್ಯ ಕಾಂಗ್ರೆಸ್ ಸರ್ಕಾರದ ನಾಯಕರಾದಂತಹ ಸಿದ್ದರಾಮಯ್ಯನವರು ಸಚಿವ ಸ್ಥಾನ ನೀಡಬೇಕೆಂದು ಪತ್ರಿಕಾಗೋಷ್ಠಿಯಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷ ಮಂಜುನಾಥ ಹಿರೇಮಠ ಗ್ರಾಮ ಪಂಚಾಯತಿ ಸದಸ್ಯರಾದ ಮುಬಾರಕ್ ಬಾಗಲಕೋಟ ಮಾಜಿ ತಾಲೂಕು ಪಂಚಾಯತಿ ಸದಸ್ಯರ ಮಲ್ಲು ರಾಠೂಡ.ಮಾಜಿ ಗ್ರಾಮ ಪಂಚಾಯತಿ ಸದಸ್ಯ ಮಾರುತಿ ವಡ್ಡರ. ರಾಜು ವಡ್ಡರ. ನಾಗಪ್ಪ ವಾಲಿಕಾರ. ಗುಂಡು ವಡ್ಡರ. ಶ್ರೀಕಾಂತ್ ಕುಂದರಗಿ .ಜಬ್ಬಾರ ಕೂಟ್ಯಾಳಕರ್. ಕಾಂತು ಇಟಗಿ ಸೇರಿದಂತೆ ಇತರರು ಒತ್ತಾಯಿಸಿದ್ದಾರೆ.

# ಸರ್ಕಾರಿ ಬಸ್ ಮತ್ತು ಕಂಟೇನರ್ ನಡುವೆ ಅಪಘಾತ: 6 ಸಾವು

ಮುಂಬೈ: ಮಹಾರಾಷ್ಟ್ರದ ಬುಲ್ಡಾಣಾ ಜಿಲ್ಲೆಯಲ್ಲಿ ಮಂಗಳವಾರ ಬೆಳಗಿನ ಜಾವ ಸರ್ಕಾರಿ ಬಸ್ ಮತ್ತು ಕಂಟೇನರ್ ಟ್ರಕ್ ನಡುವೆ ಸಂಭವಿಸಿದ ಅಪಘಾತದಲ್ಲಿ 6 ಮಂದಿ ಮೃತಪಟ್ಟು, 10 ಮಂದಿ ಗಾಯಗೊಂಡಿದ್ದಾರೆ.

ರಾಜಧಾನಿ ಮುಂಬೈನಿಂದ 450 ಕಿ.ಮೀ ದೂರದ ಹಳೆ ಮುಂಬೈ– ನಾಗ್ಪುರ ಹೆದ್ದಾ–ರಿಯ ಸಿಂಧ್‌ಖೇಡ್ ರಾಜಾ ಪಟ್ಟಣದ ಬಳಿ ಅಪಘಾತ ಸಂಭವಿಸಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಅಪಘಾತಕ್ಕೀಡಾದ ಮಹಾರಾಷ್ಟ್ರ ಸಾರಿಗೆ ಸಂಸ್ಥೆಯ ಬಸ್, ಪುಣೆಯಿಂದ ಬುಲ್ಡಾಣಾದ ಮೆಹ್ಕರ್ ಕಡೆಗೆ ಸಂಚರಿಸುತ್ತಿತ್ತು. ದುರ್ಘಟನೆಯಲ್ಲಿ 6 ಮಂದಿ ಮೃತಪಟ್ಟು, 10 ಜನರು ಗಾಯಗೊಂಡಿದ್ದಾರೆ' ಎಂದೂ ಅಧಿಕಾರಿ ಹೇಳಿದ್ದಾರೆ. ಮೃತರಲ್ಲಿ ನಾಲ್ವರು ಬಸ್ ಪ್ರಯಾಣಿಕರು, ಎರಡೂ ವಾಹನಗಳ ಚಾಲಕರು ಸೇರಿದ್ದಾರೆ. ಗಾಯಾಳುಗಳನ್ನು ಸಿಂಧ್‌ಖೇಡ್ ರಾಜಾ ಪಟ್ಟಣದ ಆಸ್ಪತ್ರೆಗೆ ದಾಖಲಿಸಲಾಗಿದೆ.

# ದೋರನಹಳ್ಳಿ ಸಂಸ್ಥಾನ ಹಿರೇಮಠಕ್ಕೆ ನೂತನ ಉತ್ತರಾಧಿಕಾರಿ ನಿಯುಕ್ತಿ

ಹುಬ್ಬಳ್ಳಿ: ಯಾದಗಿರಿ ಜಿಲ್ಲೆ ಶಹಪುರ ತಾಲೂಕಿನ ಶ್ರೀಮದ್ರಂಭಾಪುರಿ ಶಾಖಾ ದೋರನಹಳ್ಳಿ ಸಂಸ್ಥಾನ ಹಿರೇಮಠಕ್ಕೆ ಉಟಗಿ ಹಿರೇಮಠದ ಶಿವಪ್ರಸಾದ್ ಎಂಬ ವಟುವನ್ನು ನಿಯುಕ್ತಿಗೊಳಿಸಲಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಪ್ರಕಟಪಡಿಸಿದರು.

ಅವರು ವಿದ್ಯಾನಗರದ ಶ್ರೀ ರಂಭಾಪುರೀಶ ನಿವಾಸದಲ್ಲಿ ಜರುಗಿದ ಉತ್ತರಾಧಿಕಾರಿ ನಿಯುಕ್ತಿ ಸಮಾರಂಭದಲ್ಲಿ ಪಾಲ್ಗೊಂಡು ಆಶೀರ್ವಚನ ನೀಡಿದರು.

ದೋರನಹಳ್ಳಿ ಹಿರೇಮಠದ ಶ್ರೀ ವೀರಮಹಾಂತ ಶಿವಾಚಾರ್ಯರು ಅನಾರೋಗ್ಯದಿಂದ ಲಿಂಗೈಕ್ಯರಾದ ಪ್ರಯುಕ್ತ ಭಕ್ತರ ಸಂಕಲ್ಪಾನುಸಾರ ಅವ–ರಿಂದ ತೆರವಾದ ಸ್ಥಾನಕ್ಕೆ ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಮಹಾಪೀಠದ



ಗುರುಕುಲದಲ್ಲಿ ಸಂಸ್ಕೃತ ಸಾಹಿತ್ಯ, ವೇದಾ ವಿದ್ಯಾ ಪ್ರವೀಣ ಮತ್ತು ಮುಕ್ತ ವಿಶ್ವವಿದ್ಯಾಲಯದಿಂದ ಬಿ.ಕಾಂ. ಅಧ್ಯಯನಗೈದ ಸತ್ಕುಲ ಪ್ರಸೂತ ಶಿವಪ್ರಕಾಶ್ ಎಂಬ ವಟುವನ್ನು ನಿಯುಕ್ತಿಗೊಳಿಸಿ ಆದೇಶ ಪತ್ರವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಅನುಗ್ರಹಿಸಿದರು.

ಬರಲಿರುವ ಮಾಘ ಮಾಸದಲ್ಲಿ ಶ್ರೀ ಮಠದ ಜಾತ್ರಾ ಪೂರ್ವ ಸಮಾರಂಭದಲ್ಲಿ ನೂತನ ಶ್ರೀಗಳಿಗೆ 'ಶ್ರೀ ಷ॥ಬ್ರ॥ ರೇಣುಕ ವೀರ ಮಹಾಂತೇಶ ಶಿವಾಚಾರ್ಯ ಸ್ವಾಮಿಗಳು' ಎಂಬ ಅಭಿದಾನದಿಂದ ಶ್ರೀ ಗುರು ಪಟ್ಟಾಧಿಕಾರ ನೆರವೇರಿಸಲಾಗುವುದೆಂದರು.

ಈ ಅಪೂರ್ವ ಸಮಾರಂಭದಲ್ಲಿ ಚಿಕ್ಕಮಠದ ಶಿವಲಿಂಗ ರಾಜೇಂದ್ರ ಶಿವಾಚಾರ್ಯರು, ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯರು ಮತ್ತು ದೋರನಹಳ್ಳಿ ಶಿಷ್ಯ ಸದ್ಭಕ್ತರ ಪರವಾಗಿ ಆಗಮಿಸಿದ ನಿಂಗನಗೌಡ ಪೋಲೀಸ ಪಾಟೀಲ, ವೀರಭದ್ರಪ್ಪಗೌಡ ಪಸ್ಪೂಲ್, ದೇವೇಂದ್ರಪ್ಪಗೌಡ ಜೋಳದ, ಮಲ್ಲಿನಾಥ–ಗೌಡ ಮಲಗೊಂಡ, ತಿಪ್ಪಣ್ಣಸಾಹು ಆಂದೇಲೆ ತಮ್ಮನಗೌಡ ಜೋಳದ, ಸಂಗಣ್ಣ ಗುಡಿ, ನಿಂಗಣ್ಣ ಮಲಗೊಂಡ ಪಾಲ್ಗೊಂಡಿದ್ದರು.

# ಕಾರುಣ್ಯ ವೃದ್ಧಾಶ್ರಮಕ್ಕೆ ಮೈಲಾರ ಕುಟುಂಬದಿಂದ ಒಂದು ಲಕ್ಷ ದೇಣಿಗೆ

ಸಿಂಧನೂರು: ನಗರದ ವಳ ಬಳ್ಳಾರಿ ರಸ್ತೆಯಲ್ಲಿರುವ ಶ್ರೀಮಠ ಸೇವಾ ಟ್ರಸ್ಟ್ (ರಿ)ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಶ್ರೀ ಮಾದಯ್ಯ ಗುರುವಿನ ಶ್ರೀ ಚಿದಾನಂದಯ್ಯ ಗುರುವಿನ ಅಮೋಘ ರೇವಣಸಿದ್ದೇಶ್ವರ ಮಠ ತುರ್ವಿಹಾಳ ಇವರುಗಳ ದಿವ್ಯ ಸಾನಿಧ್ಯದಲ್ಲಿ ಸಿಂಧನೂರು ಹಾಲುಮತ ಸಮಾಜದ ಅಮರೇಶಪ್ಪ ಮೈಲಾರ ನಾಗವೇಣಿ ಮೈಲಾರ ದಂಪತಿಗಳ 40ನೇ ವರ್ಷದ ವಿವಾಹ ವಾರ್ಷಿಕೋತ್ಸವದ ಅಂಗವಾಗಿ ಒಂದು ಲಕ್ಷ ರೂಪಾಯಿ ದೇಣಿಗೆ ನೀಡಿದರು

ಈ ಕಾರ್ಯಕ್ರಮದಲ್ಲಿ ಕಾರುಣ್ಯ ಆಶ್ರಮದ ವತಿಯಿಂದ ಅಮರೇಶಪ್ಪ ನಾಗವೇಣಿ ದಂಪತಿಗಳನ್ನು ಸನ್ಮಾನಿಸಿ ಗೌರವಿಸಿ " ವಾತ್ಸಲ್ಯ ಆದರ್ಶ ದಂಪತಿಗಳು " ಎನ್ನುವ ಗೌರವಾನ್ವಿತ ಬಿರುದಿನ ಅಭಿದಾನವನ್ನು ಸಮರ್ಪಿಸಲಾಯಿತು. ಈ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯ



ವಹಿಸಿ ಮಾದಯ್ಯ ಗುರುವಿನ ಮಾತನಾಡಿ ಮೈಲಾರ ಕುಟುಂಬ ನಿರಂತರವಾಗಿ ನೊಂದ ಜೀವಿಗಳ ಅನಾಥ ಜೀವಿಗಳ ಕರುಣಾಮಯಿ ಕುಟುಂಬವಾಗಿದೆ.

ಈ ದಂಪತಿಗಳು ಜೀವನದ 40 ವರ್ಷಗಳ ಸುಧೀರ್ಘ ಜೀವನವನ್ನು ಸಮಾಜಪರ ಅನಾಥಪರ ಸೇವೆಗಳ ಮೂಲಕ ನಡೆಸುತ್ತಿದ್ದಾರೆ. ಸಿಂಧನೂ–ರಿನ ಕರುಣಾಮಯಿ ಕುಟುಂಬ ಎಂದು ಹೆಸರಾಗಿರುವ ಕಾರುಣ್ಯ ಆಶ್ರಮದಲ್ಲಿನ ಈ ದಂಪತಿಗಳ ವಿವಾಹ ವಾರ್ಷಿಕೋತ್ಸವ ಅರ್ಥಪೂರ್ಣವಾದುದು ಎಂದು ಆಶೀರ್ವಚನ ನೀಡಿ ಆಶೀರ್ವದಿಸಿದರು. ನಂತರ ಮಾತನಾಡಿದ ಚಿದಾನಂದಯ್ಯ ಗುರುವಿನ ಕಾರುಣ್ಯ ಎನ್ನುವ ಕರುಣೆಯ ಮಡಿಲಿನ ಜೊತೆಗೆ ಈ ದಂಪತಿಗಳ ಜೀವನ ಪಯಣ ಭಗವಂತನಿಗೆ ಸಮಾನವಾದದು. ಅನಾಥ ಎನ್ನುವ ಪದವನ್ನು ಅಳಿಸಲು ಮೈಲಾರ ಕುಟುಂಬ ನಿರಂತರ ಪ್ರಯತ್ನದಲ್ಲಿದೆ.

ಈ ದಂಪತಿಗಳು ಹಾಲುಮತ ಸಮಾಜದ ದೊಡ್ಡ ಆಸ್ತಿಯಾಗಿದ್ದಾರೆ. ಇವರ 40 ವರ್ಷಗಳ ಜೀವನದ ಪಯಣದಲ್ಲಿ ಇಂದಿನ ಈ ಕಾರುಣ್ಯ ಆಶ್ರಮದ ಕಾರ್ಯಕ್ರಮ ವೈವಿಧ್ಯಮಯ ನೊಂದವರ ಬಾಳಿಗೆ ಬೆಳಕಾಗಿರುವ ಈ ದಂಪತಿಗಳಿಗೆ ಭಗವಂತನ ಆಶೀರ್ವಾದವಿರುತ್ತದೆ. ನಿರಂತರ ಒಂದಿಲ್ಲೊಂದು ಸಮಾಜ ಸೇವೆಯ ಕಾರ್ಯಕ್ರಮಗಳನ್ನು ಕೈಗೆತ್ತಿಕೊಳ್ಳುವ ಮೈಲಾರ ಕುಟುಂಬ ನಮ್ಮ ಸಿಂಧನೂ–ರಿನ ಹೆಮ್ಮೆಯ ಕುಟುಂಬವಾಗಿದೆ. ಸರಳ ಸಾಮಾನ್ಯರಂತೆ ನಮ್ಮ ತಾಲೂಕಿನ ಎಲ್ಲಾ ಜನರ ಮನಸ್ಸಲ್ಲಿ ಉತ್ತಮ ಬಾಂಧವ್ಯ ಹೊಂದಿರುವುದು ಹಾಲುಮತ ಸಮಾಜದ ಹಿರಿಮೆಯನ್ನು ಹೆಚ್ಚಿಸುತ್ತಿದೆ. ಈ ದಂಪತಿಗಳು ನೂರಾರು ವರ್ಷಗಳ ಕಾಲ ಬಾಳಿ ಬದುಕಲೆಂದು ನಾವೆಲ್ಲರೂ ಶುಭ ಹಾರೈಸುವ ಈ ಕಾರ್ಯಕ್ರಮ ಸಮಾಜಕ್ಕೆ ಉತ್ತಮ ಸಂದೇಶವಾಗಿದೆ ಎಂದು ಆಶೀರ್ವಚನದ ಮೂಲಕ ಆಶೀರ್ವದಿಸಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ವೀರೇಶ ಯಡಿಯೂರು ಮಠ ಕಾರ್ಯಾಧ್ಯಕ್ಷರು ಕಾರುಣ್ಯ ಆಶ್ರಮ. ಕೆ ಭೀಮಣ್ಣ ವಕೀಲರು. ಭೀಮರಾಯಪ್ಪ ದೇವರಮನಿ. ವೆಂಕಟರಾಮರೆಡ್ಡಿ ಮುಕ್ಕುಂದಾ.ಡಾ. ಎಸ್. ವಿ.ಪಾಟೀಲ್. ಬಿ.ಸಂಗಪ್ಪ ತೆರಿಗೆ ಸಲಹೆಗಾರರು. ಎಂ.ಲಿಂಗಪ್ಪ ಮಾಡಿಸಿರವಾರ. ಹನುಮಂತಪ್ಪ ನಿವೃತ್ತ ಸಿಡಿಪಿಓ. ಶಿವರಾಜ ಕುಲಕರ್ಣಿ ಇಂಜಿನಿಯರ್. ವೀರಭದ್ರಗೌಡ ಸೋಮಲಾಪುರ ಇಂಜಿನಿಯರ್. ಸುದರ್ಶನ್ ರೆಡ್ಡಿ. ಚಂದ್ರಶೇಖರ ಮೈಲಾರ ನಗರಸಭೆ ಸದಸ್ಯರು ಸಿಂಧನೂರು.ಬಸವರಾಜ ಮೈಲಾರ. ಮಲ್ಲಪ್ಪ ಮೈಲಾರ. ಲಿಂಗಪ್ಪ ಕಾನಿಹಾಳ. ಅರುಣ್ ಕುಮಾರ್ ಗುರುದೇವ. ಡಾ.ಚನ್ನಬಸಯ್ಯಸ್ವಾಮಿ ಕಾರುಣ್ಯಆಶ್ರಮ ಮತ್ತು ಅಮರೇಶಪ್ಪ ಮೈಲಾರ ಕುಟುಂಬದ ಅಪಾರ ಬಳಗ ಮತ್ತು ಸ್ನೇಹ ಬಳಗ ಹಾಗೂ ಹಾಲುಮತ ಸಮಾಜದ ಎಲ್ಲಾ ಮುಖಂಡರುಗಳು ಉಪಸ್ಥಿತರಿದ್ದರು.

## ಸಾವಿರ ಕೆರೆಗಳ ಸರದಾರ ಜಿ ಎಸ್ ಪಾಟೀಲರಿಗೆ ಸಚಿವ ಸ್ಥಾನ ನೀಡಿ ಶ್ರೀಕಾಂತ್ ಗೌಡ್ರು ಒತ್ತಾಯ



ಮುಂಡರಗಿ: ಹಿರೇವಡ್ಡಟ್ಟಿ ಗ್ರಾಮದಲ್ಲಿ ರೋಣ ಮತಕ್ಷೇತ್ರದ ಶಾಸಕರು ಅಭಿವೃದ್ಧಿ ಹರಿಕಾರರು 1000 ಕೆರೆಗಳ ಸರದಾರರು ನಾಲ್ಕು ಬಾರಿ ಶಾಸಕರಾದ ಹಿರಿಯ ರಾಜ–ಕಾರಣಿ ಜಿಎಸ್ ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕು ಎಂದು ಶ್ರೀಕಾಂತ್ ಗೌಡ್ರ ಹೇಳಿದರು.

ಹಿರೇವಡ್ಡಟ್ಟಿ ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಯುವಕರು ಹಾಗೂ ಅಭಿಮಾನಿಗಳು ಈ ಸಂದರ್ಭದಲ್ಲಿ ಜಿಎಸ್ ಪಾಟೀಲರಿಗೆ ಸಚಿವ ಸ್ಥಾನ ನೀಡುವಂತೆ ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಕಾಂತ್ ಗೌಡ್ರು. ಬರಿ ಶಾಸಕರಾಗಿದ್ದ ಸಂದರ್ಭದಲ್ಲಿ ಸಾಕಷ್ಟು ಅಭಿವೃದ್ಧಿ ಮಾಡಿರುವಂತಹ ಶಾಸಕರು ಸಚಿವ ಸ್ಥಾನ ಸಿಕ್ಕರೆ ಇನ್ನು ಹೆಚ್ಚಿನ ಅಭಿವೃದ್ಧಿಯನ್ನು ಮಾಡುತ್ತಾರೆ.

ಕ್ಷೇತ್ರದ ಅಭಿವೃದ್ಧಿಗಾಗಿ ನಾಲ್ಕು ಬಾರಿ ಶಾಸಕರಾದಂತಹ ಹಿರಿಯರಾದ ಪಾಟೀಲ್ ಸರ್ ಗೆ ಸಚಿವ ಸ್ಥಾನವನ್ನು ನೀಡಿ ಕ್ಷೇತ್ರದ ಅಭಿವೃದ್ಧಿಗೆ ಸಹಕಾರ ಮಾಡಿ ಈಗಾಗಲೇ 65 ವರ್ಷ ಮೇಲ್ಪಟ್ಟಿದ್ದರಿಂದ ಈ ಬಾರಿ ಅವರಿಗೆ ಸಚಿವ ಸ್ಥಾನ ನೀಡಬೇಕು ಇಲ್ಲದಿದ್ದರೆ ಕ್ಷೇತ್ರದ ಕಾರ್ಯಕರ್ತರು ಪ್ರತಿಭಟನೆ ಮಾಡಬೇಕಾಗುತ್ತದೆ ಎಂದರು.

# ಕಾರ್ಯಕ್ರಮಕ್ಕೆ ಎಂಎಲ್ಸಿ ಹೇಮಲತಾ ನಾಯಕ ಚಾಲನೆ: ಗಮನ ಸೆಳೆದ ಕೊಪ್ಪಳ ಮಾವು ಮೇಳ–2023

ಕೊಪ್ಪಳ : ರೈತರಿಂದಲೇ ನೇರವಾಗಿ ಗ್ರಾಹಕರಿಗೆ ಉತ್ತಮ ಗುಣಮಟ್ಟದ ಮಾವಿನ ಹಣ್ಣುಗಳ ಮಾರಾಟಕ್ಕೆ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ತೋಟಗಾರಿಕೆ ಇಲಾಖೆಯಿಂದ ಮೇ 23ರಿಂದ ಮೇ 31ರವರೆಗೆ ನಗರದ ತೋಟಗಾರಿಕೆ ಉಪ ನಿರ್ದೇಶಕರ ಕಚೇರಿ ಆವರಣದಲ್ಲಿ ಹಮ್ಮಿಕೊಳ್ಳಲಾದ "ಕೊಪ್ಪಳ ಮಾವು ಮೇಳ–2023"ದ ಉದ್ಘಾಟನಾ ಕಾರ್ಯಕ್ರಮ ಮೇ 23ರಂದು ನಡೆಯಿತು.

ಮಾವು ಮೇಳಕ್ಕೆ ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಅವರು ರಿಬ್ಬನ್ ಕತ್ತರಿಸುವುದರ ಮೂಲಕ ಚಾಲನೆ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ, ಅಪರ ಜಿಲ್ಲಾಧಿಕಾರಿಗಳಾದ ಸಾವಿತ್ರಿ ಬಿ ಕಡಿ, ಜಂಟಿ ಕೃಷಿ ನಿರ್ದೇಶಕರಾದ ರುದ್ರೇಶಪ್ಪ ಟಿ.ಎಸ್., ತೋಟಗಾರಿಕೆ ಉಪ ನಿರ್ದೇಶಕರಾದ ಕೃಷ್ಣ ಸಿ ಉಕ್ಕುಂದ, ಪಶು ಇಲಾಖೆ ಉಪ ನಿರ್ದೇಶಕರಾದ ಡಾ ಹೆಚ್.ನಾಗರಾಜ ಸೇರಿದಂತೆ ಹಲವು ಗಣ್ಯರು, ತೋಟಗಾ–ರಿಕೆ ಇಲಾಖೆ ಅಧಿಕಾರಿಗಳು ಬೆಳಗ್ಗೆ ತೋಟಗಾರಿಕಾ ಇಲಾಖೆಯ ಆವರಣ–ಕ್ಕೆ ಆಗಮಿಸಿ ಮಾವು ಮೇಳದಲ್ಲಿನ ವಿವಿಧ ಬಗೆಯ ಹಣ್ಣುಗಳನ್ನು ಹಾಗೂ ಅವುಗಳ ಉತ್ಪನ್ನಗಳ ವೀಕ್ಷಣೆ ಮಾಡಿ ಮಾವಿನ ರುಚಿ ಸವಿದರು.

ರೈತರಿಂದ ನೋಂದಣಿ: ಈ ಮೇಳದಲ್ಲಿ ಭಾಗವಹಿಸಲು 51 ಕ್ಕೂ ಹೆಚ್ಚಿನ ರೈತರು ನೋಂದಾಯಿಸಿದ್ದು, ರೈತರಿಗಾಗಿ ಉಚಿತವಾಗಿ 22 ಕ್ಕೂ ಹೆಚ್ಚಿನ ಸ್ಟಾಲ್ ಗಳನ್ನು ನಿರ್ಮಿಸಿ ಕೊಡಲಾಗಿದೆ ಮತ್ತು ಪ್ರದರ್ಶನದಲ್ಲಿ 100 ಕ್ಕೂ ಹೆಚ್ಚಿನ ದೇಶಿ ಮತ್ತು ವಿದೇಶಿ ಮಾವಿನ ತಳಿಗಳನ್ನು ಸುಸಜ್ಜಿತವಾಗಿ ಪ್ರದರ್ಶನದಲ್ಲಿ ಇಡಲಾಗಿದೆ. 10ಕ್ಕೂ ಹೆಚ್ಚಿನ ತೋಟಗಾರಿಕೆ ರೈತ ಉತ್ಪಾದಕ ಕಂಪನಿಗಳಲ್ಲದೇ ಜಿಲ್ಲಾ ಹಾಪಕಾಮ್ಸ್



ಸಂಸ್ಥೆಗಳಿಗೆ ಮಾವಿನ ಹಣ್ಣು ಮಾರಲು ಸ್ಟಾಲ್‌ಗಳ ವ್ಯವಸ್ಥೆ ಮಾಡಲಾಗಿದೆ. ರೈತ ಉತ್ಪಾದಕ ಕಂಪನಿಗಳು ಹಾಗೂ ಜಿಲ್ಲಾ ಹಾಪಕಾಮ್ಸ್ ಕೊಪ್ಪಳದ ನೂರಾರು ಸದಸ್ಯ ರೈತರಿಂದ ಮಾವಿನ ಹಣ್ಣುಗಳನ್ನು ಖರೀದಿಸಿ ಈ ಮೇಳದಲ್ಲಿ ಮಾರಾಟ ಮಾಡುವುದರಿಂದ ಈ ಮೇಳದಲ್ಲಿ ನೇರವಾಗಿ ಭಾಗವಹಿಸಿದ ರೈತರಿಗೂ ಅನುಕೂಲವಾಗಿ ಯೋಗ್ಯ ಬೆಲೆ ಸಿಗುವಂತಾಗಿದೆ ಎಂದು ತೋಟಗಾರಿಕಾ ಇಲಾಖಾ ಅಧಿಕಾ–ರಿಗಳು ಇದೆ ವೇಳೆ ಮಾಹಿತಿ ನೀಡಿದರು.

ಗಮನ ಸೆಳೆದ ದುಬಾರಿ ಮಾವು: ಜಗತ್ತಿನ ಅತ್ಯಂತ ದುಬಾರಿ ಹಣ್ಣಾದ "ಮೀಯಾ ಜಾಕಿ" ಎಂಬ ಜಪಾನ ತಳಿಯನ್ನು ಪ್ರದರ್ಶನಕ್ಕೆ ಇಡಲಾಗಿದೆ. ಜೊತೆಗೆ ಮೇಳದಲ್ಲಿ ಕೇಸರ್, ಬೆನೆಶಾನ್, ದಶಹರಿ, ರಸಮರಿ, ಸ್ವರ್ಣರೇಖಾ, ಇಮಾಮ ಪಸಂಧ ಆಪೋಸು, ಮಲ್ಲಿಕಾ, ತೋತಾಪೂರಿ, ಪುನಾಸ್ ಸೇರಿದಂತೆ 100 ಕ್ಕೂ ಅಧಿಕ ವಿವಿಧ ತಳಿಯ ಮಾವಿನ ಹಣ್ಣುಗಳು ಪುನಾಸ್ ಮತ್ತು ಮಂಡಪ್ಪ ಉಪ್ಪಿನಕಾಯಿ ತಳಿಯ ಮಾವು, ಉಪ ಉತ್ಪನ್ನಗಳು ಹಾಗೂ ಮೌಲ್ಯವರ್ಧಿತ ಉತ್ಪನ್ನಗಳನ್ನು ಸಹ ಪ್ರದರ್ಶನದಲ್ಲಿ ಇಡಲಾಗಿದೆ. ತೋಟಗಾರಿಕೆ ಕ್ಷೇತ್ರದಲ್ಲಿ ಬೆಳೆದ ಮಾವಿನ ವಿವಿಧ ತಳಿಗಳನ್ನು ಸಹ ಪ್ರದರ್ಶನ ಮತ್ತು ಮಾರಾಟಕ್ಕೆ ಇಡಲಾಗಿದೆ.

ಮೌಲ್ಯವರ್ಧಿತ ಉತ್ಪನ್ನಗಳು, ತಯಾರಿಕೆ ವಿಧಾನ: ಈ ಮೇಳದಲ್ಲಿ ಮೊದಲ ಬಾರಿಗೆ ಮೌಲ್ಯವರ್ಧಿತ ಉತ್ಪನ್ನಗಳಾದ ಮ್ಯಾಂಗೋ ರೋಲ್, ಮ್ಯಾಂಗೋ, ಸ್ಪೈಷ್, ಮಾವಿನ ಪಲ್ಪ, ಮಾವಿನ ಸಿಖಂಡ ಹಾಗೂ ಇತರೇ ಉತ್ಪನ್ನಗಳನ್ನು ಸಹ ಮಾರಾಟಕ್ಕೆ ಇಡಲಾಗಿದೆ. ಮೌಲ್ಯವರ್ಧಿತ ಉತ್ಪನ್ನಗಳನ್ನು ಹೇಗೆ ತಯಾ–ರಿಸಬಹುದು ಎಂಬ ಬಗ್ಗೆ ಸಹ ತಿಳಿಸಿ ಕೊಡಲಾಗುತ್ತಿದೆ.

ಕೊಪ್ಪಳ ಕೇಸರ್ ಮಾವು: ಬ್ಯಾಂಡ್ ಬಾಕ್ಸ್‌ನಲ್ಲಿನ ಕೊಪ್ಪಳ ಕೇಸರ್ ಮಾವಿನ ಹಣ್ಣುಗಳಿಗೆ ಹೆಚ್ಚಿನ ಬೇಡಿಕೆ ಇದ್ದು, ಸಾರ್ವಜನಿಕರಿಗೆ ಬಾಕ್ಸ್‌ನಲ್ಲಿನ ಹಣ್ಣುಗಳನ್ನು ಸಿಗುವಂತೆ ಅನುಕೂಲ ಮಾಡಲಾಗಿದೆ.

ಈ ಬಾರಿ ಮೇಳವನ್ನು ಪ್ಲಾಸ್ಟಿಕ್ ಮುಕ್ತವಾಗಿಡುವ ಉದ್ದೇಶದಿಂದ ಸಾರ್ವಜನಿಕ–ರಿಗೆ ಹಣ್ಣುಗಳನ್ನು ತೆಗೆದುಕೊಂಡು ಹೋಗಲು ಅನುಕೂಲವಾಗುವಂತೆ ಇಲಾಖೆಯಿಂದ ಪೇಪರ್ ಬ್ಯಾಗ್ ನೀಡಲಾಗಿದೆ. ಇದರಿಂದ ಕೊಪ್ಪಳ ಕೇಸರ್ ಹೆಚ್ಚು ಜನಪ್ರಿಯವಾಗಿದೆ. ಮಾವಿನ ಹಣ್ಣುಗಳಲ್ಲಿ ಲಭ್ಯವಿರುವ ಪೋಷಕಾಂಶಗಳು, ಖನಿಜಗಳು ಮತ್ತು ಅವುಗಳ ಆರೋಗ್ಯದ ಬಗ್ಗೆ ತಿಳಿಸುವ ಬ್ಯಾನರ್‌ಗಳನ್ನು ಸಹ ಪ್ರದರ್ಶಿಸಿ ಮಾಹಿತಿ ನೀಡಲಾಗುತ್ತಿದೆ.

ಸೆಲ್ಫಿ ಪಾಯಿಂಟ್: ಈ ಮೇಳದಲ್ಲಿ ಮಕ್ಕಳು ಮತ್ತು ಸಾರ್ವಜನಿಕರಿಗೆ ಸೆಲ್ಫಿ ಪಾಯಿಂಟ್ ನಿರ್ಮಿಸಲಾಗಿದೆ. ಈ ಸೆಲ್ಫಿ ಪಾಯಿಂಟ್ ಮಾವಿನ ಮಾದರಿ ಹೊಂದಿ ಜನರನ್ನು ಆಕರ್ಷಿಸಿಸುತ್ತಿದೆ.

ಸಾರ್ವಜನಿಕರಲ್ಲಿ ಮನವಿ: ಕೊಪ್ಪಳ ಜಿಲ್ಲೆಯಲ್ಲಿ ಬೆಳೆಯಲಾಗುತ್ತಿರುವ ವಿವಿಧ ಮಾವಿನ ತಳಿಗಳನ್ನು ರೈತರಿಂದ ನೇರವಾಗಿ ಗ್ರಾಹಕರಿಗೆ ತಲುಪಿಸುವ ಉದ್ದೇಶದಿಂದ ಮೇ 23ರಿಂದ ಮೇ 31ರವರೆಗೆ 10 ದಿನಗಳ ಕಾಲ ತೋಟಗಾರಿಕಾ ಇಲಾಖಾ ಆವರಣದಲ್ಲಿ ಮಾವು ಮೇಳ ಆಯೋಜಿಸಲಾಗಿದೆ. ಮೇಳದಲ್ಲಿ 12ಕ್ಕೂ ಹೆಚ್ಚಿನ ಮಾವಿನ ತಳಿಗಳನ್ನು ರೈತರು ನೇರವಾಗಿ ಮಾರಾಟ ಮಾಡಲು ಅನುಕೂಲ ಕಲ್ಪಿಸಲಾಗಿದೆ. ಸಾರ್ವಜನಿಕರು ಮಾವು ಮೇಳದಲ್ಲಿ ಭಾಗವಹಿಸಿ ರೈತರ ಆದಾಯ ಹೆಚ್ಚಿಸಬೇಕೆಂದು ತೋಟಗಾರಿಕೆ ಉಪ ನಿರ್ದೇಶಕರಾದ ಕೃಷ್ಣ ಸಿ ಉಕ್ಕುಂದ ಅವರು ಕೊಪ್ಪಳ ಜಿಲ್ಲೆಯ ರೈತರಲ್ಲಿ ಮನವಿ ಮಾಡಿದ್ದಾರೆ.

# ಲಕ್ಷ್ಮೀ ಹೆಬ್ಬಾಳಕರ್ ಸೇರಿ ಐವರಿಗೆ ಮಂತ್ರಿಸ್ಥಾನ ಕೊಡಿ
## ಕಾಂಗ್ರೆಸ್ ಹಾಗೂ ಬಿಜೆಪಿ ವರಿಷ್ಠರಿಗೆ ಪಂಚಮಸಾಲಿ ರಾಜ್ಯ ಕಾರ್ಯಕಾರಿಣಿಯ ಒತ್ತಾಯ

ಬೆಂಗಳೂರು : ಬೆಂಗಳೂರಿನಲ್ಲಿ ಇಂದು (ಮೇ 23 ರಂದು) ಲಿಂಗಾಯತ ಪಂಚಮಸಾಲಿ ನೂತನ ಶಾಸಕರುಗಳ ಅಭಿನಂದನಾ ಸಮಾರಂಭ ಕುರಿತು ಚರ್ಚಿಸುವ ಪೂರ್ವಭಾವಿ ರಾಜ್ಯ ಕಾರ್ಯಕಾರಿಣಿ ಸಭೆ ನಡೆಯಿತು.

ಸಭೆಯಲ್ಲಿ ಈ ಕೆಳಗಿನ ನಿರ್ಣಾಯ ತೆಗೆದುಕೊಳ್ಳಲಾಯಿತು.

* ಲಿಂಗಾಯತ ಪಂಚಮಸಾಲಿ ಸಮಾಜದ ಬಂಧುಗಳ ಒತ್ತಾಯದಂತೆ, ಮೀಸಲಾತಿಗಾಗಿ ಮುಂಚೂಣಿಯಲ್ಲಿ ಹೋರಾಡಿದಂತಹ ಹುನಗುಂದ ಶಾಸಕರಾದ ವಿಜಯಾನಂದ ಕಾಶಪ್ಪನವರ್, ಧಾರವಾಡ ಗ್ರಾಮೀಣ ಶಾಸಕ ವಿನಯ ಕುಲಕರ್ಣಿ, ಬೆಳಗಾವಿ ಗ್ರಾಮೀಣ ಶಾಸಕಿ ಲಕ್ಷ್ಮಿ ಹೆಬ್ಬಾಳಕರ್ ಒಳಗೊಂಡಂತೆ ಒಟ್ಟು ಐದು ಶಾಸಕರಿಗೆ ಸಚಿವ ಸ್ಥಾನ ಕಲ್ಪಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ,



ಉಪಮುಖ್ಯಮಂತ್ರಿ ಶಿವಕುಮಾರ್ ಹಾಗೂ ಕಾಂಗ್ರೆಸ್ ವರಿಷ್ಠರಾದ ಮಲ್ಲಿಕಾರ್ಜುನ ಖರ್ಗೆಯವರಿಗೆ ಒತ್ತಾಯಿಸಲಾಯಿತು.

* ಬಿಜೆಪಿ ಪಕ್ಷದ ರಾಜ್ಯ ಅಧ್ಯಕ್ಷ ಅಥ-'ವಾ ವಿರೋಧ ಪಕ್ಷದ ಸ್ಥಾನಕ್ಕೆ ಸಮರ್ಥ ಲಿಂಗಾಯತ ಪಂಚಮಸಾಲಿ ಶಾಸಕರಿಗೆ ಅವಕಾಶ ಮಾಡಿಕೊಡಬೇಕೆಂದು ರಾಷ್ಟ್ರೀಯ ಬಿಜೆಪಿ ವರಿಷ್ಠ-ರಿಗೆ ಒತ್ತಾಯಿಸಲಾಯಿತು.

* ನೂತನ ಶಾಸಕರ ಅಭಿನಂದನಾ ಸಮಾರಂಭವನ್ನು ಹಾಗೂ ಮೀಸಲಾತಿ ಹಕ್ಕೊತ್ತಾಯ ಸಮಾರಂಭವನ್ನು ಕೂಡಲಸಂಗಮದಲ್ಲಿ ಜೂನ್ ತಿಂಗಳಲ್ಲಿ ನೆರವೇ-ರಿಸಲು ತೀರ್ಮಾನಿಸಲಾಯಿತು.

* ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಜಗದ್ಗುರು ಮಹಾಪೀಠದ ಪ್ರಥಮ ಜಗದ್ಗುರುಬಸವ ಜಯಮೃತ್ಯುಂಜಯ ಸ್ವಾಮೀ-ಜಿಯವರ ಸಾನಿಧ್ಯದಲ್ಲಿ ನಡೆದ ಸಭೆಯಲ್ಲಿ ಶ್ರೀಗಳು ಸರ್ಕಾರಕ್ಕೆ ಒತ್ತಾಯಿಸಿದರು.

* ರಾಷ್ಟ್ರೀಯ ಅಧ್ಯಕ್ಷರಾದ ಹಾಗೂ ಶಾಸಕರಾದ ಡಾ. ವಿಜಯಾನಂದ ಕಾಶಪ್ಪನವರ್ ಅಧ್ಯಕ್ಷತೆಯಲ್ಲಿ ಜರುಗಿತು.

*ನೂತನ ಶಾಸಕರುಗಳಾದ ಧಾರವಾಡದ ವಿನಯ ಕುಲಕರ್ಣಿ, ಬೆಳಗಾವಿಯ ಲಕ್ಷ್ಮೀ ಹೆಬ್ಬಾಳ್ಕರ್, ಕಾಗವಾಡದ ರಾಜುಗೌಡ ಕಾಗೆ, ದೇವರ ಹಿಪ್ಪರಗಿಯ ರಾಜುಗೌಡ ಪಾಟೀಲ್, ಸಿಂದಗಿಯ ಅಶೋಕ ಮನಗೂಳಿ, ಕಿತ್ತೂರಿನ ಬಾಬಾ ಸಾಹೇಬ್ ಪಾಟೀಲ, ಮಾಜಿ ಶಾಸಕ ನಂದಿಹಳ್ಳಿ ಹಾಲಪ್ಪ, ನಿಗಮದ ಮಾಜಿ ಅಧ್ಯಕ್ಷ ಎಂ ಎಸ್ ರುದ್ರಗೌಡ, ವಿವಿಧ ಜನಪ್ರತಿನಿಧಿಗಳು, ಪಂಚಮಸಾಲಿ – ಗೌಡ – ಮಲೆಗೌಡ ದೀಕ್ಷಾ – ಲಿಂಗಾಯತ ರಾಷ್ಟ್ರೀಯ, ರಾಜ್ಯ, ಜಿಲ್ಲಾ ವಿವಿಧ ಘಟಕಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಡಾ.ಬಿಎಸ್ ಪಾಟೀಲ್ ಪಂಚಸೇನಾ ರಾಷ್ಟ್ರೀಯ ಅಧ್ಯಕ್ಷರು ಬೆಂಗಳೂರು, ಬೆಂಗಳೂರು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪುಟ್ಟರಾಜ, ರಾಷ್ಟಿಯ ಅಧ್ಯಕ್ಷ ಮಲ್ಲಣಗೌಡರು, ಶಿವಪುತ್ರ ಮಲ್ಲೇವಾಡ್ ನಗರ ಅಧ್ಯಕ್ಷರು, ದಾನಪ್ಪಗೌಡರು, ಕಾಂತೇಶ್, ಮಲ್ಲಣ ಗೌಡ, ಶೈಲೇಂದ್ರ ಪಾಟೀಲ್ ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಆರ್‌ಸಿಬಿ ಗೆ ಗೇಲ್ ಲಗ್ಗೆ: ಕೊಹ್ಲಿ ದಾಖಲೆ ಮುರಿವೇ: ಬ್ಯಾಟಿಂಗ್ ಮಾಂತ್ರಿಕ್ ಜೋಕ್





ಬೆಂಗಳೂರು: ವಿರಾಟ್ ಕೊಹ್ಲಿ ಐಪಿಎಲ್‌ನಲ್ಲಿ 7ನೇ ಶತಕ ಬಾರಿಸಿ ಕ್ರಿಸ್ ಗೇಲ್ ಅವರ ದಾಖಲೆಯನ್ನು ಮುರಿದಿದ್ದಾರೆ. ಇದನ್ನು ಯುನಿವರ್ಸ್ ಬಾಸ್ ಖ್ಯಾತಿಯ ಗೇಲ್ ಬಹಳ ತಮಾಷೆಯಾಗಿ ಸ್ವೀಕರಿಸಿದ್ದಾರೆ.

ಮುಂದಿನ ವರ್ಷ ಮರಳಿ ಐಪಿಎಲ್ ಆಡಲಿಳಿದು ಕೊಹ್ಲಿ ದಾಖಲೆಯನ್ನು ಮತ್ತೆ ವಶಪಡಿಸಿಕೊಳ್ಳಲಿದ್ದೇನೆ ಎಂದು ಜೋಕ್ ಮಾಡಿದ್ದಾರೆ!.

“ಅನುಮಾನವೇ ಇಲ್ಲ. ವಿರಾಟ್ ಕೊಹ್ಲಿ ಅವರದು ಅದ್ಭುತ ಇನ್ನಿಂಗ್ಸ್. ಅವರು ಯುನಿವರ್ಸ್ ಬಾಸ್‌ನ ದಾಖಲೆಯನ್ನು ಮೀರಿ ನಿಂತರು. ಇರಲಿ, ನಾನು ನಿವೃತ್ತಿಯನ್ನು ತೊರೆದು ಐಪಿಎಲ್‌ಗೆ ಮರಳುತ್ತೇನೆ.

ಮುಂದಿನ ವರ್ಷ ನಿಮ್ಮನ್ನು ನೋಡಿಕೊಳ್ಳುತ್ತೇನೆ, ನಿಮ್ಮ ದಾಖಲೆಯನ್ನು ಮುರಿಯುತ್ತೇನೆ ನೋಡಿ ಎಂಬುದಾಗಿ ಚಟಾಕಿ ಹಾರಿಸಿದರು.

## ಪ್ರಮಾಣ ವಚನ ಸ್ವೀಕರಿಸದ 16ಶಾಸಕರು: ದೇಶಪಾಂಡೆ ಬೇಸರ



ಬೆಂಗಳೂರು: ವಿಧಾನಸಭೆಯ ನೂತನ ಶಾಸಕರ ಪ್ರಮಾಣ ವಚನ ಸ್ವೀಕಾರದ ಎರಡನೇ ದಿನವಾದ ಮಂಗಳವಾರ ಪ್ರಮಾಣ ಸ್ವೀಕರಿಸಬೇಕಾದ 43 ಮಂದಿಯಲ್ಲಿ 16 ಶಾಸಕರು ಹಾಜರಾಗಲೇ ಇಲ್ಲ. ಕಲಾಪದಲ್ಲಿ ಭಾಗವಹಿಸಿದವರ ಸಂಖ್ಯೆಯೂ ಕಡಿಮೆ ಇತ್ತು.

ಜೆಡಿಎಸ್ ನಾಯಕರಾದ ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಮತ್ತು ಎಚ್.ಡಿ.ರೇವಣ್ಣ ಅವರ ಗೈರು ಎರಡನೇ ದಿನವೂ ಎದ್ದು ಕಾಣುತ್ತಿತ್ತು. ಕಾರ್ಯದರ್ಶಿಯವರು ಗೈರಾದವರ ಹೆಸರುಗಳನ್ನು ಪದೇ ಪದೇ ಕರೆದರು. ಬಳಿಕ ಕಲಾಪ ಮುಂದೂಡಲು ಹಂಗಾಮಿ ಸಭಾಧ್ಯಕ್ಷರಿಗೆ ಸಲಹೆ ನೀಡಿದರು.

ಈ ಬಗ್ಗೆ ಬೇಸರ ವ್ಯಕ್ತಪಡಿಸಿದ ಹಂಗಾಮಿ ಸಭಾಧ್ಯಕ್ಷ ಆರ್.ವಿ.ದೇಶಪಾಂಡೆ, ಈವರೆಗೆ 16 ಶಾಸಕರು ಪ್ರಮಾಣ ಸ್ವೀಕರಿಸಿಲ್ಲ. ಇಂದು (ಬುಧವಾರ) ಸಭಾಧ್ಯಕ್ಷರ ಚುನಾವಣೆ ಇದೆ. ಇವತ್ತು ಸಂಜೆಯ ಒಳಗೆ ಪ್ರಮಾಣ ಸ್ವೀಕರಿಸದಿದ್ದರೆ, ಚುನಾವಣೆ ಪ್ರಕ್ರಿಯೆಯಲ್ಲಿ ಭಾಗವಹಿಸಲು ಅವಕಾಶ ನೀಡುವುದಿಲ್ಲ ಎಂದು ಹೇಳಿದರು.

ಸಭಾಧ್ಯಕ್ಷರ ಕಚೇರಿಗೆ ಬಂದು ಕಾರ್ಯದರ್ಶಿಯವರ ಸಮ್ಮುಖದಲ್ಲಿ ಪ್ರಮಾಣ ವಚನ ಸ್ವೀಕರಿಸಬೇಕು ಎಂದೂ ಸೂಚಿಸಿದರು.

## ಅನ್ನಭಾಗ್ಯ ಸ್ಕೀಮ್ ಗೆ ಟೀಕೆ : ಶಾಲಾ ಶಿಕ್ಷಕ ಸಸ್ಪೆಂಡ್

ಚಿತ್ರದುರ್ಗ: ಅಧಿಕಾರಕ್ಕೆ ಬಂದ ಕೂಡಲೇ ನಾವು ಅನ್ನಭಾಗ್ಯ ಯೋಜನೆಯಡಿ ಪ್ರತೀ ವ್ಯಕ್ತಿಗೆ ತಿಂಗಳಿಗೆ 10 ಕೆಜಿ ಅಕ್ಕಿ ನೀಡುವುದಾಗಿ ಸಿಎಂ ಸಿದ್ದರಾಮಯ್ಯ ಚುನಾವಣೆಗೆ ಮುನ್ನವೇ ಘೋಷಣೆ ಮಾಡಿದ್ದರು.

ಅಲ್ಲದೇ ಐದು ಗ್ಯಾರಂಟಿಗಳು ಜಾರಿ ಮಾಡೇ ಮಾಡುತ್ತೇವೆ ಎಂದು ಭರವಸೆ ನೀಡಿದ್ದರು.

ಈಗ ಚುನಾವಣೆ ಫಲಿತಾಂಶ ಹೊರಬಿದ್ದಿದ್ದು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದೆ. ಸಿಎಂ ಆಗಿ ಈಗಾಗಲೇ ಸಿದ್ದರಾಮಯ್ಯ ಅಧಿಕಾರ ವಹಿಸಿಕೊಂಡಿದ್ದಾರೆ.

ಹೀಗಿರುವಾಗಲೇ ಯಾವಾಗ ರಾಜ್ಯ ಸರ್ಕಾರ ಐದು ಗ್ಯಾರಂಟಿಗಳನ್ನು ಮಾಡಲಿದೆ ಎಂದು ವಿರೋಧ ಪಕ್ಷಗಳು ಪ್ರಶ್ನೆಗಳನ್ನು ಕೇಳುತ್ತಿವೆ.



ಇದರ ಮಧ್ಯೆ ಹಲವರು ಜನ ಬಿಟ್ಟಿ ಭಾಗ್ಯಗಳಿಗಾಗಿ ಕಾಂಗ್ರೆಸ್ಸಿಗೆ ವೋಟ್ ಹಾಕಿ ಗೆಲ್ಲಿಸಿದ್ದಾರೆ. ಇದರಿಂದ ರಾಜ್ಯ ಆರ್ಥಿಕ ದಿವಾಳಿಯಾಲಿದೆ ಎಂದು ಟೀಕಿಸುತ್ತಿದ್ದಾರೆ.

ಹೀಗೆ ಅನ್ನಭಾಗ್ಯ ಯೋಜನೆಯನ್ನು ಬಿಟ್ಟಿ ಭಾಗ್ಯ ಎಂದು ಟೀಕಿಸಿ ಫೇಸ್ಬುಕ್ನಲ್ಲಿ ಪೋಸ್ಟ್ ಹಾಕಿದ್ದ ಸರ್ಕಾರಿ ನೌಕರನೋರ್ವ ಸಸ್ಪೆಂಡ್ ಆಗಿದ್ದಾರೆ. ಅದರಲ್ಲೂ ಈತ ಸರ್ಕಾರಿ ಶಾಲೆಯಲ್ಲಿ ಮಕ್ಕಳಿಗೆ ಪಾಠ ಮಾಡುವ ಶಿಕ್ಷಕ ಎಂಬುದು ಗಮನಾರ್ಹ.

ಅನ್ನಭಾಗ್ಯವನ್ನು ಟೀಕಿಸಿ ಅಮಾನತಾಗಿದ್ದು ಮತ್ತ್ಯಾರು ಅಲ್ಲ, ಹೊಸದುರ್ಗದ ಕಾನುಬೇನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕೆಲಸ ಮಾಡೋ ಶಿಕ್ಷಕ. ಈತನ ಹೆಸರು ಶಾಂತಮೂರ್ತಿ. ಈಗ ಸರ್ಕಾರದ ವಿರುದ್ಧ ಪೋಸ್ಟ್ ಹಾಕಿ ಸಸ್ಪೆಂಡ್ ಆಗಿದ್ದಾರೆ. ಶಿಕ್ಷಣ ಇಲಾಖೆ ಮುಜುಗರ ತರಿಸಿದೆ ಎಂದು ಖುದ್ದು ಡಿಡಿಪಿಐ ರವಿಶಂಕರ್ ರೆಡ್ಡಿ ಈ ಆದೇಶ ಹೊರಡಿಸಿದ್ದಾರೆ.

## ಯು ಪಿ ಎಸ್ ಸಿ ಪರೀಕ್ಷೆ ಯಲ್ಲಿ ಮೈಸೂರಿನ ಪೂಜಾ ಆಯ್ಕೆ



ಮೈಸೂರು: ಕುವೆಂಪು ನಗರದ ಎಂ.ಪೂಜಾ, ಕೇಂದ್ರ ಲೋಕಸೇವಾ ಆಯೋಗ ನಡೆಸಿದ 2022ರ ಸಾಲಿನ ನಾಗ-ರಿಕ ಸೇವಾ ಪರೀಕ್ಷೆಯಲ್ಲಿ 390ನೇ ರ್ಯಾಂಕ್ ಪಡೆದು ಸಾಧನೆ ಮಾಡಿದ್ದಾರೆ.

ಕಳೆದ ಬಾರಿ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಸಂದರ್ಶನ ಹಂತದವರೆಗೂ ಹೋಗಿದ್ದರು.

ಅಂತಿಮ ಪಟ್ಟಿಯಲ್ಲಿ ಸ್ಥಾನ ಪಡೆದಿರಲಿಲ್ಲ. ಎರಡನೇ ಬಾರಿ ಪರೀಕ್ಷೆಯಲ್ಲಿ ಯಶಸ್ಸು ಗಳಿಸಿದ್ದಾರೆ. ಅವರು ಮುಕುಂದ ಹಾಗೂ ಪದ್ಮಾವತಿ ದಂಪತಿ ಪುತ್ರಿ.

ಕುವೆಂಪುನಗರದ ಕಾವೇರಿ ಶಾಲೆಯಲ್ಲಿ 1ರಿಂದ 10ನೇ ತರಗತಿವರೆಗೆ, ಮರಿಮಲ್ಲಪ್ಪ ಪಿಯು ಕಾಲೇಜಿನಲ್ಲಿ ಪಿಯು ಹಾಗೂ ಗೋಕುಲಂನ ವಿದ್ಯಾವರ್ಧಕ ಎಂಜಿನಿಯರಿಂಗ್ ಕಾಲೇಜಿನಲ್ಲಿ ಪದವಿ ಪಡೆದಿದ್ದಾರೆ.

ಯಾವುದೇ ಕೋಚಿಂಗ್ ಕೇಂದ್ರಗಳಲ್ಲಿ ತರಬೇತಿ ಪಡೆಯದೇ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವುದು ವಿಶೇಷ.

2019ರಲ್ಲಿ ಪದವಿ ಮುಗಿಸಿದೆ. 2020 ಡಿಸೆಂಬ-ರ್ನಿಂದ ತಯಾರಿ ಆರಂಭಿಸಿದೆ. ಅಣಕು ಪರೀಕ್ಷೆಗಳನ್ನು ತೆಗೆದುಕೊಂಡಿದ್ದೆ. ಈ ಬಾರಿ ಸಂದರ್ಶನ ತರಬೇತಿಯನ್ನು ಮಾತ್ರ ಬೆಂಗಳೂರಿನ ಇನ್‌ಸೈಟ್ಸ್ ಆನ್ ಇಂಡಿಯಾದಲ್ಲಿ ಪಡೆದೆ. ಐಎಎಸ್ ಅಥವಾ ಐಪಿಎಸ್ ಹುದ್ದೆ ಸಿಗುವ ನಿರೀಕ್ಷೆ ಇದೆ’ ಎಂದು ಪೂಜಾ ಸಂತಸ ಹಂಚಿಕೊಂಡರು.

ಶಿಸ್ತು ಹಾಗೂ ಶ್ರಮವನ್ನು ಪರೀಕ್ಷೆಯು ಬೇಡುತ್ತದೆ. ಉತ್ತಮವಾಗಿ ತಯಾರಿ ನಡೆಸಿದ್ದರೆ, ಯಾವುದಕ್ಕೂ ತಲೆ ಕೆಡಿಸಿಕೊಳ್ಳಬಾರದು. ಧೈರ್ಯದಿಂದ ಮುನ್ನುಗ್ಗಬೇಕು’ ಎಂದು ಹೇಳಿದರು.

## ಪ್ಯಾರಾಚೂಟ್ ಅಡ್ವಾನ್ಸ್ಡ್: ಆನಿಯನ್ ಹೇರ್ ಆಯಿಲ್ ಬಿಡುಗಡೆ

ಹುಬ್ಬಳ್ಳಿ: ಮಾರಿಕೊ ಲಿಮಿಟೆಡ್ನ ಪ್ರೀಮಿಯಮ್ ಕೇಶಪೋಷಣೆ ಬ್ರ್ಯಾಂಡ್ ಆದ ಪ್ಯಾರಾಚೂಟ್ ಅಡ್ವಾನ್ಸ್ಡ್, ತನ್ನ ತನ್ನ ಪ್ಯಾರಾಚೂಟ್ ಅಡ್ವಾನ್ಸ್ಡ್ ಆನಿಯನ್ ಹೇರ್ ಆಯಿಲ್ಗಾಗಿ ಮುದಗೊಳಿಸುವ ಟಿವಿಸಿ ಬಿಡುಗಡೆ ಮಾಡಿದೆ. ಈ ಜಾಹೀರಾತು ಚಿತ್ರವು, ತೆಂಗು ಮತ್ತು ಈರುಳ್ಳಿಯ ಶಕ್ತಿಶಾಲಿ ಅಂಶಗಳನ್ನು, ಯಾವ ರೀತಿ ಕೂದಲಿನ ಬೆಳವಣಿಗೆಯನ್ನು ವರ್ಧಿಸಿ ಕೂದಲುದುರುವಿಕೆಯನ್ನು ಕಡಿಮೆ ಮಾಡಲು ಒಗ್ಗೂಡಿಸಲಾಗಿದೆ. ಪ್ಯಾರಾಚೂಟ್ ಅಡ್ವಾನ್ಸ್ಡ್ ಆನಿಯನ್ ಹೇರ್ ಆಯಿಲ್ ಉಪಯೋಗಿಸುವುದರಿಂದ ಕೂದಲುದುರುವಿಕೆ ಕಡಿಮೆಯಾಗುವುದು ಮಾತ್ರವಲ್ಲದೆ, ಕೂದಲಿನ ಬೆಳವಣಿಗೆಯೂ ವರ್ಧಿಸುತ್ತದೆ ಎಂದು ತಾಯಿ ಮಗಳಿಗೆ ಭರವಸೆ ನೀಡುತ್ತಾಳೆ.

ಹೊಸ ಪ್ರಚಾರಾಂದೋಲನದ ಬಗ್ಗೆ ಮಾತನಾಡುತ್ತಾ, ಮಾರಿಕೊ ಲಿಮಿಟೆಡ್ನ ಚೀಫ್ ಮಾರ್ಕೆಟಿಂಗ್ ಆಫಿಸರ್ ಸೋಮಶ್ರೀ ಬೋಸ್, “ಪ್ಯಾರಾಚೂಟ್ ಅಡ್ವಾನ್ಸ್ಡ್ ಹಲವಾರು ಪೀಳಿಗೆಗಳಿಂದ




ಮಹಿಳೆಯ ವಿಶ್ವಸನೀಯ ಗೆಳತಿಯಾಗಿದೆ. ಒಬ್ಬ ತಾಯಿ-ಮಗಳ ಸಂಬಂಧವು ನಿಜವಾಗಿಯೂ ವಿಶಿಷ್ಟವಾಗಿದ್ದು, ಮಗಳು ತನ್ನ ತಾಯಿಯನ್ನು ವಿಶ್ವಸನೀಯ ಸಲಹಾಗಾರ್ತಿಯನ್ನಾಗಿ ನೋಡುತ್ತಾಳೆ, ಮತ್ತು ಅದು ವಾಸ್ತವವೂ ಹೌದು. ಹಲವಾರು ವರ್ಷಗಳ ವಿವೇಚನೆಯ ಬೆಂಬಲದೊಂದಿಗೆ ಆಕೆಗೆ ತನ್ನ ಮಗಳಿಗೆ ಅತ್ಯುತ್ತಮವಾದುದನ್ನೇ ಕೊಡಬೇಕೆಂಬ ಆಶಯಕ್ಕೆ ಸರಿಸಾಟಿಯಿಲ್ಲ. ಹೊಸ ಚಿತ್ರವು ಹಿಡಿದಿಡಲು ಪ್ರಯತ್ನಿಸಿರುವುದೂ ಕೂಡ ಈ ಅಂಶವನ್ನೇ. ಇಲ್ಲಿ ಮದುವೆಗೆ ಮುನ್ನ ಮಗಳು ತನ್ನ ತಾಯಿಯ ಸಲಹೆಯಲ್ಲಿ ನೆಮ್ಮದಿ ಪಡೆಯುತ್ತಾಳೆ. ಪ್ಯಾರಾಚೂಟ್ ಅಡ್ವಾನ್ಸ್ಡ್ ಹೇರ್ ಆಯಿಲ್ ಎರಡು ಶಕ್ತಿಶಾಲಿ ವಸ್ತುಗಳ ಸಮ್ಮಿಲನವಾಗಿದೆ. ಇದು ಈರುಳ್ಳಿಯ ಶಕ್ತಿಯನ್ನು ತೆಂಗಿನ ಪೋಷಣಾಂಶದೊಂದಿಗೆ ಬೆರೆಸುತ್ತದೆ. ಈ ಎರಡೂ ಕೂಡ, ಕೂದಲ ಬೆಳವಣಿಗೆಯನ್ನು ಪ್ರೋತ್ಸಾಹಿಸಿ ಕೂದಲುದುರುವಿಕೆಯನ್ನು ಕಡಿಮೆ ಮಾಡುವುದಕ್ಕಾಗಿ ಶಕ್ತಿಶಾಲಿ ಸಂಯೋಜನೆಯಾಗಿ ಹೊರಹೊಮ್ಮಿವೆ. ಪ್ಯಾರಾಚೂಟ್ ಅಡ್ವಾನ್ಸ್ಡ್ ಅಡಿ ಬರುತ್ತಿರುವ ನಮ್ಮ ಇತ್ತೀಚಿನ ಕೊಡುಗೆಯು ನಮ್ಮ ಗ್ರಾಹಕರ ವಿಶ್ವಾಸವನ್ನು ಗಳಿಸಿ ಪೀಳಿಗೆ ಪೀಳಿಗೆಗಳವರೆಗೂ ಮುಂದುವರಿಯುವ ಬ್ರ್ಯಾಂಡ್ ಆಗುತ್ತದೆ ಎಂಬ ನಂಬಿಕೆ ನಮಗಿದೆ.”ಎಂದು ಹೇಳಿದರು.

ಭಾವನಾತ್ಮಕ ದೃಶ್ಯಾವಳಿ ಮತ್ತು ಶಕ್ತಿಶಾಲಿಯಾದ ಕಥಾವಸ್ತು ಇರುವ ಪ್ಯಾರಾಚೂಟ್ ಅಡ್ವಾನ್ಸ್ಡ್ ಆನಿಯನ್ ಆಇಲ್ನ ಟಿವಿಸಿ, ಪ್ರೇಕ್ಷಕರಿಗೆ ಸಂತೋಷ ನೀಡಲು ಸಿದ್ಧವಾಗಿದೆ.

ಬ್ರ್ಯಾಂಡ್ ಚಿತ್ರವನ್ನು ಮೊದಲು ಅಂ-ಧ್ರಪ್ರದೇಶ ಹಾಗೂ ಕರ್ನಾಟಕದ ಟಿವಿ ಹಾಗೂ ಡಿಜಿಟಲ್ ಮಾಧ್ಯಮಗಳಲ್ಲಿ ಬಿಡುಗಡೆ ಮಾಡಿ ತದನಂತರ ಹಿಂದಿ ಮತ್ತು ಇಂಗ್ಲಿಷ್ನಲ್ಲಿ ಬ್ರ್ಯಾಂಡ್ನ ಯೂಟ್ಯೂಬ್ ಪೇಜ್ನಲ್ಲಿ ಬಿಡುಗಡೆ ಮಾಡಲಾಗುತ್ತದೆ.

ಈ ಟಿವಿಸಿಯ ಸೃಜನಶೀಲ ಪರಿಕಲ್ಪನೆಯ ಬಗ್ಗೆ ಮಾತನಾಡುತ್ತಾ, ಶಾಟ್ ರೆಡಿ ಹೈನ ನಿರ್ದೇಶಕ ಹನ್ಸ್ ಸಕ್ಸೇನ, “ಪ್ಯಾರಾಚೂಟ್ ಅಡ್ವಾನ್ಸ್ಡ್ ಭಾರತದಾದ್ಯಂತ ಅತ್ಯಂತ ವಿಶ್ವಸನೀಯ ಹಾಗೂ ಪ್ರೀತಿಪಾತ್ರ ಬ್ರ್ಯಾಂಡ್ ಆಗಿದೆ, ಪ್ಯಾರಾಚೂಟ್ ಅಡ್ವಾನ್ಸ್ಡ್ ಆನಿಯನ್ ಹೇರ್ ಆಯಿಲೆಗೆ ಚಿತ್ರೀಕರಣ ಮಾಡುವಾಗ, ಎರಡು ಬಹಳ ಶಕ್ತಿಶಾಲಿ ವಸ್ತುಗಳಾದ ತೆಂಗು ಮತ್ತು ಈರುಳ್ಳಿಯ ಪ್ರಯೋಜನಗಳನ್ನು ಹೇಳುವ ಸಮಯದಲ್ಲೇ ಗ್ರಾಹಕರೊಂದಿಗೆ ಪ್ರತಿಸ್ಪಂದಿಸುವ ಭಾವವನ್ನು ಅಥ-'ಮಾಡಿಕೊಂಡು ಹಿಡಿದಿಡುವುದು ಬಹಳ ಮುಖ್ಯವಾಗಿತ್ತು.”ಎಂದು ಹೇಳಿದರು.

## ಅಧಿಕಾರ ವಿಚಾರ ನೋಡಿಕೊಳ್ಳಲು ಹೈ ಕಮಾಂಡ್ ಇದೆ: ಡಿಕೆಶಿ



ಬೆಂಗಳೂರು: ‘ಯಾರಾದರೂ ಏನು ಬೇಕಾದರೂ ಹೇಳಿಕೊಳ್ಳಲಿ. ನಾನು ಆ ಬಗ್ಗೆ ಏನೂ ಮಾತಾಡುವುದಿಲ್ಲ. ಅಧಿಕಾರ ಮತ್ತಿತರ ಪಕ್ಷದ ವಿಚಾರಗಳನ್ನು ನೋಡಿಕೊಳ್ಳಲು ಎಐಸಿಸಿ ಇದೆ’ ಎಂದು ಕೆಪಿಸಿಸಿ ಅಧ್ಯಕ್ಷ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಸಿದ್ದರಾಮಯ್ಯ ಅವರೇ ಮುಂದಿನ ಐದು ವರ್ಷವೂ ಮುಖ್ಯಮಂತ್ರಿಯಾಗಿ ಮುಂದುವರೆಯಲಿದ್ದಾರೆ, ಸಿ.ಎಂ ಅಧಿಕಾರ ಹಂಚಿಕೆ ಪ್ರಶ್ನೆಯೇ ಇಲ್ಲ. ಈ ಬಗ್ಗೆ ಯಾವುದೇ ಚರ್ಚೆ ಆಗಿಲ್ಲ’ ಎಂದು ಸಚಿವ ಎಂ. ಬಿ. ಪಾಟೀಲ ಅವರು ಸೋಮವಾರ ಹೇಳಿದ್ದರು.

ಬಗ್ಗೆ ಸುದ್ದಿಗಾರರ ಕೇಳಿದ ಪ್ರಶ್ನೆಗೆ ಮಂಗಳವಾರ ಉತ್ತರಿಸಿದ ಶಿವಕುಮಾರ್, ‘ಎಲ್ಲ ವಿಚಾರಗಳನ್ನು ನೋಡಿಕೊಳ್ಳಲು ಪಕ್ಷದ ರಾಷ್ಟ್ರೀಯ ಮುಖಂಡರು ಇದ್ದಾರೆ. ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಮಾತ್ರ ನಮ್ಮ ಆದ್ಯತೆ’ ಎಂದರು.

## ಬೆಳಗಾವಿಯಲ್ಲಿ ಜೂ.10 ರಂದು ಅಂತರಾಷ್ಟ್ರೀಯ ಮಾಧ್ಯಮ ಸಮ್ಮೇಳನ

ಬೆಳಗಾವಿ: ಬೆಳಗಾವಿ ಜಿಲ್ಲೆ ಅಷ್ಟೇ ಏಕೆ ರಾಜ್ಯದಲ್ಲಿಯೇ ಪ್ರಪ್ರಥಮಬಾರಿಗೆ ಅಂತರರಾಷ್ಟ್ರೀಯ ಮಾಧ್ಯಮ ಸಮ್ಮೇಳನ ಕುಂದಾನಗರಿ ಬೆಳಗಾವಿಯಲ್ಲಿ ಜೂನ್ 10, 2023 ರಂದು ನೆಹರು ನಗರದ ಕನ್ನಡ ಭವನದಲ್ಲಿ ಏರ್ಪಡಿಸಲಾಗಿದೆ.

ರಾಜ್ಯ, ರಾಷ್ಟ್ರ ಹಾಗೂ ಅಂತರಾಷ್ಟ್ರೀಯ ಪತ್ರಕರ್ತರನ್ನು ಒಂದೇ ಸೂರಿನಡಿ ಹಾಗೂ ಖ್ಯಾತ ಸಂಪಾದಕರು ಹಾಗೂ ಸಾಧಕರನ್ನು ಒಂದೇ ವೇದಿಕೆಯ ಮೇಲೆ ಸತ್ಕ-ರಿಸಲಾಗುವುದು.

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದು, ಕೇಂದ್ರ ಸಚಿವರಾದ ಪ್ರಲ್ಹಾದ ಜೋಷಿ ಸ್ಮರಣ ಸಂಚಿಕೆ ಬಿಡುಗಡೆ ಮಾಡುವರು.

**ಚಿಂತನ ಗೋಷ್ಠಿ:**

ಪರಿಸರ ನಾಶ ಮತ್ತು ಪತ್ರಕರ್ತರ ಜವಾಬ್ದಾರಿ; ಜಾಗತಿಕ ತಾಪಮಾನ ಏರಿಕೆ, ಮತ್ತು ವರದಿಗಾರಿಕೆ ಕುರಿತು ಚಿಂತನಗೋಷ್ಠಿ ನಡೆಯಲಿವೆ.

1. ಎಚ್ ಆರ್ ರಂಗನಾಥ , ಪ್ರಧಾನ ಸಂಪಾದರು ಪಬ್ಲಿಕ್ ಟಿವಿ.
2. ಸನತ್ ಜಯಸೂರ್ಯ ಖ್ಯಾತ ಕ್ರಿಕೆಟ್ ಪಟು ಶ್ರೀಲಂಕಾ.
3. ಚಲಕಾ ಗಜಬಾಹು, ಎಡಿ ಪ್ರವಾಸೋದ್ಯಮ ಉತ್ತೇಜನ ಸಮಿತಿ ಶ್ರೀಲಂಕಾ.



3. ಆನಂದ ಸಂಕೇಶ್ವರ , ಎಂ ಡಿ. ವಿ ಆರ್ ಎಲ್ ಗ್ರೂಪ್.
4. ಸಂಜಯ ಘೋಡಾವತ , ಒಆ ಸ್ಟಾರ್ ಏರ್ ಲೈನ್ಸ್, ಕೊಲ್ಹಾಪುರ.
5. ಗೀತಿಕಾ , ಅಂತರಾಷ್ಟ್ರೀಯ ಪತ್ರಕರ್ತೆ, ಕೊರಿಯಾ ಅವರು ಗೋಷ್ಠಿಯಲ್ಲಿ ಭಾಗವಹಿಸಲಿದ್ದಾರೆ.

ಬೆಳಗಾವಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಗೌರವಾಧ್ಯಕ್ಷರಾದ ಡಾ: ಭೀಮಶಿ ಜಾರಕಿಹೊಳಿ ಅವರು ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಬೆಳಗಾವಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಿಲೀಪ್ ಕುರಂದವಾಡೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಕೆ.ವಿ.ಪ್ರಭಾಕರ್ ಅವರಿಗೆ ಆಹ್ವಾನ:**

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರನ್ನು ಬೆಳಗಾವಿ ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘದಿಂದ ಅಭಿನಂದನಾ ಕಾರ್ಯಕ್ರಮಕ್ಕೆ ಆಹ್ವಾನಿಸಲಾಯಿತು.

ಜೂ.10 ಶನಿವಾರದಂದು ಬೆಳಗಾವಿಯಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ಮಾಧ್ಯಮ ಸಮ್ಮೇಳದಲ್ಲಿ ಅವರನ್ನು ಸನ್ಮಾನಿಸಲಾಗುವುದು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾಗಿ ಸಂಪುಟ ದರ್ಜೆ ಸ್ಥಾನಮಾನದೊಂದಿಗೆ ನೇಮಕಗೊಂಡಿರುವ ಹಿರಿಯ ಪತ್ರಕರ್ತರಾದ ಕೆ.ವಿ.ಪ್ರಭಾಕರ್ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ **(KUWJ)** ಬೆಳಗಾವಿ ಜಿಲ್ಲಾ ಘಟಕದಿಂದ ಗೌರವ ಸನ್ಮಾನಕ್ಕೆ ಬೆಂಗಳೂರಿನ ವಿಧಾನಸೌಧದಲ್ಲಿ ಅವ-ರಿಗೆ ಮಖಗಳವಾರ(ಮೇ 22) ಆಹ್ವಾನ ನೀಡಲಾಯಿತು.



ನಾಡೋಜ ಹಾಗೂ ಪದ್ಮಶ್ರೀ ಪ್ರಶಸ್ತಿಗೆ ಭಾಜನರಾಗಿರುವ ವೃಕ್ಷಮಾತೆ ಸಾಲು ಮರದ ತಿಮ್ಮಕ್ಕ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಶುಭ ಹಾರೈಸಿದರು. ನಾಡಿನಲ್ಲಿ ಮಳೆ, ಬೆಳೆ ಸಮೃದ್ಧವಾಗಲಿ. ಉತ್ತಮ ಆಡಳಿತ ನಡೆಸುವಂತಾಗಲಿ ಎಂದು ತಿಮ್ಮಕ್ಕ ಅವರು ಶುಭ ಹಾರೈಸಿದರು. ನಿಮ್ಮ ಆರೋಗ್ಯ ಚೆನ್ನಾಗಿ ನೋಡಿಕೊಳ್ಳಿ, ಸರ್ಕಾರ ನಿಮ್ಮ ಬಗ್ಗೆ ಕಾಳಜಿ ವಹಿಸುತ್ತದೆ ಎಂದು ಸಿದ್ದರಾಮಯ್ಯ ಅವರು ತಿಮ್ಮಕ್ಕ ಅವರಿಗೆ ತಿಳಿಸಿದರು.

## ಲಂಚ ಸ್ವೀಕರಿಸುವಾಗ ಸಿಕ್ಕಿಬಿದ್ದ ಪಿಎಸ್‌ಐ



ಹಾವೇರಿ: 40 ಸಾವಿರ ರೂ. ಲಂಚ ಪಡೆಯುತ್ತಿದ್ದ ಪಿಎಸ್‌ಐ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ಜಿಲ್ಲೆಯ ರಾಣೆಬೆನ್ನೂರಲ್ಲಿ ನಡೆದಿದೆ.

ಶಹರ ಪೊಲೀಸ್ ಠಾಣೆ ಪಿಎಸ್‌ಐ ಸುನೀಲ್ ತೇಲಿ ಮತ್ತು ಅವರ ವಾಹನ ಚಾಲಕ ಸಚಿನ್ ಎಂಬವರನ್ನು ಲೋಕಾಯುಕ್ತ ಅಧಿಕಾರಿಗಳು ಬಂಧಿಸಿದ್ದಾರೆ. ಫಿರೋಜ್ ಎಂಬುವರಿಗೆ ಮನೆ ಬಾಡಿಗೆ ವಸೂಲಿ ಮಾಡಿಕೊಡಲು ಪಿಎಸ್‌ಐ ಸುನೀಲ್ ತೇಲಿ ಅವರು 50 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದರು.

ಈ ಬಗ್ಗೆ ಫಿರೋಜ್ ಅವರು ಲೋಕಾಯುಕ್ತಕ್ಕೆ ದೂರು ನೀಡಿದ್ದರು. ಅದರಂತೆ ನಡೆದ ಕಾರ್ಯಾಚರಣೆ ವೇಳೆ 40 ಸಾವಿರ ಲಂಚ ಪಡೆಯುವಾಗ ಲಂಚದ ಹಣ ಸಹಿತ ಇಬ್ಬರನ್ನು ಅಧಿಕಾರಿಗಳು ಬಂಧಿಸಿದ್ದಾರೆ.

## ತಾಡಪಾಲ್‌ಗಾಗಿ ರೈತರಿಂದ ಅರ್ಜಿ ಆಹ್ವಾನ

ತಾಳಿಕೋಟೆ: 2022-23ನೇ ಸಾಲಿನ ಕೃಷಿ ಸಂಸ್ಕರಣೆ ಯೋಜನೆಯಡಿ ತಾಡಪಾಲ್ ಪಡೆದುಕೊಳ್ಳಲು ರೈತರಿಂದ ಅರ್ಜಿ ಕರೆಯಲಾಗಿದೆ ಎಂದು ರೈತ ಸಂಪರ್ಕ ಕೇಂದ್ರದ ಅಧಿಕಾರಿ ಮಹೇಶ ಜೋಶಿ ಅವರು ತಿಳಿಸಿದ್ದಾರೆ.

ಸಾಮಾನ್ಯ ರೈತರು ಎಫ್‌ಐಡಿ ಸಂಖ್ಯೆ, ಆಧಾರ ಕಾರ್ಡ, ಪಹಣಿ, ಭಾವಚಿತ್ರದೊಂದಿಗೆ ಸಲ್ಲಿಸಬೇಕು ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡದ



ರೈತರು ಜಾತಿ ಪ್ರಮಾಣ ಪತ್ರದ ಪ್ರತಿಗಳೊಂದಿಗೆ ನಿಗಧಿತ ಅರ್ಜಿ ನಮೂನೆಯೊಂದಿಗೆ ಲಗತ್ತಿಸಿ ಕುದ್ದಾಗಿ ರೈತ ಸಂಪರ್ಕ ಕೇಂದ್ರಕ್ಕೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸುವ ರೈತರು ಕಡ್ಡಾಯವಾಗಿ ಎಫ್‌ಐಡಿ ಸಂಖ್ಯೆ ಹೊಂದಿರಬೇಕು, ಕಳೆದ ವರ್ಷ ತಾಡಪಾಲ್ ಪಡೆದ ರೈತರು ಈ ವರ್ಷ ಅರ್ಜಿ ಸಲ್ಲಿಸಲು ಅರ್ಹರಾಗಿರುವದಿಲ್ಲಾ ಅರ್ಜಿ ಸಲ್ಲಿಸಲು ಮೇ.30 ಕೊನೆಯದಿನವಾಗಿದ್ದು ಜೂನ 1 ರಂದು ಲಾಟರಿ ಮುಖಾಂತರ ರೈತರನ್ನು ಆಯ್ಕೆ ಮಾಡಿ ತಾಡಪಾಲ್‌ಗಳನ್ನು ವಿತ-ರಿಸಲಾಗುವದು.

ಲಾಟರಿಯಲ್ಲಿ ಆಯ್ಕೆಯಾದ ರೈತರು ತಮ್ಮ ಸ್ವಿಕೃತಿ ಪತ್ರ ನೀಡಿ ತಾಡಪಾಲ್ ಪಡೆಯಬೇಕೆಂದು ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಮಹೇಶ ಜೋಶಿ ಅವರು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ರಫ್ತು ಮಾಡುವ ಕೆಮ್ಮಿನ ಔಷಧಗಳಿಗೆ ಪರೀಕ್ಷೆ ಕಡ್ಡಾಯ

ನವದೆಹಲಿ: ಭಾರತದ ಕೆಮ್ಮಿನ ಔಷಧ ಸೇವಿಸಿದ ಬಳಿಕ ಗಾಂಬಿಯಾ ಹಾಗೂ ಉಜ್ಬೇಕಿಸ್ತಾನದಲ್ಲಿ ಹಲವು ಮಕ್ಕಳು ಮೃತಪಟ್ಟ ಬೆನ್ನಲ್ಲೇ, ಇದೀಗ ರಫ್ತಾಗುವ ಕೆಮ್ಮಿನ ಔಷಧಗಳನ್ನು ಸರ್ಕಾರಿ ಪ್ರಯೋಗಾಲಯದಲ್ಲಿ ಪರೀಕ್ಷೆಗೆ ಒಳಪಡಿಸಬೇಕು ಎಂದು ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ.

ಜೂ. 1 ರಿಂದ ಈ ನಿಯಮ ಅನ್ವಯವಾಗಲಿದೆ ಎಂದು ಆರೋಗ್ಯ ಸಚಿವಾಲಯದ ಆದೇಶದಲ್ಲಿ ಹೇಳಲಾಗಿದೆ. ರಫ್ತು ಮಾಡುವುದಕ್ಕೂ ಮುನ್ನ ಸರ್ಕಾರಿ ಪ್ರಯೋಗಾಲಯದಲ್ಲಿ ಪರೀಕ್ಷೆಗೆ ಒಳಪಡಿಸಿ ಪ್ರಮಾಣಪತ್ರ ಪಡೆಯಬೇಕು ಎಂದು ಸೂಚಿಸಲಾಗಿದೆ.

ರಫ್ತು ಮಾಡುವ ಮಾದರಿಯನ್ನು ಪರೀಕ್ಷೆ ಮಾಡಿ, ಉತ್ಪಾದನೆ ವಿಶ್ಲೇಷಣೆಯ ಪ್ರಮಾಣಪತ್ರ ಪಡೆದು ಕೆಮ್ಮಿನ ಔಷಧ ರಫ್ತು ಮಾಡಬೇಕು‘ ಎಂದು ವಾಣಿಜ್ಯ ಸಚಿವಾಲಯದ ನೋಟಿಸ್‌ನಲ್ಲಿ ಹೇಳಲಾಗಿದೆ.

ಭಾರತದ ಕೆಮ್ಮಿನ ಔಷಧಗಳನ್ನು ಸೇವಿಸಿ ಗಾಂಬಿಯಾದಲ್ಲಿ 70 ಮಕ್ಕಳ ಹಾಗೂ ಉಜ್ಬೇಕಿಸ್ತಾನದಲ್ಲಿ 19 ಮಕ್ಕಳ ಸಾವಾಗಿತ್ತು. ಇದು ಭಾರತದ ಔಷಧ ಮಾರುಕಟ್ಟೆ ಮೇಲೆ ನಕಾರಾತ್ಮಕ ಪರಿಣಾ ಬೀರಿತ್ತು.

## ’5 ವರ್ಷ ಸಿದ್ದರಾಮಯ್ಯನೇ ಸಿಎಂ’: ಉಲ್ಟಾ ಹೊಡೆದ ಎಂ.ಬಿ ಪಾಟೀಲ್



ಬೆಂಗಳೂರು: ನಿನ್ನೆ ಸಚಿವ ಎಂಬಿ ಪಾಟೀಲ್ ಕರ್ನಾಟಕದ ಮುಖ್ಯ ಮಂತ್ರಿಯಾಗಿ ಸಿದ್ದರಾಮಯ್ಯ 5 ವರ್ಷಗಳ ಕಾಲ ಆಡಳಿತ ನಡೆಸಲಿದ್ದಾರೆ ಎಂದು ಹೇಳಿದ್ದರು.

ಆದರೀಗ ಈ ಹೇಳಿಕೆಯ ಕುರಿತಾಗಿ ಉಲ್ಟಾ ಹೊಡೆದಿದ್ದಾರೆ.

ಪಕ್ಷದ ವರಿಷ್ಠರು ಹೇಳಿದ್ದನ್ನಷ್ಟೇ ನಾನು ಹೇಳಿದ್ದೇನೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಸದಾಶಿವನಗರದಲ್ಲಿ ಮಾತನಾಡಿದ ಸಚಿವ ಎಂ.ಬಿ ಪಾಟೀಲ್, ನಾನು ಪದೇ ಪದೇ ಮಾತನಾಡಲ್ಲ.

ನಿನ್ನೆ ಮಾಧ್ಯಮದವರು ಒಂದು ಪ್ರಶ್ನೆ ಕೇಳಿದ್ರು. ಸಿದ್ದರಾಮಯ್ಯ ಬದಲಾಗ್ತಾರಾ ಅಂತ ಕೇಳಿದ್ರು. ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆಶಿ ಅಂತ ನಮ್ಮ ನಾಯಕರು ಹೇಳಿದ್ದರು. ಕೆ.ಸಿ ವೇಣುಗೋಪಾಲ್ ಸುದ್ದಿಗೋಷ್ಠಿಯಲ್ಲಿ ಏನು ಹೇಳಿದ್ರೋ ನಾನು ಅದನ್ನೇ ಹೇಳಿದೆ ಎಂದು ಹೇಳಿದ್ದಾರೆ.

ನಂತರ ಮಾತು ಮುಂದುವರಿಸಿದ ಅವರು, ಪವರ್ ಶೇರಿಂಗ್ ಇಲ್ಲ. ಇದ್ರೆ ಅದು ಜನರ ಜೊತೆ ಮಾತ್ರ ಅಂತ ಹೇಳಿದ್ರು. ನನ್ನದು ಯಾವುದೇ ಹೇಳಿಕೆ ಇಲ್ಲ. ನಾನು ವೈಯಕ್ತಿಕವಾಗಿ ಮಾತನಾಡಿಲ್ಲ.

ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಹೇಳಿದ್ದನ್ನ ಅಷ್ಟೇ ನಾನು ಹೇಳಿದ್ದು ಎಂದು ಹೇಳಿದ್ದಾರೆ.

# ಜಿಲ್ಲೆಯಲ್ಲಿ ಬಿತ್ತನೆ ಬೀಜ ವಿತರಣೆಗೆ ಕ್ರಮ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ: ಮುಂಗಾರು ಹಂಗಾಮಿಗೆ ಅನುಕೂಲವಾಗುವಂತೆ ಜಿಲ್ಲೆಯಲ್ಲಿ ರೈತ ಸಂಪರ್ಕ ಕೇಂದ್ರಗಳು ಸೇರಿದಂತೆ ಒಟ್ಟು 170 ಕೇಂದ್ರಗಳ ಮೂಲಕ ಬಿತ್ತನೆ ಬೀಜ ವಿತರಣೆಯನ್ನು ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

ಮಾನ್ಯ ಮುಖ್ಯಮಂತ್ರಿಗಳ ವಿಡಿಯೋ ಸಂವಾದದ ಬಳಿಕ ಅಧಿಕಾರಿಗಳ ಸಭೆಯನ್ನು ನಡೆಸಿದ ಅವರು, ಯಾವುದೇ ಕಾರಣಕ್ಕೂ ರೈತರಿಗೆ ಅನಾನುಕೂಲ ಆಗದಂತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಮುಂಗಾರು ಹಂಗಾಮಿನಲ್ಲಿ ಆಶಾದಾಯಕ ಮಳೆಯಾಗುವ ನೀರಿಕ್ಷೆಗಳಿದ್ದು, ಈ ಹಿನ್ನೆಲೆಯಲ್ಲಿ ಮುಂಗಾರು ಹಂಗಾಮಿಗೆ ಜಿಲ್ಲೆಗೆ ಅವಶ್ಯವಿರುವ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಪೂರಕ ಪರಿಕರಗಳ ದಾಸ್ತಾನು ಮಾಡಲಾಗಿದೆ.

ಈ ಹಿನ್ನಲೆಯಲ್ಲಿ ಕೃಷಿ ಇಲಾಖೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ಮುಂಗಾರು ಹಂಗಾಮಿನ ಪ್ರಮುಖ ಬೆಳೆಗಳಿಗೆ ಶಿಫಾರಸ್ಸು ಮಾಡಿದ ತಳಿಗಳನ್ನು ರಿಯಾಯತಿದರದಲ್ಲಿ ವಿತರಿಸಲು ಅಶ್ಯವಿರುವ ಪ್ರಮಾಣದಷ್ಟು ಬೀಜದ ದಾಸ್ತಾನು ಮಾಡಲಾಗಿದೆ. ಜಿಲ್ಲೆಯ 35 ರೈತ ಸಂಪರ್ಕ ಕೇಂದ್ರಗಳ ಮೂಲಕ ಹಾಗೂ 135 ಹೆಚ್ಚುವರಿ ವಿತರಣಾ ಕೇಂದ್ರಗಳ ಮೂಲಕ ಪ್ರಮುಖ ಬೆಳೆಗಳ ಬಿತ್ತನೆ ಬೀಜಗಳನ್ನು ಸಹಾಯಧನದಲ್ಲಿ ವಿತರಿಸಲಾಗುವುದು.

ಮುಂಗಾರು ಹಂಗಾಮಿಗೆ ಸದ್ಯ ಅವಶ್ಯವಿರುವ ಡಿ.ಎ.ಪಿ, ಯೂರಿಯಾ ಹಾಗು ಕಾಂಪ್ಲೆಕ್ಸ ರಸಗೊಬ್ಬರಗಳನ್ನು ದಸ್ತಾನು ಮಾಡಲಾಗಿದ್ದು ರೈತರು ವಿವೇಚನೆಯಿಂದ ಸಮತೋಲನ ರಸಗೊಬ್ಬರಗಳನ್ನು ಅಧಿಕೃತ ಮಾರಾಟಗಾರರಿಂದ ಪಿಓಎಸ್ ಮೂಲಕ ತಮ್ಮ ದಾಖಲೆಗಳನ್ನು ನೀಡಿ ಖರೀದಿಸಲು ಕೋರಲಾಗಿದೆ.

ರೈತ ಬಾಂಧವರು ಹೆಚ್ಚಿನತಾಂತ್ರಿಕ ಮಾಹಿತಿಯನ್ನು ಹತ್ತಿರದರೈತ ಸಂಪರ್ಕಕೇಂದ್ರ/ ಕೃಷಿ ವಿಜ್ಞಾನ ಕೇಂದ್ರ/ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಭೇಟಿ ನೀಡಿ ಪಡೆದುಕೊಳ್ಳಬೇಕು ಎಂದು ನಿತೇಶ್ ಪಾಟೀಲ, ಜಿಲ್ಲಾಧಿಕಾರಿಗಳು ತಿಳಿಸಿರುತ್ತಾರೆ.

ರೈತರ ಬೇಡಿಕೆಗೆ ಅನುಗುಣವಾಗಿ ಬಿತ್ತನೆ ಬೀಜಗಳ ಸಮರ್ಪಕವಾಗಿ ವಿತರಿಸಲು ಸೂಕ್ತ ವ್ಯವಸ್ಥೆ ಕಲ್ಪಿಸಬೇಕು ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದಲ್ಲದೇ ಗೊಬ್ಬರ ಹಾಗೂ ಕೀಟನಾಶಕಗಳ ವಿತರಣೆಗೆ ಕ್ರಮ ಕೈಗೊಳ್ಳಬೇಕು ಎಂದರು.

**ಬೆಳೆ ಪರಿಹಾರ ವಿತರಣೆಗೆ ಕ್ರಮ:**

ರಾಜ್ಯ ಸರಕಾರವು ಶೀಘ್ರದಲ್ಲೇ "ಪರಿಹಾರ ಪೋರ್ಟಲ್" ತೆರೆದು ಬೆಳೆಹಾನಿ ವಿವರ ಭರ್ತಿಗೆ ಅವಕಾಶ ಕಲ್ಪಿಸಲಿದೆ. ಆದ್ದರಿಂದ ಜಿಲ್ಲೆಯಲ್ಲಿ ಇತ್ತೀಚಿನ ಮಳೆಯಿಂದ ಉಂಟಾಗಿರುವ ಬೆಳೆಹಾನಿಗೆ ಸಂಬಂಧಿಸಿದಂತೆ ಪರಿಹಾರ ನೀಡಲು ಕ್ರಮ ಕೈಗೊಳ್ಳಬೇಕು ಎಂದರು.

ಯಾವುದೇ ಜನ–ಜಾನುವಾರುಗಳ ಪ್ರಾಣಹಾನಿ ಸಂಭವಿಸಿದಲ್ಲಿ 24 ಗಂಟೆಗಳಲ್ಲಿ ನಿಯಮಾವಳಿ ಪ್ರಕಾರ ಪರಿಹಾರವನ್ನು ಒದಗಿಸಬೇಕು ಎಂದು ಉಪ ವಿಭಾಗಾಧಿಕಾರಿಗಳು ಮತ್ತು ತಹಶೀಲ್ದಾರರಿಗೆ ಸೂಚನೆ ನೀಡಿದರು.

**ಶಿಥಿಲ ಶಾಲಾ ಕೊಠಡಿಗಳ ಪರಿಶೀಲನೆಗೆ ಸೂಚನೆ:**

ಮಳೆಗಾಲ ಆರಂಭಗೊಳ್ಳುತ್ತಿರುವುದ–ರಿಂದ ಜಿಲ್ಲೆಯಲ್ಲಿ ಶಿಥಿಲ ಗೊಂಡಿರುವ ಶಾಲಾ ಕೊಠಡಿಗಳನ್ನು ಪರಿಶೀಲಿಸಬೇಕು.

ಒಂದು ವೇಳೆ ಶಿಥಿಲಗೊಂಡಿರುವ ಕಟ್ಟಡಗಳಿದ್ದರೆ ಅವುಗಳ ದುರಸ್ತಿ ಮಾಡಬೇಕು ಅಥವಾ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬೆಳಗಾವಿ ನಗರದಲ್ಲಿ ಮಳೆಗಾಲದಲ್ಲಿ ಪ್ರಮುಖ ರಸ್ತೆಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ಕಸ ತೆಗೆದು ಸ್ವಚ್ಛತೆ ಮಾಡಬೇಕು.

ಶಿಥಿಲಗೊಂಡಿರುವ ಸೇತುವೆ, ರಸ್ತೆಗಳ ದುರಸ್ತಿ ಮಾಡಬೇಕು. ಯಾವುದೇ ರೀತಿಯ ಅನಾಹುತ ಆಗದಂತೆ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಅಪಾಯದ ಮಟ್ಟ ತಲುಪುವ ಕೆರೆಕಟ್ಟೆಗಳ ಮೇಲೆ ನಿಗಾ ವಹಿಸುವಂತೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಅಧಿಕಾರಿಗಳಿಗೆ ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರ್ಷಲ್ ಭೋಯರ್ ಉಪಸ್ಥಿತರಿದ್ದರು.

ಉಪ ವಿಭಾಗಾಧಿಕಾರಿ ಬಲರಾಮ್ ಚವಾಣ, ಬೈಲಹೊಂಗಲ ಉಪ ವಿಭಾಗಾಧಿಕಾರಿ ಪ್ರಭಾವತಿ, ಮಹಾನಗರ ಪಾಲಿಕೆ ಆಯುಕ್ತರಾದ ಡಾ.ರುದ್ರೇಶ್ ಘಾಳಿ ಸೇರಿದಂತೆ ಕೃಷಿ, ತೋಟಗಾರಿಕೆ, ನೀರಾವರಿ, ಆಹಾರ, ಆರೋಗ್ಯ, ಪಶುಪಾಲನೆ, ಲೋಕೋಪಯೋಗಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.




## ಲಂಚಕ್ಕೆ ಬೇಡಿಕೆಯಿಟ್ಟ ಪಶು ವೈದ್ಯಾಧಿಕಾರಿ ಲೋಕಾಯುಕ್ತ ಬಲೆಗೆ

ಚಿತ್ರದುರ್ಗ: ಹಸುವಿನ ಮರಣೋತ್ತರ ಪರೀಕ್ಷೆ ವರದಿ ನೀಡಲು ಲಂಚ ಸ್ವೀಕರಿಸುತ್ತಿದ್ದ ವೇಳೆ ಪಶು ವೈದ್ಯಾಧಿಕಾರಿ ಲೋಕಾಯುಕ್ತ ಬಲೆಗೆ ಬಿದ್ದಿರುವಂತಹ ಘಟನೆ ಜಿಲ್ಲೆಯ ಹೊಳಲ್ಕೆರೆ ತಾಲೂಕಿನ ಚಿಕ್ಕಜಾಜೂರು ಗ್ರಾಮದಲ್ಲಿ ನಡೆದಿದೆ.

ಎಸ್ಪಿ ಮೃತ್ಯುಂಜಯ ನೇತೃತ್ವದಲ್ಲಿ ಕಾರ್ಯಾಚರಣೆ ಮಾಡಿದ್ದು, ಚಿಕ್ಕಜಾಜೂರು ಪಶು ಆಸ್ಪತ್ರೆ ವೈದ್ಯಾಧಿಕಾರಿ ಡಾ. ತಿಪ್ಪೇಸ್ವಾಮಿ ಬಲೆಗೆ ಬಿದ್ದಾರೆ. ಮೃತ ಹಸುವಿನ ಪೋಸ್ಟ್ ಮಾರ್ಟಂ ರಿಪೋರ್ಟ್ ನೀಡಲು ಕಾಗಳಗೆರೆ ಗ್ರಾಮದ ರೈತ ಎಸ್.ಸ್ವಾಮಿಯಿಂದ 7,000 ರೂ. ಲಂಚ ಸ್ವೀಕರಿಸುತ್ತಿದ್ದರು ಎನ್ನಲಾಗಿದೆ.

## ಆಯ್ಕೆ ಕೆಲಸದಿಂದ ಪ್ರಗತಿ ಹೊಂದಲು ಕರೆ: ಡಾ. ಶ್ರೀಕಾಂತ ಅಂಬೇಕರ



ಬೆಳಗಾವಿ: ವಿದ್ಯಾರ್ಥಿಗಳು ತಮ್ಮ ಪ್ರಥಮಆಯ್ಕೆಯ ಮೂಲಕ ಉದ್ಯೋಗವನ್ನು ಗಳಿಸಿಕೊಳ್ಳುವುದು ಬಹಳ ಮಹತ್ವದ್ದು ಹಾಗೂ ಉದ್ಯೋಗ ಸ್ಥಳದಲ್ಲಿ ತಮ್ಮ ಕೌಶಲ್ಯಕಲೆಗಳನ್ನು ಬಳಸಿಕೊಂಡು ಪ್ರಗತಿ ಹೊಂದುವತ್ತ ವಿಚಾರಿಸಬೇಕು.

ಕೆಲಸಕಾರ್ಯಗಳಲ್ಲಿ ಹಾಗೂ ತಮ್ಮ ವೈಯಕ್ತಿಕಜೀವನದಲ್ಲಿ ಸಮತೋಲನ ಹೊಂದಬೇಕೆಂದು ಬೆಳಗಾವಿಯ ವಿಶ್ವೇಶ್ವರಯ್ಯತಾಂತ್ರಿಕ ವಿಶ್ವವಿದ್ಯಾಲಯದ (ವಿಟಿಯು ಸಿಪಿಸಿ) ಪ್ಲೇಸ್‌ಮೆಂಟ ನಿರ್ದೇಶಕರಾದಡಾ. ಶ್ರೀಕಾಂತ ಅಂಬೇಕರಕರೆ ನೀಡಿದರು.

ನಗರದಅಂಗಡಿತಾಂತ್ರಿಕ ಮತ್ತು ವ್ಯವಸ್ಥಾಪನಾ ಮಹಾವಿದ್ಯಾಲಯದಲ್ಲಿ ಶುಕ್ರವಾರ, ದಿನಾಂಕ 19.05.2023 ರಂದು ಉದ್ಯೋಗ ನಿಯೋಜನೆ–2023 (ಪ್ಲೇಸ್‌ಮೆಂಟಡೇ – 2023) ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗೌರವಾನ್ವಿತಅತಿಥಿ, ಅಕ್ಯಾಡೆಮಿಕ್‌ಅ–ಡ್ವೈಜರ್‌ಡಾ. ಡಿ.ಎಚ್.ರಾವ್ ಮಾತನಾಡಿ, ವಿದ್ಯಾರ್ಥಿಗಳು ಶಿಸ್ತು, ಶಕ್ತಿ ಹಾಗೂ ಗಮನಗಳಿಂದ ತಮ್ಮಇಷ್ಟವಾದ ಉದ್ಯೋಗಗಳನ್ನು ಆರಿಸಿಕೊಂಡು ನಿಧಾನ ಮತ್ತು ಸ್ಥಿರವಾದ ಕೆಲಸಗಳಲ್ಲಿ ಆಸಕ್ತಿಯನ್ನು ಹೊಂದಿ ತಮ್ಮಜೀವನವನ್ನು ರೂಪಿಸಿಕೊಳ್ಳಬೇಕೆಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಆನಂದದೇಶಪಾಂಡೆ ಮಾತನಾಡಿ, ವಿದ್ಯಾರ್ಥಿಗಳು ತಾವು ಗಳಿಸುವ ಆದಾಯದಲ್ಲಿ ಶೇ.30ರಿಂದ ಶೇ.40ರಷ್ಟು ಹಣವನ್ನು ತಂದೆ–ತಾಯಿಗಳಿಗೆ ಕೊಡುವುದು ಹಾಗೂ ಅವರನ್ನು ವೃದ್ಧಾಶ್ರಮಕ್ಕೆ ಬಿಡದೆತಮ್ಮಲ್ಲಿಯೇ ಇಟ್ಟುಕೊಂಡುಜೀವನ ನಡೆಸಲುಕರೆ ನೀಡಿದರು.

ಪ್ರೊ. ಮಂಜುಶ್ರಿ ಹಾವಣ್ಣವರ, ಸಂಯೋಜನಾಧಿಕಾರಿ ಪ್ಲೇಸ್‌ಮೆಂಟ–ರಿಪೋರ್ಟ ಓದಿ ಹೇಳುತ್ತಾ, ಉದ್ಯೋಗ ನಿಯೋಜನೆಯಿಂದ–ಎಲ್ಲ ವಿದ್ಯಾರ್ಥಿಗಳಿಗೆ ತರಬೇತುಗೊಳಿಸಲಾಗಿದೆ.

ಪ್ರಸ್ತುತ ಸಾಲಿನಲ್ಲಿ120 ಕ್ಕೂ ಅಧಿಕ ಸರಕು ಹಾಗೂ ಉತ್ಪನ್ನ ಕಂಪನಿಗಳು ಭಾಗವಹಿಸಿದ್ದು, ಇದರಲ್ಲಿಕಾಲೇಜಿನ ಶೇ.70ರಿಂದ ಶೇ.80ರಷ್ಟು ವಿದ್ಯಾರ್ಥಿಗಳು ಉದ್ಯೋಗಗಳನ್ನು ದೊರಕಿಸಿ ಕೊಳ್ಳುವಲ್ಲಿ ಯಶಸ್ವಿಯಾಗಿದ್ದು, ವರ್ಷಕ್ಕೆ 6ರಿಂದ10 ಲಕ್ಷಗಳ ವೇತನ ದೊರಕಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಕಾಲೇಜಿನ ಪ್ಲೇಸಮೆಂಟಅಧಿಕಾರಿ ಪ್ರೊ. ವಿಶಾಲಕೀರ್ತಿ ಪಾಟೀಲ ಉದ್ಯೋಗ ನಿಯೋಜನೆಯ ವರದಿಯ ಮಾಹಿತಿಯನ್ನು ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನಎಲ್ಲ ವಿಭಾಗಗಳ ಮುಖ್ಯಸ್ಥರು, ಶಿಕ್ಷಕ–ಶಿಕ್ಷಕೇತರ ವೃಂದ, ಸಿಬ್ಬಂದಿಗಳು ಸೇರಿದಂತೆಉದ್ಯೋಗ ಗಳಿಸಿಕೊಂಡ ವಿದ್ಯಾರ್ಥಿಗಳು ಹಾಗೂ ಅವರುಗಳ ಪಾಲಕರು ಉಪಸ್ಥಿತರಿದ್ದರು.

ಪ್ರೊ. ವಿಶಾಲಕೀರ್ತಿ ಪಾಟೀಲ ಸ್ವಾಗತಿಸಿದರು. ಪ್ರೊ. ಕಿರಣಇಟಗಿ ಹಾಗೂ ಪ್ರೊ. ಶ್ರೀರಾಮ ಕೆ.ವಿ. ಪರಿಚಯಿಸಿದರು. ಪ್ರೊ. ಪ್ರಿಯಾಂಕಾ ಪೂಜಾರಿ ನಿರೂಪಿಸಿದರು. ಪ್ರೊ. ಪವನ ಕೋರ್ಲಹಳ್ಳಿ ವಂದಿಸಿದರು.

## ನಿಡಸೋಸಿಯಲ್ಲಿ ನರೇಗಾ ಕಾರ್ಮಿಕರಿಗೆ ಆರೋಗ್ಯ ತಪಾಸಣೆ



ಹುಕ್ಕೇರಿ : ಹುಕ್ಕೇರಿ ತಾಲೂಕಿನ 52 ಗ್ರಾಮ ಪಂಚಾಯತಿಗಳಲ್ಲಿ ಮೇ–22 ರಿಂದ 22– ಜೂನ ವರೆಗೆ ಒಂದು ತಿಂಗಳವರೆಗೆ ಗ್ರಾಮ ಆರೋಗ್ಯಅಭಿಯಾನ ಹಮ್ಮಿಕೊಳ್ಳಲಾಗುವುದು. ನರೇಗಾ ಯೋಜನೆಯ ಕಾರ್ಮಿಕರು ಇದರ ಸದುಪಯೋಗ ಪಡೆದುಕೊಳ್ಳಲು ಸಹಾಯಕ ನಿರ್ದೇಶಕರು (ಗ್ರಾ.ಉ) ಲಕ್ಷ್ಮೀನಾರಾಯಣ ಪಿ. ಕರೆ ನೀಡಿದರು.

ಅವರು ತಾಲೂಕಿನ ನಿಡಸೋಸಿ ಗ್ರಾಮದಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಉದ್ಯೋಗ ಚೀಟಿ ಹೊಂದಿದ ಕಾರ್ಮಿಕರಿಗೆ ಉಚಿತ ಉರೋಗ್ಯ ಶಿಬಿರ ಹಮ್ಮಿಕೊಂಡು ಕಾರ್ಮಿಕರ ಆರೋಗ್ಯ ಕಾಪಾಡುವುದು ಹಾಗೂ ಆರೋಗ್ಯದ ಕುರಿತು ಮಾತನಾಡಿದರು.

ಈ ಶಿಬಿರದಲ್ಲಿ ರಕ್ತದೊತ್ತಡ, ಟಿಬಿ ಸ್ಕ್ರೀನಿಂಗ್, ಅಪೌಷ್ಟಿಕತೆ, ರಕ್ತಹೀನತೆ, ಮಾನಸಿಕ ಆರೋಗ್ಯ ಈ ರೀತಿ 5 ನಮೂನೆ ಟೆಸ್ಟಗಳನ್ನು ಮಾಡಲಾಗುವುದು ಎಂದು ವೀಣಾ ಪಾಟೀಲ ಎ.ಎನ್.ಎಂ. ನಿಡಸೋಸಿ ಇವರು ಮಾಹಿತಿ ನೀಡಿದರು. ಸಕ್ಕರೆ ಕಾಯಿಲೆ, ರಕ್ತದೊತ್ತಡ ಇವುಗಳ ತಪಾಸಣೆಯನ್ನು ಮಾಡಿಕೊಳ್ಳಬೇಕು.

ಇವು ಮೊದಲು ಪಟ್ಟಣದ ಮಂದಿಯ ಕಾಯಿಲೆ ಅಂತಾ ಹೇಳುತ್ತಿದ್ದರು. ಆದರೆ ಈಗ ಎಲ್ಲರಿಗೂ ಈ ಕಾಯಿಲೆ ಬರುವುದು ಸಾಮಾನ್ಯವಾಗಿದೆ. ಇದಕ್ಕೆ ಹೆದರುವ ಅವಶ್ಯಕತೆ ಇಲ್ಲ ನೀವು ನಿಯಮಿತ ಆಹಾರ ಮತ್ತು ಯೋಗ ಮಾಡಿದರೆ ಇವುಗಳನ್ನು ನಿಯಂತ್ರಣದಲ್ಲಿ ಇಡಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಾವಿತ್ರಿ ಬ್ಯಾಕೂಡ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಜಯಾ ಚೆನ್ನಪ್ಪನವರ ಸಿ.ಎಚ್.ಓ. ನಿಡಸೋಸಿ, ಮಹಾಂತೇಶ ಬಾದವನಮಠ ಐ.ಇ.ಸಿ. ತಾಲೂಕಾ ಸಂಯೋಜಕರು, ಅರ್ಷದ ನೇರ್ಲಿ ತಾಲೂಕಾ ತಾಂತ್ರಿಕ ಸಂಯೋಜಕರು, ರಾಕೇಶ ಶಿಂಗೆ ತಾಲೂಕಾ ಸಂಯೋಜಕರು (KHPT), ಗಜಾನನ ಕೋಳಿ ಗಣಕಯಂತ್ರ ನಿರ್ವಾಹಕರು, ರೂಪಾ ವಾಘಿ ಗ್ರಾಮ ಕಾಯಕ ಮಿತ್ರ ಹಾಜ–ರಿದ್ದರು.

## 1,500 ರೂ. ಪೆಟ್ರೋಲ್ ಹಾಕಿಸಿದ್ರೆ ಮಾತ್ರ ಪಿಂಕ್ ನೋಟ್ ಕೊಡಿ: ಪೆಟ್ರೋಲ್ ಬಂಕ್‌ಗಳಲ್ಲಿ ಬೋರ್ಡ್ ಅಳವಡಿಕೆ




ಬೆಂಗಳೂರು: 2,000 ರೂ. ಮುಖಬೆಲೆಯ ನೋಟುಗಳನ್ನು ಆರ್ಬಿಐ (RBI) ಹಿಂಪಡೆದ ನಂತರ ಪೆಟ್ರೋಲ್ ಬಂಕ್‌ಗಳಲ್ಲಿ ಪಿಂಕ್ ನೋಟಿನ ಹಾವಳಿ ಜಾಸ್ತಿಯಾಗಿದೆ.

ಜನರು 200 ರೂ.ಗಳ ಪೆಟ್ರೋಲ್ ಹಾಕಿಸಿಕೊಂಡರೂ 2,000 ರೂ. ನೀಡುತ್ತಿದ್ದಾರೆ. ಇದರಿಂದ ಪೆಟ್ರೋಲ್ ಬಂಕ್ ಮಾಲೀಕರು ಸಂಕಷ್ಟದಲ್ಲಿ ಸಿಲುಕಿದ್ದಾರೆ.

2,000 ರೂ. ನೋಟ್ ಬ್ಯಾನ್ ಬೆನ್ನಲ್ಲೇ ಜನರು ತಮ್ಮಲ್ಲಿರುವ 2,000 ರೂ. ನೋಟುಗಳನ್ನು ಬ್ಯಾಂಕ್, ಆಸ್ಪತ್ರೆ ಹಾಗೂ ಪೆಟ್ರೋಲ್ ಬಂಕ್‌ನಲ್ಲಿ ಕೊಟ್ಟು ಬಚಾವ್ ಆಗುತ್ತಿದ್ದಾರೆ.

ಆದರೆ ಇದರಿಂದ ಪೆಟ್ರೋಲ್ ಬಂಕ್ ಮಾಲೀಕರು ಕಂಗೆಟ್ಟಿದ್ದಾರೆ. ಜನರು 100–200 ರೂ. ಪೆಟ್ರೋಲ್ ಹಾಕಿಸಿದರೂ 2,000 ರೂ. ಪಿಂಕ್ ನೋಟನ್ನು ಕೊಡುತ್ತಿದ್ದಾರೆ.

ಇದರಿಂದ ಬಂಕ್ ಮಾಲೀಕ–ರಿಗೆ ಚೇಂಜ್ ಸಮಸ್ಯೆ ಆಗುತ್ತಿದೆ.

ಇದರಿಂದ ಹೈರಾಣಾದ ಗೊರಗುಂಟೆಪಾಳ್ಯ ಪೆಟ್ರೋಲ್ ಬಂಕ್ ಮಾಲೀಕರು ಹೊಸದೊಂದು ಬೋರ್ಡ್ ಅನ್ನು ತಮ್ಮ ಪೆಟ್ರೋಲ್ ಬಂಕ್‌ನಲ್ಲಿ ಅಳವಡಿಸಿದ್ದಾರೆ.

ಆ ಬೋರ್ಡ್‌ನಲ್ಲಿ 1,500 ರೂ.ಗಳ ಪೆಟ್ರೋಲ್ ಹಾಕಿಸಿದರೆ ಮಾತ್ರ 2,000 ರೂ. ನೋಟನ್ನು ನೀಡಿ ಸಹಕರಿಸಿ ಎಂದು ಬರೆಯುವ ಮೂಲಕ ಜನರಲ್ಲಿ ಚೇಂಜ್ ನೀಡುವಂತೆ ಮನವಿ ಮಾಡಿದ್ದಾರೆ.

## ನಗರ ಸ್ವಚ್ಛತೆಗೆ ಪೌರ ಕಾರ್ಮಿಕರೊಂದಿಗೆ ಕೈಜೋಡಿಸಿ: ಪುರಸಭೆ ಅಧ್ಯಕ್ಷ ಬಸವರಾಜ ಜನ್ಮಟ್ಟಿ



ಬೈಲಹೊಂಗಲ: ಮೇರಾ ಸ್ವಚ್ಛ ಶಹರ ಯೋಜನೆಯಡಿಯಲ್ಲಿ ಕೈಗೊಳ್ಳುತ್ತಿರುವ ನನ್ನ ಸ್ವಚ್ಛ ನಗರವನ್ನಾಗಿಸಲು ಜನತೆ ಪುರಸಭೆ ಪೌರ ಕಾರ್ಮಿಕರೊಂದಿಗೆ ಕೈಜೋಡಿಸಿದಾಗ ಮಾತ್ರ ರಾಜ್ಯದಲ್ಲಿ ಬೈಲಹೊಂಗಲ ಪುರಸಭೆಯನ್ನು ಮಾದರಿ ನಗರವನ್ನಾಗಿಸಲು ಸಾಧ್ಯ ಇದಕ್ಕೆ ನನ್ನ ಸಂಪೂರ್ಣ ಸಹಕಾರ ನೀಡಲಾಗುವುದು ಎಂದು ಪುರಸಭೆ ಅಧ್ಯಕ್ಷ ಬಸವರಾಜ ಜನ್ಮಟ್ಟಿ ಹೇಳಿದರು.

ಪುರಸಭೆ ಆವರಣದಲ್ಲಿ ನಡೆದ ಮೇರಾ ಸ್ವಚ್ಛ ಶಹರ" ಯೋಜನೆಯಡಿಯಲ್ಲಿ ನನ್ನ ಸ್ವಚ್ಛ ನಗರ ಕಾರ್ಯಕ್ರಮದಡಿಯಲ್ಲಿ ಪುರಸಭೆಯ ಘನತ್ಯಾಜ್ಯ ನಿರ್ವಹಣೆ ಘಟಕದಲ್ಲಿ ಸ್ಥಾಪಿಸಲಾದ ಮರುಬಳಕೆ ಮತ್ತು ಪುನರ ಬಳಕೆ ಕೇಂದ್ರಗಳ ಉದ್ಘಾಟಣೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ, ತಮ್ಮ ಮನೆ, ಅಂಗಡಿಗಳಲ್ಲಿ ಉತ್ಪತ್ತಿಯಾಗುವ ಮರುಬಳಕೆ, ಪುನರ ಬಳಕೆಯಾಗುವ ವಸ್ತುಗಳನ್ನು ಪುರಸಭೆಗೆ ನೀಡಿ ಮರುಬಳಕೆ ಮತ್ತು ಪುನರಬಳಕೆ ಕೇಂದ್ರಗಳಲ್ಲಿ ಮೇ 20 ರಿಂದ ಜೂನ 5 ರವರೆಗೆ ಎಲ್ಲಾ ದಿನಗಳಲ್ಲಿ ಬೆಳಿಗ್ಗೆ 7 ರಿಂದ ಮಧ್ಯಾಹ್ನ 1 ಗಂಟೆವರೆಗೆ ಸ್ವೀಕರಿಸಲಾಗುತ್ತದೆ. ಈ ಕೇಂದ್ರಗಳಲ್ಲಿ ಮರು ಬಳಕೆ ಮಾಡಬಹುದಾದಂತಹ ವಸ್ತುಗಳನ್ನು ನೀಡಿ ಪ್ರೋತ್ಸಾಹಕಗಳನ್ನು ಪಡೆದು ಪರಿಸರ ಸಂರಕ್ಷಣೆಯಲ್ಲಿ ಎಲ್ಲರೂ ಭಾಗಿಯಾಗಲು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ಸ್ವಚ್ಛ ಭಾರತ ಮಿಷನ್ ನಗರ 2–0 ಯೋಜನೆಯಡಿ ಪ್ಲಾಸ್ಟಿಕ್ ಕ್ಯಾರಿ ಬ್ಯಾಗ್ ಸೇರಿದಂತೆ ಆಟಿಕೆ ವಸ್ತುಗಳು, ಬಳಸಿದ ಬಟ್ಟೆ, ದಿನಪತ್ರಿಕೆಗಳು, ಹಳೆ ಪುಸ್ತಕಗಳು ಹಾಗೂ ಎಲೆಕ್ಟ್ರಾನಿಕ್ ವಸ್ತುಗಳಂತಹ ಇನ್ನಿತರ ನವೀಕರಿಸಿ ಮರುಬಳಸಬಹುದಾದಂತಹ ವಸ್ತುಗಳ ಉತ್ಪಾದನೆಯನ್ನು ಕಡಿಮೆಗೊಳಿಸಲು ಮತ್ತು ಸುಸ್ಥಿರ ಜೀವನ ಪದ್ಧತಿಗಳನ್ನು ಅಳವಡಿಸಿಕೊಳ್ಳುವ ಮೂಲಕ ಪರಿಸರವನ್ನು ರಕ್ಷಿಸುವ ಉದ್ದೇಶದಿಂದ ಈ ಯೋಜನೆ ಅನುಷ್ಠಾನಗೊಳಿಸಲಾಗಿದೆ ಎಂದರು.

ಈಗಾಗಲೇ ಶಾಸಕ ಮಹಾಂತೇಶ ಕೌಜಲಗಿ ಅವರು ನಗರದ ಸಮಗ್ರ ಶ್ರೇಯೋಭಿವೃದ್ಧಿಗೆ ಸರ್ಕಾರದಿಂದ ನೂರಾರು ಕೋಟಿ ಅನುದಾನದಲ್ಲಿ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು ಅಲ್ಲದೇ ಪ್ರಮುಖ ರಸ್ತೆ ಅಭಿವೃದ್ಧಿ ಪಡಿಸಲಾಗಿದ್ದು ಒಳ ರಸ್ತೆಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದರು.

ಸದಸ್ಯರಾದ ಶ್ರೀಮತಿ ವಾಣಿಶ್ರೀ ಪತ್ತಾರ, ಮುಖ್ಯಾಧಿಕಾರಿ ವಿರಪ್ಪ ಹಸಬಿ, ಪರಿಸರ ಅಭಿಯಂತ ಆದಿಲಖಾನ ಪಠಾಣ ಮಾತನಾಡಿ, ನಮ್ಮ ಮನೆಯ ಸುತ್ತಮುತ್ತ ಒಂದು ಸುಂದರವಾದ ಪರಿಸರ ನಿರ್ಮಾಣವಾಗಬೇಕಾದರೆ ಕಸ, ಕಡ್ಡಿ, ತ್ಯಾಜ್ಯ ವಸ್ತುಗಳನ್ನು ಸಾವಜನಿಕ ಸ್ಥಳಗಳಲ್ಲಿ ಮನ ಬಂದತೆ ಎಸೆಯದೇ ಪುರಸಭೆ ಕಸದ ವಾಹನಕ್ಕೆ ನೀಡಿದಾಗ ಮಾತ್ರ ಇದು ಸಾಧ್ಯ ಎಂದರು.

ಉಪಾಧ್ಯಕ್ಷೆ ಲಕ್ಷ್ಮೀ ಬಡ್ಲಿ, ಸದಸ್ಯರಾದ ಬುಡ್ಡೆಸಾಬ ಶಿರಸಂಗಿ, ಅರ್ಜುನ ಕಲಕುಟಕರ, ಶ್ರೀಮತಿ ವಾಣಿಶ್ರೀ ಪತ್ತಾರ, ಶ್ರೀಮತಿ ಹೇಮಲತಾ ಹಿರೇಮಠ, ಶ್ರೀಮತಿ ಅಮೀರಬಿ ಬಾಗವಾನ, ಶ್ರೀಮತಿ ದಿಲಶಾದ ನದಾಫ, ಕಛೇರಿ ವ್ಯವಸ್ಥಾಪಕ ಎಮ್. ಐ. ಕುಟ್ರಿ, ಬಿ. ಆಯ್. ಗುಡಿಮನಿ, ಕಂದಾಯ ಅಧಿಕಾರಿ ಎ. ಎಮ್. ಮಾಜಿಕೊತವಾಲ, ಕಿರಿಯ ಆರೋಗ್ಯ ನಿರೀಕ್ಷಕ ಎಸ್. ಎನ್. ಪಾಟೀಲ, ಎ.ವಾಯ್. ಹೆಗಡೆ, ಪಿ.ಜಿ. ಅರ್ಕಸಾಲಿ, ಎಸ್. ಎಸ್. ನರಗುಂದ, ಡಿ. ಎ. ಖಲೀಫ್, ಬಿ. ಎ. ಖಾನಪ್ಪನವರ, ಶ್ರೀಮತಿ ಸಂತೋಷ ಪೋಳ, ಶ್ರೀಮತಿ ಸೋನಾಲಿ ಬುಬನಾಳೆ ಹಾಗೂ ಎನ್. ಎಸ್.ಎಸ್., ಎನ್.ಸಿ.ಸಿ. ವಿದ್ಯಾರ್ಥಿಗಳು ಮತ್ತು ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಲ್ಯಾಪಟಾಪ್‌ಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆಯ ಶೇ.29ರ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಸಣ್ಣ ಉದ್ದಿಮೆದಾರರಿಗೆ, ಸ್ವಯಂ ಉದ್ಯೋಗಕ್ಕಾಗಿ ಸಹಾಯಧನ ಹಾಗೂ ಬಿ.ಇ, ಎಂ.ಬಿ.ಎಸ್ ಮೊದಲನೇ/ ಮೂರನೇ ವರ್ಷದಲ್ಲಿ ಒದುತ್ತಿರುವ ವಿದ್ಯಾರ್ಥಿಗಳಿಗೆ ಲ್ಯಾಪಟಾಪ್ ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಬೆಳಗಾವಿ ಮಹಾನಗರ ಪಾಲಿಕೆಯ ಬಡತನ ನಿರ್ಮೂಲನಾ ಕೋಶಕ್ಕೆ ಸಂಪರ್ಕಿಸಬೇಕೆಂದು ಬೆಳಗಾವಿ ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಿವುಡು ಮಕ್ಕಳ ಸರ್ಕಾರಿ ಶಾಲೆ: ಅರ್ಹ ವಿದ್ಯಾರ್ಥಿನಿಯರಿಂದ ಅರ್ಜಿ ಅಹ್ವಾನ

ಬೆಳಗಾವಿ: ಕರ್ನಾಟಕ ಸರ್ಕಾರದ, ವಿಕಲಚೇತನರ ಹಾಗೂ ಹಿರಿಯನಾಗರಿಕರ ಸಬಲೀಕರಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ, ಬೆಳಗಾವಿ ವಿದ್ಯಾಗಿರಿಯ ಕಿವುಡು ಮಕ್ಕಳ ಸರ್ಕಾರಿ ಶಾಲೆ ಆಜಮ್ ನಗರ । ನೇ ಕ್ರಾಸ್ ಇಲ್ಲಿ 2023–24 ನೇ ಶೈಕ್ಷಣಿಕ ವರ್ಷಕ್ಕೆ 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಉಚಿತ ಪ್ರವೇಶಕ್ಕಾಗಿ ಅರ್ಹ ವಿದ್ಯಾರ್ಥಿನಿಯರಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

**ಪ್ರವೇಶ ಪಡೆಯಲು ಇರಬೇಕಾದ ಅರ್ಹತೆಗಳು:**

ಕಿವುಡು ಮತ್ತು ಮೂಗು ಬಾಲಕಿಯರಿಗೆ (ಹೆಣ್ಣು ಮಕ್ಕಳು) ಗೆ ಮಾತ್ರ ಪ್ರವೇಶ, ಸೂಕ್ತ ಪ್ರಾಧಿಕಾರ, ಮಂಡಳಿಯಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರ ಹೊಂದಿರಬೇಕು.

ಜನ್ಮ ದಿನಾಂಕ ದೃಢೀಕರಣ ಪತ್ರ ಅಥವಾ ಬೇರೆ ಶಾಲೆಯಲ್ಲಿ ಓದುತ್ತಿದ್ದರೆ, ಶಾಲಾ ವರ್ಗಾವಣೆ ಪ್ರಮಾಣ ಪತ್ರ, ರಹವಾಸಿ/ ವಾಸಸ್ಥಳ ದೃಢೀಕರಣ ಪತ್ರ ಅಥವಾ ಆಧಾರ ಕಾರ್ಡ ಮತ್ತು ಜಾತಿ/ಆದಾಯ ಪ್ರಮಾಣ ಪತ್ರ ಮತ್ತು

ಬ್ಯಾಂಕ ಅಕೌಂಟ್ (ಮಕ್ಕಳ ಹೆಸರಿಗಿರುವ ಬ್ಯಾಂಕ್ ಖಾತೆ ವಿವರಗಳು) ಹಾಗೂ ಇತ್ತೀಚಿನ 05 ಪಾಸ್‌ಪೋರ್ಟ ಅಳತೆಯ ಭಾವ ಚಿತ್ರಗಳು (ಫೋಟೋ) ಹೊಂದಿರಬೇಕು.

ಪ್ರವೇಶಕ್ಕಾಗಿ ಅರ್ಜಿಗಳನ್ನು ಜೂನ್ 15 2023 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಅಧೀಕ್ಷಕರವರ ಕಚೇರಿ, ಕಿವುಡು ಮಕ್ಕಳ ಸರ್ಕಾರಿ ಶಾಲೆ, ಬೆಳಗಾವಿ–10, ಅಥ–'ವಾ ದೂರವಾಣಿ ಸಂಖ್ಯೆ 9901073686, 9663711081 ಗೆ ಸಂಪರ್ಕಿಸಬಹುದು ಎಂದು ಕಿವುಡ ಮಕ್ಕಳ ಸರಕಾರಿ ಶಾಲೆಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಿವುಡು ಮಕ್ಕಳ ಶಾಲೆ: ಅಂಶಕಾಲಿಕ ಶಿಕ್ಷಕರ ನೇಮಕಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಇಲ್ಲಿನ ಕಿವುಡ ಮಕ್ಕಳ ಸರಕಾರಿ ಶಾಲೆಗೆ ಪದವೀಧರ ಸಹಾಯಕ ಶಿಕ್ಷಕರನ್ನು ಅಂಶಕಾಲಿಕವಾಗಿ ಮಾಸಿಕ ಗೌರವಧನ ಗರಿಷ್ಠ ರೂ: 6,000/– (ಆರು ಸಾವಿರ ) ರಂತೆ ಭೋಧನೆ ಮಾಡಲು ಒಟ್ಟು 3 (ಮೂರು) ಅಭ್ಯರ್ಥಿಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಶ್ರವಣ ದೋಷವುಳ್ಳ ಮಕ್ಕಳಿಗೆ ಪಾಠ ಮಾಡಲು ವಿಶೇಷ ಶಿಕ್ಷಣ/ ತರಬೇತಿ ಹೊಂದಿರುವವರಿಗೆ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು.

ಆಸಕ್ತರು ಮೇ 30, 2023 ರ ಒಳಗಾಗಿ "ಅಧೀಕ್ಷಕರು ಕಿವುಡ ಮಕ್ಕಳ ಸರಕಾರಿ ಶಾಲೆ ಅಜಮ ನಗರ, ವಿದ್ಯಾಗಿರಿ ಬೆಳಗಾವಿ–590010" ಇವರಿಗೆ ಅಗತ್ಯ ದೃಢೀಕೃತ ದಾಖಲಾತಿಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅಥವಾ ಅಂಚೆ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:–9901073686 ಅಥವಾ 9663711081 ಸಂಪರ್ಕಿಸಬಹುದಾಗಿದೆ ಎಂದು ಕಿವುಡ ಮಕ್ಕಳ ಸರಕಾರಿ ಶಾಲೆಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳಗಾವಿ: ವಿದ್ಯುತ್ ತಂತಿ ತಗುಲಿ 13ರ ಬಾಲಕಿ ಸಾವು



ಬೆಳಗಾವಿ: ಮನೆ ಮುಂದಿನ ಹೈಟೆನ್ಷನ್ ತಂತಿ ತಗುಲಿ 13 ವರ್ಷದ ಬಾಲಕಿ ಸ್ಥಳದಲ್ಲೇ ಸಾವನ್ನಪ್ಪಿದ ಘಟನೆ ಬೆಳಗಾವಿ ಜಿಲ್ಲೆಯ ಮಚ್ಛೆ ಗ್ರಾಮದಲ್ಲಿ ನಡೆದಿದೆ.


ಮಧುರಾ ಮೋರೆ (13) ಮೃತಪಟ್ಟ ಬಾಲಕಿ. ತನ್ನ ಮನೆಯ ಒಂದನೇ ಮಹಡಿಯ ಮೇಲೆ ಆಟ ಆಡುತ್ತಿದ್ದ ಸಂದರ್ಭ ಹೈಟೆನ್ಷನ್ ವಯರ್ ತಾಗಿ ಬಾಲಕಿ ಸ್ಥಳದಲ್ಲೇ ಮೃತಪಟ್ಟಿದ್ದಾಳೆ.

ಹೈಟೆನ್ಷನ್ ತಂತಿ ಇದ್ದ ಹಿನ್ನೆಲೆ ಮನೆ ಕಟ್ಟದಂತೆ ಮೋರೆ ಕುಟುಂಬಕ್ಕೆ ಹೆಸ್ಕಾಂ ಮೊದಲೇ ನೋಟಿಸ್ ನೀಡಿತ್ತು.

ಹೆಸ್ಕಾಂ ನೋಟಿಸ್ ನೀಡಿದ್ದರೂ ಸಹಿತ ಅದನ್ನು ನಿರ್ಲಕ್ಷ್ಯ ಮಾಡಿ ಮೋರೆ ಕುಟುಂಬ ಮನೆ ನಿರ್ಮಿಸಿದ್ದರು. ಘಟನೆಯ ನಂತರ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಒಳಪಡಿಸಲಾಗಿದೆ.

ಬಳಿಕ ಕುಟುಂಬಸ್ಥರಿಗೆ ಶವವನ್ನು ಹಸ್ತಾಂತರಿಸಲಾಗಿದ್ದು, ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ. ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಾಲಬಾಧೆ ತಾಳಲಾರದೆ ರೈತ ಆತ್ಮಹತ್ಯೆ



ಯಾದಗಿರಿ: ಸಾಲಬಾಧೆ ತಾಳಲಾರದೆ ಮನನೊಂದು ರೈತನೋರ್ವ ನೇಣು ಬಿಗಿದು ಆತ್ಮಹತ್ಯೆಗೆ ಶರಣಾದ ಘಟನೆ ಯಾದಗಿರಿಯಲ್ಲಿ ನಡೆದಿದೆ.

ಜಿಲ್ಲೆಯ ಹುಣಸಗಿ ತಾಲೂಕಿನ ಕನ್ನೆಳ್ಳಿ ಗ್ರಾಮದಲ್ಲಿ ಈ ಘಟನೆ ನಡೆದಿದ್ದು, ಅಮರಣ್ಣ ಕುಂಬಾರ (60) ಆತ್ಮಹತ್ಯೆಗೆ ಶರಣಾದ ರೈತ. ಇವರು ಬ್ಯಾಂಕ್ ಹಾಗೂ ಖಾಸಗಿ ಸೇರಿದಂತೆ 10 ಲಕ್ಷಕ್ಕೂ ಅಧಿಕ ಹಣವನ್ನು ಸಾಲಮಾಡಿದ್ದರು. ಅಲ್ಲದೇ ಬೆಳೆ ಸರಿಯಾಗಿ ಬಾರದೇ ಸಾಲ ತೀರಿಸಲು ಪರದಾಡುತ್ತಿದ್ದರು. ಹೀಗಾಗಿ ತನ್ನ 8 ಎಕರೆ ಜಮೀನನ್ನು ಖಾಸಗಿಯವರಿಗೆ ಸಾಲಕ್ಕೆ ಬರೆದುಕೊಟ್ಟಿದ್ದರು.

ಇದರಿಂದ ಮನನೊಂದ ಅವರು, ಮನೆಯಲ್ಲಿ ಯಾರೂ ಇಲ್ಲದ ವೇಳೆ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಕುರಿತು ಸುರಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮೇ.25 ರಂದು ತೋಟಗಾರಿಕೆ ತರಬೇತಿ ಸಂದರ್ಶನ

ಬೆಳಗಾವಿ: 2023–24 ನೇ ಸಾಲಿಗೆ ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಹಿಡಕಲ್ ಡ್ಯಾಂ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 10 ತಿಂಗಳ ತೋಟಗಾರಿಕೆ ತರಬೇತಿಗಾಗಿ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮೇ.25, 2023 ರಂದು ಬೆಳಿಗ್ಗೆ 11 ಗಂಟೆಗೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾವ), ಚನ್ನಮ್ಮ ವೃತ್ತ, ಬೆಳಗಾವಿ ರವರ ಕಛೇರಿಯಲ್ಲಿ ಮೂಲ ದಾಖಲಾತಿಗಳೊಂದಿಗೆ ನೇರವಾಗಿ ಸಂದರ್ಶನಕ್ಕೆ ಹಾಜರಾಗಬೇಕು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089